ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

KB 12 YEARS 2013

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 222
26-2-2025 ಬುಧವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 222

## ಇ ಸ್ವತ್ತು ನಿಗದಿತ ಸಮಯದಲ್ಲಿ ನೀಡಿ

**ದಾವಣಗೆರೆ:** ಕಂದಾಯ ಶಾಖೆಯಲ್ಲಿ ಕೆಲಸ ನಿರ್ವಹಿಸುತ್ತಿರುವ



ಎಲ್ಲಾ ಸಿಬ್ಬಂದಿಗಳಿಗೆ ತಿಳಿಯಪಡಿಸುವುದೇನೆಂದರೆ ಸರ್ಕಾರದ ಆದೇಶದಂತೆ ಇ ಸ್ವತ್ತು ಮತ್ತು ಬಿ ಖಾತೆ ನಿಗದಿತ ಸಮಯದಲ್ಲಿ ಪೂರ್ಣಗೊಳಿಸಬೇಕಾಗಿರುವುದರಿಂದ ತಮ್ಮ ತಮ್ಮ ಸ್ಟೇಟಸ್ ನಲ್ಲಿ ನಮ್ಮದೇ ಇಲಾಖೆಯ ಸಾರ್ವಜನಿಕ ಉಪಯೋಗವಾಗುವಂತೆ ಮಾಹಿತಿಯನ್ನು ಸಾರ್ವಜನಿಕರಿಗೆ ತಲುಪಿಸಬೇಕಾಗಿರುವುದರಿಂದ ತಪ್ಪದೇ ಎಲ್ಲಾ ಅಧಿಕಾರಿ ಸಿಬ್ಬಂದಿಗಳು ಈ ಖಾತೆ ಅಭಿಯಾನದ ಪ್ರಕಟಣೆಯ ಕರ ಪತ್ರವನ್ನು ತಮ್ಮ ಸ್ಟೇಟಸ್ ನಲ್ಲಿ ಹಾಕಿ.

**–ಪ್ರಭಾ ಮಲ್ಲಿಕಾರ್ಜುನ್, ಸಂಸದರು.**

## ಉತ್ತಮವಾಗಿ ಪಕ್ಷದ ಕೆಲಸ ಮಾಡುವವರಿಗೆ ಜವಾಬ್ದಾರಿ ನೀಡುವುದಾಗಿ ಡಿಕೆಶಿ ಹೇಳಿಕೆ

**ಬೆಂಗಳೂರು, ಫೆ.25:** ತಾಲೂಕು ಮಟ್ಟದಲ್ಲಿ ಹಗಲಿರುಳು ಶ್ರಮಿಸುವವರಿಗೆ ಮಾತ್ರ ಪಕ್ಷದ ಜವಾಬ್ದಾರಿ ವಹಿಸಲಾಗುವುದು. ನಾಯಕರ ಹಿಂದೆ ಗಿರಕಿ ಹೊಡೆಯುವವರನ್ನು ನೇಮಿಸಿ ಪ್ರಯೋಜನವಿಲ್ಲ" ಎಂದು ಕೆಪಿಸಿಸಿ ಅಧ್ಯಕ್ಷರೂ ಆದ ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು ನಮಗೆ ಕೆಲಸ ಮಾಡುವವರು ಬೇಕು. ಅವರಿಗೆ ಜವಾಬ್ದಾರಿ ಕೊಟ್ಟರೆ ತಕ್ಕ ಫಲಿತಾಂಶ ಬರಬೇಕು. ನಮ್ಮ ಸುತ್ತ ಗಿರಿ ಗಿಟ್ಲೆಯಂತೆ ಸುತ್ತುತ್ತಿದ್ದರೆ ಆಗುವುದಿಲ್ಲ. ತಾಲೂಕಿನಲ್ಲಿ ಕೂತು, ಅಲ್ಲಿರುವ ಸಮಸ್ಯೆ ಬಗೆಹರಿಸಬೇಕು. ಫಲಿತಾಂಶ ಬರುವ ನಾಯಕತ್ವಕ್ಕೆ ಮಾತ್ರ ಆದ್ಯತೆ ನೀಡಲಾಗುವುದು" ಎಂದು ಹೇಳಿದರು.

ಪದಾಧಿಕಾರಿಗಳ ಪಟ್ಟಿ ಸಿದ್ಧವಾಗಿದ್ದು, ಯಾರಿಗೆ ಆಸಕ್ತಿ ಇಲ್ಲ ಅವರ ಜಾಗಕ್ಕೆ ಬೇರೆಯವರನ್ನು ನೇಮಿಸಲಾಗುವುದು. ಪಕ್ಷ ಸಂಘಟನೆ ವಿಚಾರದಲ್ಲಿ ನಮಗೆ ದಿನವಿಡೀ ಸ್ಥಳೀಯ ಮಟ್ಟದಲ್ಲಿ ಕೆಲಸ ಮಾಡುವವರು ಬೇಕು. ಬೇರೆಯವರ ಒತ್ತಡದ ಮೇರೆಗೆ ನೇಮಕ ಮಾಡಿಕೊಂಡು ಸಮಯ ವ್ಯರ್ಥ ಮಾಡುವುದರಲ್ಲಿ ಪ್ರಯೋಜನವಿಲ್ಲ ಎಂದರು.

ಕೆಲಸ ಮಾಡುವವರಿಗೆ ಅವಕಾಶ ನೀಡಿ ಎಂದು ಎಐಸಿಸಿ ಆದೇಶ ನೀಡಿದೆ. ಈ ವಿಚಾರವಾಗಿ ನಾವು ವರದಿ ತರಿಸಿಕೊಂಡಿದ್ದು, ಸರಿಯಾಗಿ ಕೆಲಸ ಮಾಡುವವರಿಗೆ ಜವಾಬ್ದಾರಿ ನೀಡಲಾಗುವುದು. ಮೀಸಲಾತಿ ಹಿನ್ನೆಲೆಯಲ್ಲಿ ಮಹಿಳೆಯರಿಗೆ ಆದ್ಯತೆ ನೀಡಿ ಅವರನ್ನು ತಯಾರಿ ಮಾಡಲಾಗುತ್ತಿದೆ. ಈ ವಿಚಾರವಾಗಿ ಮಂತ್ರಿಗಳ ಅಭಿಪ್ರಾಯ ಪಡೆಯುತ್ತಿದ್ದು, ಈ ವಾರವೇ ಈ ಪಟ್ಟಿ ಅಂತಿಮಗೊಳಿಸಲಾಗುವುದು" ಎಂದು ಹೇಳಿದರು.

## ಫೆ. 26 ಮಹಾಶಿವರಾತ್ರಿ: ಪ್ರಾಣಿ ವಧೆ ನಿಷೇಧ

**ಚಿಕ್ಕಮಗಳೂರು: ಫೆ. 25:** ಫೆಬ್ರವರಿ 26 ರಂದು ಮಹಾಶಿವರಾತ್ರಿ ಹಬ್ಬದ ಪ್ರಯುಕ್ತ ಚಿಕ್ಕಮಗಳೂರು ನಗರ ಸಭೆ ವ್ಯಾಪ್ತಿಯಲ್ಲಿ ಇರುವ ಕೋಳಿ, ಕುರಿ, ಮೀನು, ಮಾಂಸ ಮಾರಾಟಗಾರರು ಹಾಗೂ ಮಾಂಸಹಾರಿ ಹೋಟೆಲ್ ಮತ್ತು ರೆಸ್ಟೋರೆಂಟ್ ಮಾಲೀಕರು ಕಡ್ಡಾಯವಾಗಿ ಪ್ರಾಣಿ ವಧೆ ಹಾಗೂ ಮಾಂಸ ಮಾರಾಟ ಮಾಡುವುದನ್ನು ನಿಷೇಧಿಸಿದೆ ಹಾಗೂ ಕೋಳಿ, ಕುರಿ, ಮೀನು, ಮಾಂಸ ಮಾರಾಟಗಾರರು ಮತ್ತು ಮಾಂಸಹಾರಿ ಹೋಟೆಲ್‌ಗಳನ್ನು ತೆರೆಯಬಾರದೆಂದು, ತಪ್ಪಿದಲ್ಲಿ ಅಂತಹ ಮಾಂಸ ಮಾರಾಟ ಮಾಡುವವರ ಮತ್ತು ಮಾಂಸಹಾರಿ ಹೋಟೆಲ್‌ಗಳ ವಿರುದ್ಧ ಕಾನೂನು ರೀತ್ಯಾ ಕ್ರಮ ಜರುಗಿಸಲಾಗುವುದೆಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಾಹನಗಳ ಮಾರ್ಗ ಬದಲಾವಣೆ

**ಶಿವಮೊಗ್ಗ :** ಫೆ. 26 ಮತ್ತು 27 ರಂದು ಶಿವಮೊಗ್ಗ ನಗರದ ಹರಕೆರೆ ಗ್ರಾಮದಲ್ಲಿ ಶ್ರೀ ರಾಮೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಶಿವರಾತ್ರಿ ಹಬ್ಬದ ನಿಮತ್ತ ಜಾತ್ರೆ ನಡೆಯಲಿದ್ದು, ಫೆ. 26 ರ ಬೆಳಗ್ಗಿನ ಜಾವ 4 ರಿಂದ 27ರ ಬೆಳಗಿನ ಜಾವದವರೆಗೆ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾದಿಗಳು ಬಂದು ಹೋಗುವ ಕಾರಣ ಹಾಗೂ ಸೂಳೆಬೈಲು ಬೆಟ್ಟದ ಮಲ್ಲೇಶ್ವರ ದೇವಾಲಯಕ್ಕೂ ಭಕ್ತಾದಿಗಳು ಆಗಮಿಸುವುದರಿಂದ ಈ ಕೆಳಗಿನಂತೆ ತಾತ್ಕಾಲಿಕವಾಗಿ ವಾಹನಗಳಿಗೆ ಮಾರ್ಗ ಬದಲಾವಣೆ ಮಾಡಲು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅಧಿಸೂಚನೆ ಹೊರಡಿಸಿ ಆದೇಶ ನೀಡಿದ್ದಾರೆ.

ಶಿವಮೊಗ್ಗದಿಂದ ತೀರ್ಥಹಳ್ಳಿ ಮಾರ್ಗವಾಗಿ ಓಡಾಡುವ ವಾಹನಗಳನ್ನು ಗಜಾನನ ಗ್ಯಾರೇಜ್ ಪಕ್ಕದ ರಸ್ತೆಯಲ್ಲಿ ಹೋಗಿ ರಾಮಿನಕೊಪ್ಪ ಚಾನಲ್ ಮಾರ್ಗವಾಗಿ ಎನ್. ಹೆಚ್. ಆಸ್ಪತ್ರೆ ಪಕ್ಕದ ರಸ್ತೆಗೆ ಬಂದು ಸೇರುವುದು.

ತೀರ್ಥಹಳ್ಳಿಯಿಂದ ಶಿವಮೊಗ್ಗಕ್ಕೆ ಬರುವ ಎಲ್ಲಾ ವಾಹನಗಳು ಎನ್. ಹೆಚ್. ರಸ್ತೆಯ ಪಕ್ಕದ ರಸ್ತೆಯ ಮೂಲಕ ರಾಮಿನಕೊಪ್ಪ ಚಾನಲ್ ಕ್ರಾಸ್ ನಿಂದ ಗಜಾನನ ಗ್ಯಾರೇಜ್ ಮೂಲಕ ಬಂದು ಶಿವಮೊಗ್ಗ ಸೇರುವುದು.

## ಕಡು ಬಡವರಿಗೆ ಮಾತ್ರ ಗ್ಯಾರಂಟಿ ಯೋಜನೆ ನೀಡಲು ಪರಿಶೀಲನೆ

**ಬೆಂಗಳೂರು, ಫೆ.25:** ವಿಧಾನಸಭೆ ಚುನಾವಣೆಯ ಸಮಯದಲ್ಲಿ ಕಾಂಗ್ರೆಸ್ ಪಕ್ಷ ನೀಡಿದ ಭರವಸೆಯಂತೆ ರಾಜ್ಯ ಸರ್ಕಾರ ಜಾರಿಗೊಳಿಸಿರುವ ಪಂಚ ಗ್ಯಾರಂಟಿಗಳ ಪುನರ್ ಪರಿಶೀಲನೆಗೆ ಚಿಂತನೆ ನಡೆಸಿದೆ.

ಗೃಹ ಜ್ಯೋತಿ ಗೃಹಲಕ್ಷ್ಮಿ, ಅನ್ನಭಾಗ್ಯ ಸೇರಿದಂತೆ ಪಂಚ ಗ್ಯಾರಂಟಿಗಳನ್ನು ಅಗತ್ಯವಿರುವ ಅದರಲ್ಲೂ ಬಿಪಿಎಲ್ ಕುಟುಂಬದವರಿಗೆ ಮಾತ್ರ ನೀಡುವ ಕುರಿತಂತೆ ಚರ್ಚೆ ನಡೆಸಿದ್ದು, ಮುಂಬರುವ ಬಜೆಟ್ ನಲ್ಲಿ ಈ ಬಗ್ಗೆ ಸ್ಪಷ್ಟ ನಿರ್ಧಾರ ಹೊರಬೀಳಲಿದೆ ಎನ್ನಲಾಗುತ್ತಿದೆ

ಈ ಕುರಿತಂತೆ ಸುಳಿವು ನೀಡಿರುವ ಗೃಹಮಂತ್ರಿ ಡಾ. ಜಿ. ಪರಮೇಶ್ವರ್ ರಾಜ್ಯದಲ್ಲಿ ಸ್ವಯಂಪ್ರೇರಿತವಾಗಿ ಅನೇಕ ಜನ ಗ್ಯಾರಂಟಿ ಯೋಜನೆಗಳನ್ನು ಬಿಡುತ್ತಿದ್ದಾರೆ. ಆದಾಯ ತೆರಿಗೆ ಪಾವತಿಸುವವರು, ಸರ್ಕಾರಿ ನೌಕರರು ಸೇರಿದಂತೆ ಬಹಳಷ್ಟು ಜನ ಬಿಟ್ಟಿದ್ದಾರೆ ಎಂದು ತಿಳಿಸಿದರು

ಗ್ಯಾರಂಟಿ ಯೋಜನೆಗಳ ಪರಿಷ್ಕರಣೆ ಅಗತ್ಯತೆಯ ಬಗ್ಗೆ ಚರ್ಚೆ ಮಾಡಬೇಕು. ನಂತರ ಏನೆಂಬುದು ಗೊತ್ತಾಗಲಿದೆ. ಸಾಧಕ–ಬಾಧಕಗಳನ್ನು ಚರ್ಚಿಸಬೇಕು.

# ಬಿಲ್ವಪ್ರಿಯ ಶಿವನ ಆರಾಧನೆಗೆ ಸಜ್ಜಾಗಿದೆ ನಗರಿ

**–ದೇವಿಕ ಸುನೀಲ್**

**ದಾವಣಗೆರೆ:** ಪ್ರತಿ ವರ್ಷ ಶಿಶಿರ ಋತು, ಮಾಘ ಮಾಸದ ಕೃಷ್ಣಪಕ್ಷ ಚತುರ್ದಶಿಯಂದು ಹಿಂದೂಗಳ ಪ್ರಮುಖ ಹಬ್ಬಗಳಲ್ಲಿ ಒಂದಾದ ಶಿವರಾತ್ರಿಯನ್ನು ಆಚರಿಸುತ್ತಾ ಬರುತ್ತಿದ್ದು, ಫೆ.26 ಬುಧವಾರವಾದ ಇಂದು, ಶಿವರಾತ್ರಿ ಆಚರಣೆಗೆ ಶೈವಾರಾಧಕರೇ ಹೆಚ್ಚು ನೆಲೆಸಿರುವ ದಾವಣಗೆರೆ ನಗರ ಸಜ್ಜಾಗಿದೆ.

ಶಿವರಾತ್ರಿ ಆಚರಣೆ ಕುರಿತು ಸ್ಕಂದ ಪುರಾಣ, ಶಿವಪುರಾಣದಲ್ಲಿ ಅದರದೇ ಆದ ವ್ಯಾಖ್ಯಾನಗಳಿವೆ. ಶಿವನು ಪಾರ್ವತಿ ದೇವಿಯನ್ನು ವಿವಾಹವಾದ ದಿನವೇ ಶಿವರಾತ್ರಿಯಾಗಿ ಆಚರಿಸಲಾಗುತ್ತದೆ ಎಂದು ಸ್ಕಂದ ಪುರಾಣದಲ್ಲಿ ಹೇಳಲಾಗಿದೆ ಎಂದರೇ, ಮತ್ತೊಂದೆಡೆ ಸಮುದ್ರ ಮಂಥನದ ವೇಳೆ ಹಾಲಾಹಲ ಹೊರಬಂದಾಗ ಶಿವನು ಅದನ್ನು ಕುಡಿದುಬಿಟ್ಟ. ಆಗ ವಿಷ ಗಂಟಲಿನಿಂದ ಕೆಳಗೆ ಇಳಿಯದಂತೆ ಪಾರ್ವತಿ ದೇವಿ ಇಡೀ ರಾತ್ರಿ ತಡೆದಳು. ಆ ದಿನವನ್ನು ಶಿವರಾತ್ರಿಯಾಗಿ ಆಚರಿಸಲಾಗುತ್ತದೆ ಎಂದು ಶಿವಪುರಾಣದಲ್ಲಿ ಅರುಹಲಾಗಿದೆ.

ಪುರಾಣದ ಪ್ರಕಾರ ಭಗೀರಥನ ತಪಸ್ಸಿಗೆ ಮೆಚ್ಚಿ ಇಳೆಗೆ ಇಳಿದು ಬಂದ ಗಂಗೆಯನ್ನು ಶಿವ ತನ್ನ ಜಡೆಯಲ್ಲಿ ತುಂಬಿಸಿಕೊಂಡಿದ್ದ. ಇದರಿಂದ ವಿಚಲಿತನಾದ ಭಗೀರಥ ಗಂಗೆಯನ್ನು ಭೂಮಿಗೆ ಹರಿಸುವಂತೆ ಶಿವನನ್ನು ಪ್ರಾರ್ಥಿಸಿದ. ಆತನ ಭಕ್ತಿಗೆ ಮೆಚ್ಚಿ ಶಿವ ಗಂಗೆಯನ್ನು ಹರಿಯಬಿಟ್ಟ ದಿನವೇ ಶಿವರಾತ್ರಿ ಎನ್ನಲಾಗುತ್ತದೆ.



ಇದಲ್ಲದೆ, ಶಿವನ ಆದಿ ಮತ್ತು ಅಂತ್ಯ ಹುಡುಕಲು ಹೊರಟ ವಿಷ್ಣು ಹಾಗೂ ಬ್ರಹ್ಮನಿಗೆ, ಶಿವರಾತ್ರಿಯಂದು ಶಿವ ಲಿಂಗರೂಪಿಯಾಗಿ ದರ್ಶನ ನೀಡಿದ ಎಂಬುದು ಕೂಡ ಪ್ರತೀತಿ. ಶಿವರಾತ್ರಿಯಂದು ಆಚರಿಸುವ ಜಾಗರಣೆಗೂ ಒಂದು ಕಥೆಯಿದೆ. ಮಾಘ ಬಹುಳ ಚತುರ್ದಶಿಯ ರಾತ್ರಿಯೇ ಶಿವ ಪಾರ್ವತಿಯನ್ನು ವಿವಾಹವಾದರು. ದೇವಾನು ದೇವತೆಗಳೆಲ್ಲರ ಗಿರಿಜಾ ಕಲ್ಯಾಣ ವೀಕ್ಷಿಸಿ, ಶಿವಪಾರ್ವತಿಯರಿಬ್ಬರನ್ನೂ ಪೂಜಿಸಿದರಂತೆ. ಹೀಗಾಗಿಯೇ ಜಾಗರಣೆ ಪದ್ಧತಿ ಆಚರಣೆಗೆ ಬಂದಿದೆ ಎನ್ನಲಾಗುತ್ತದೆ.

ಮಹಾ ಶಿವರಾತ್ರಿಯಂದು ಬೆಳಿಗ್ಗೆ ಎದ್ದು, ಸ್ನಾನ ಮಾಡಿ, ಶುಭ್ರ ವಸ್ತ್ರಗಳನ್ನು ಧರಿಸಿ, ಉಪವಾಸ ಆಚರಿಸಲಾಗುತ್ತದೆ. ಹತ್ತಿರದ ಶಿವಾಲಯಗಳಿಗೆ ತೆರಳಿ ಶಿವನ ದರ್ಶನ ಮಾಡಿ ಪುನೀತರಾಗುತ್ತಾರೆ.



### ಹಣ್ಣುಗಳ ಖರೀದಿ ಜೋರು...

ಉಪವಾಸದ ಹಬ್ಬವಾದ ಶಿವರಾತ್ರಿಯಂದು ಒಪ್ಪತ್ತು ಇರುವವರು, ಹಣ್ಣುಹಂಪಲುಗಳ ಮೊರೆ ಹೋಗುತ್ತಾರೆ. ಬಿಸಿಲ ಝಳಕ್ಕೆ ಹಿತವೆನಿಸುವ ಕಲ್ಲಂಗಡಿ, ಕರಬೂಜ, ಕಿತ್ತಳೆ ಹಣ್ಣುಗಳಿಗೆ ಬೇಡಿಕೆ ಹೆಚ್ಚಿದ್ದು, ಜೊತೆಗೆ ಬಾಳೇಹಣ್ಣು, ಸೇಬು, ದ್ರಾಕ್ಷಿ ಹಣ್ಣುಗಳಲ್ಲದೆ, ಶಿವನಿಗೆ ಪ್ರಿಯವಾದ ಬಿಲ್ವಪತ್ರೆ, ವಿವಿಧ ರೀತಿಯ ಹೂವುಗಳ ಖರೀದಿಗೆ ಜನರು ಮಾರುಕಟ್ಟೆಗೆ ಲಗ್ಗೆ ಇಟ್ಟಿದ್ದಾರೆ.

ಓಂ ನಮಃ ಶಿವಾಯ ಮಂತ್ರವನ್ನು ಪಠಿಸುವ ಮೂಲಕ ಪಾರ್ವತಿ ರಮಣನ ನಾಮಸ್ಮರಣೆಗೆ ಮುಂದಾಗುತ್ತಾರೆ. ಸಂಜೆ ಮನೆಯಲ್ಲಿ ಶಿವಲಿಂಗಕ್ಕೆ ಅಭಿಷೇಕ ಮಾಡಿ, ಅವನಿಗೆ ಪ್ರಿಯವಾದ ತುಂಬೆ ಹೂ, ಬಿಲ್ವಪತ್ರೆ ಅರ್ಪಿಸಿ ಕೃತಾರ್ಥರಾಗುತ್ತಾ–ರೆ. ಶಿವಧ್ಯಾನದೊಂದಿಗೆ ರಾತ್ರಿ ಜಾಗರಣೆ ಮಾಡುವ ಭಕ್ತರು ತಮ್ಮ ತಮ್ಮ ಕಷ್ಟಗಳನ್ನು ಪರಿಹರಿಸುವಂತೆ ಕೋರುತ್ತಾರೆ.

ದಾವಣಗೆರೆಯ ಶಿವಾಲಯಗಳನ್ನು ಸುಣ್ಣ ಬಣ್ಣ ಬಳಿದು, ತಳಿರು ತೋರಣಗಳಿಂದ ಅಲಂಕರಿಸಲಾಗಿದೆ. ಶ್ರೀ ಲಿಂಗೇಶ್ವರ ದೇವಸ್ಥಾನ, ಪಾತಾಳಲಿಂಗೇಶ್ವರ, ಕಾಶಿ ವಿಶ್ವನಾಥ ಮಂದಿರ, ಮಾರ್ಕಂಡೇಶ್ವರ ದೇವಸ್ಥಾನ, ಶಂಕರ ಮಠ, ಶ್ರೀ ಕನ್ನಿಕಾ ಪರಮೇಶ್ವರಿ ದೇವಸ್ಥಾನದಲ್ಲಿರುವ ನಗರೇಶ್ವರ ಸ್ವಾಮಿ ಸೇರಿದಂತೆ ಅನೇಕ ದೇವಾಲಯಗಳಲ್ಲಿ ಈಶ್ವರನಿಗೆ ವಿಶೇಷ ಪೂಜೆ, ಅಲಂಕಾರಗಳನ್ನು ಜರುಗುತ್ತಿದ್ದು, 4 ಯಾಮದ ಪೂಜೆಗಳು, ಪಂಚಾಮೃತ ಅಭಿಷೇಕ, ರುದ್ರಾಭಿಷೇಕವನ್ನು ನೆರವೇರಿಸಲಾಗುತ್ತಿದೆ.

### ಶಿವರಾತ್ರಿ ನಿಮಿತ್ತ ಸಾಂಸ್ಕೃತಿಕ ಸೌರಭ

ಶಿವರಾತ್ರಿ ಜಾಗರಣೆ ನಿಮಿತ್ತ 'ನಮನ ಅಕಾಡೆಮಿ' ಯಿಂದ ಇಂದು ರಾತ್ರಿ 9.30 ಕ್ಕೆ ರಿಂಗ್ ರಸ್ತೆಯಲ್ಲಿರುವ ಶ್ರೀ ಶಾರದಾಂಬ ದೇವಸ್ಥಾನದಲ್ಲಿ, ರಾತ್ರಿ 11 ಗಂಟೆಗೆ ಶ್ರೀ ಲಿಂಗೇಶ್ವರ ದೇವಸ್ಥಾನ, 12.30 ಕ್ಕೆ ಜಯದೇವ ವೃತ್ತದಲ್ಲಿರುವ ಶಂಕರ ಮಠದಲ್ಲಿ ಹಾಗೂ ರಾತ್ರಿ 2 ಗಂಟೆಗೆ ವಿದ್ಯಾನಗರ ಶ್ರೀ ಶಿವ ಪಾರ್ವತಿ ದೇವಸ್ಥಾನದಲ್ಲಿ 'ಶಿವಸ್ಮರಣೆ ನೃತ್ಯ ಜಾಗರಣೆ' ಹೆಸರಿನಡಿ 11 ನೃತ್ಯ ಪಟುಗಳು ನೃತ್ಯ ಸೇವೆ ಸಲ್ಲಿಸುತ್ತಿದ್ದಾರೆ.

ಎಸ್.ಎಸ್. ಬಡಾವಣೆಯ ಅಥಣಿ ಕಾಲೇಜು ಆವರಣದಲ್ಲಿರುವ ಶಿವಮೂರ್ತಿಯ ಮುಂದೆ ವಿನಾಯಕ ಎಜುಕೇಷನ್ ಟ್ರಸ್ಟ್ ಅಥಣಿ ಹಾಗೂ ಎಸ್ ಬಿಸಿ ಪ್ರಥಮ ದರ್ಜೆ ಮಹಿಳಾ ಕಾಲೇಜು, ಅಥಣಿ ಸ್ನಾತಕೋತ್ತರ ಕೇಂದ್ರ, ಬಿ.ಎಸ್. ಚನ್ನಬಸಪ್ಪ ಪ್ರಥಮ ದರ್ಜೆ ಕಾಲೇಜು ಹಾಗೂ 'ಚಿರಂತನ ಅಕಾಡೆಮಿ' ಸಂಯುಕ್ತಾಶ್ರಯದಲ್ಲಿ ಇಂದು ರಾತ್ರಿ 7.30 ರಿಂದ 11.30 ರವರೆಗೆ 'ಶಿವರಾತ್ರಿ ಉತ್ಸವ' ಹೆಸರಿನಡಿ 40 ಕ್ಕೂ ಪ್ರತಿಭೆಗಳಿಂದ ಸಂಗೀತ ಹಾಗೂ ನೃತ್ಯ ಸೇವೆಯನ್ನು ಸಲ್ಲಿಸಲಾಗುತ್ತಿದೆ.

### ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಹೇಳಿಕೆ

## ದಿವ್ಯಾಂಗರಿಗೆ ಸರ್ಕಾರದಿಂದ ಸೂಕ್ತ ಅವಕಾಶ



**ದಾವಣಗೆರೆ :** ದಿವ್ಯಾಂಗರಿಗೆ ತಮ್ಮ ಜೀವನದಲ್ಲಿ ಶಕ್ತಿ ಮತ್ತು ಧೈರ್ಯವನ್ನು ಹೊಂದಿ ಆತ್ಮವಿಶ್ವಾಸದಿಂದ ಬದುಕಲು ಸರ್ಕಾರ ಎಲ್ಲ ರೀತಿಯ ಅವಕಾಶಗಳನ್ನು ಕಲ್ಪಿಸಿದೆ. ದಿವ್ಯಾಂಗರು ಸಾಮಾನ್ಯ ಜನರಂತೆ ಬದುಕು ನಡೆಸಬೇಕು ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಹೇಳಿದರು.

ಸೋಮವಾರ(ಫೆ.24)ರಂದು ದಿವ್ಯಾಂಗರ ಕೌಶಾಲ್ಯಾಭಿವೃದ್ಧಿ ಪುನರ್ವಸತಿ ಮತ್ತು ಸಬಲೀಕರಣದ ಸಂಯುಕ್ತ ಪ್ರಾದೇಶಿಕ ಕೇಂದ್ರದ ವತಿಯಿಂದ, ನಗರದ ಪ್ರಾದೇಶಿಕ ಕೇಂದ್ರದಲ್ಲಿ ಅಂಗನವಾಡಿ ಶಿಕ್ಷಕರಿಗಾಗಿ ಪೂರ್ವಭಾವಿ ಮಧ್ಯಸ್ಥಿಕೆ ಅರಿವು ಮೂಡಿಸುವ ಕಾರ್ಯಕ್ರಮ ಉದ್ಘಾಟಿಸಿ, ಕಿಟ್‌ಗಳ ವಿತರಿಸಿ ಅವರು ಮಾತನಾಡಿದರು.

ಸಿಆರ್‌ಸಿ ಸರ್ಕಾರದಿಂದ ಸ್ಥಾಪಿಸಲ್ಪಟ್ಟ ಪ್ರತಿಷ್ಠಿತ ಸಂಸ್ಥೆಯಾಗಿದೆ. ದಿವ್ಯಾಂಗ ವ್ಯಕ್ತಿಗಳ ಕಲ್ಯಾಣಕ್ಕಾಗಿ ಭಾರತ ಸರ್ಕಾರದ ವತಿಯಿಂದ ಸ್ಥಾಪಿಸಲ್ಪಟ್ಟ ಸಿಆರ್‌ಸಿ, 21 ವಿಧದ ದಿವ್ಯಾಂಗರ ಮತ್ತು ಜನರ ಅಗತ್ಯತೆಗಳನ್ನು ನೋಡಿಕೊಳ್ಳುತ್ತಿದೆ. ಅಂಗವಾಡಿ ಶಿಕ್ಷಕರಾಗಿರುವ ನೀವು ಪ್ರಸವಪೂರ್ವ ಮತ್ತು ನಂತರದ ಆರೈ–ಕೆಗಾಗಿ ನಿಕಟವಾಗಿ ಕೆಲಸ ಮಾಡುತ್ತಿದ್ದೀರಿ. ಸಮಾಜದ ಜನರಲ್ಲಿ ಸಂವಹನ ಮಾಡುವುದು ನಿಮ್ಮ ಕರ್ತವ್ಯ. ನಿಮ್ಮ ವ್ಯಾಪ್ತಿಯಲ್ಲಿನ ಪ್ರತಿಯೊಬ್ಬ ನಾಗರಿಕರ ಸ್ಥಿತಿಯ ಬಗ್ಗೆ ನಿಮಗೆ ಚೆನ್ನಾಗಿ ತಿಳಿದಿದೆ. ಮಕ್ಕಳು ಯಾವುದೇ ರೀತಿಯ ದಿವ್ಯಾಂಗತೆಗೆ ಸಂಬಂಧಿತ ಸಮಸ್ಯೆಗಳಿಂದ ಬಳಲುತ್ತಿದ್ದರೆ, ಸಹಾಯದ ಅಗತ್ಯವಿರುವ ಹಿರಿಯ ನಾಗರಿಕರು ಸೂಕ್ತ ಸಹಾಯ ಹಾಗೂ ಪ್ರಯೋಜನ ಪಡೆಯಲು ಸಿಆರ್‌ಸಿಗೆ ಭೇಟಿ ನೀಡುವಂತೆ ಅವರಿಗೆ ತಿಳಿಸಬೇಕು.

ಸಿಆರ್‌ಸಿ ಎಲ್ಲಾ ರೀತಿಯ ದಿವ್ಯಾಂಗತೆಗೆ ಸಂಬಂಧಿತ ಸಮಸ್ಯೆಗಳಲ್ಲಿ ಉತ್ತಮ ಪರಿಣತಿ ಹೊಂದಿರುವ ಸಿಬ್ಬಂದಿಯನ್ನು ಹೊಂದಿದೆ. ನೀವು ಮಗುವಿನ ಚಿಕ್ಕ ವಯಸ್ಸಿನಲ್ಲಿ ಯಾವುದೇ ಅಂಗವೈಕಲ್ಯವನ್ನು ಗುರುತಿಸಿದರೆ, ಅದನ್ನು ಗುಣಪಡಿಸಬಹುದು ಮತ್ತು ಸಿಆರ್‌ಸಿಯು ಅವರನ್ನು ಸಾಮಾನ್ಯ ಸ್ಥಿತಿಗೆ ತರಲು ಶ್ರಮಿಸುತ್ತದೆ ಎಂದು ತಿಳಿಸಿದರು. ಇದೇ ವೇಳೆ ಅವರು ಅಂಗನವಾಡಿ ಶಿಕ್ಷಕರಿಗೆ ಆರಂಭಿಕ ಮಧ್ಯಸ್ಥಿಕೆ ಜಾಗೃತಿ ಮೂಡಿಸುವ ಕಿಟ್‌ಗಳ ವಿತರಣೆ ಹಾಗೂ ವಿವಿಧ ದಿವ್ಯಾಂಗರಿಗೆ 120 ಸಹಾಯಕ ಸಾಧನಗಳನ್ನು ವಿತರಿಸಿದರು. ಈ ಕಾರ್ಯಕ್ರಮದಲ್ಲಿ 70 ಕ್ಕೂ ಹೆಚ್ಚಿನ ಫಲಾನುಭವಿಗಳು ವಿವಿಧ ಬಗೆಯ ಸಹಾಯಕ ಸಾಧನಗಳನ್ನು ಪಡೆದುಕೊಂಡರು. ನಂತರ ಸಿಆರ್‌ಸಿಯಿಂದ ದಿವ್ಯಾಂಗರಿಗೆ ನೀಡಲಾಗುವ ಸವಲತ್ತುಗಳು ಸೇವೆಗಳನ್ನು ವಿತರಿಸಿದರು. ವಿದ್ಯಾರ್ಥಿಗಳೊಂದಿಗೆ ಜಿಲ್ಲಾಧಿಕಾರಿ ಸಂವಾದ ನಡೆಸಿದರು. ಇಂತಹ ವೃತ್ತಿಯನ್ನು ಆಯ್ಕೆ ಮಾಡಿಕೊಂಡಿದ್ದಕ್ಕಾಗಿ ಮತ್ತು ದಿವ್ಯಾಂಗರಿಗೆ ಸೇವೆ ಸಲ್ಲಿಸುವುದು ಉದಾತ್ತ ಕೆಲಸ ಎಂದು ಸಿಬ್ಬಂದಿಗೆ ಶ್ಲಾಘಿಸಿದರು.

ಸಿಆರ್‌ಸಿ ನಿರ್ದೇಶಕಿ ಮೀನಾಕ್ಷಿ ಮಾತನಾಡಿ, ಬಿಪಿಎಲ್ ವರ್ಗದವರಿಗೆ ಮತ್ತು ಹಿರಿಯ ನಾಗರಿಕರಿಗೆ ವಿಕಲಚೇತನರಿಗೆ ಅಗತ್ಯವಿರುವ ಎಲ್ಲಾ ಸಹಾಯ ಮತ್ತು ಉಪಕರಣಗಳನ್ನು ಉಚಿತವಾಗಿ ನೀಡಲಾಗುತ್ತದೆ. 21 ವಿಧದ ದಿವ್ಯಾಂಗರಿಗೆ, ಪುನರ್ವಸತಿ, ಸಮಾಲೋಚನೆ, ಚಿಕಿತ್ಸೆ, ಉದ್ಯೋಗ ಕೌಶಲ್ಯಗಳ ತರಬೇತಿ, ಉದ್ಯೋಗ ಇತ್ಯಾದಿಗಳಿಗೆ ಸೇವೆ ಸಲ್ಲಿಸುತ್ತಾ ಇದ್ದಾ–ರೆ. ಕರ್ನಾಟಕ ರಾಜ್ಯದ ಎಲ್ಲಾ ಜನರು ಸಿಆರ್‌ಸಿಯಿಂದ ಒದಗಿಸಲಾದ ಸೌಲಭ್ಯಗಳನ್ನು ಗರಿಷ್ಠವಾಗಿ ಬಳಸಿಕೊಳ್ಳುವಂತೆ ಅವರು ವಿನಂತಿಸಿದರು.

ಸಿಆರ್‌ಸಿ ಆಡಳಿತಾಧಿಕಾರಿ ವೈ.ಶ್ರೀನಾಥ್, 275 ಜನ ಅಂಗನವಾಡಿ ಶಿಕ್ಷಕರು, ವಿಕಲಚೇತನರು ಅವರ ಬಂಧುಗಳು, ಸಿಆರ್‌ಸಿ, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಸೇರಿದಂತೆ ಸುಮಾರು 500 ಜನ ಭಾಗವಹಿಸಿದ್ದರು.

## ಮಹಿಳೆಯರಿಗೆ ಆರ್ಥಿಕ ಸಾಕ್ಷರತೆ–ಬಹು ಮುಖ್ಯ



**ಶಿವಮೊಗ್ಗ :** ಮಹಿಳಾ ಸಬಲೀಕರಣದಿಂದ ಮಾತ್ರ ದೇಶದ ಅಭಿವೃದ್ಧಿ ಸಾಧ್ಯ. ಈ ದಿಸೆಯಲ್ಲಿ ಆರ್‌ಬಿಐ ಮಹಿಳೆಯರನ್ನು ಸಶಕ್ತೀಕರಣಗೊಳಿಸಲು ಆರ್ಥಿಕ ಸಾಕ್ಷರತೆ–ಮಹಿಳೆಯರ ಅಭಿವೃದ್ಧಿ ಕಾರ್ಯಕ್ರಮವನ್ನು ದೇಶಾದ್ಯಂತ ಆಯೋಜಿಸಿದೆ ಎಂದು ಲೀಡ್ ಬ್ಯಾಂಕ್ ಮ್ಯಾನೇಜರ್ ಬಿ.ಚಂದ್ರಶೇಖರ್ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಶು ಅಭಿವೃದ್ಧಿ ಯೋಜನೆ, ಜಿಲ್ಲಾ ಮಹಿಳಾ ಸಬಲೀಕರಣ ಘಟಕ, ಭಾರತೀಯ ರಿಸರ್ವ್ ಬ್ಯಾಂಕ್ ಬೆಂಗಳೂರು, ಲೀಡ್ ಬ್ಯಾಂಕ್ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಮಂಗಳವಾರ ನಗರದ ಡಿಎಆರ್ ಸಭಾ ಭವನದಲ್ಲಿ ಅಂಗನವಾಡಿ ಕಾರ್ಯಕರ್ತೆಯರಿಗಾಗಿ ಆಯೋಜಿಸಿದ್ದ ಮಹಿಳೆಯರಲ್ಲಿ ಆರ್ಥಿಕ ಸಾಕ್ಷರತೆ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರು ಅಭಿವೃದ್ಧಿ ಹೊಂದಬೇಕು ಎಂಬುದು ಆರ್‌ಬಿಐ ಮುಖ್ಯ ಉದ್ದೇಶವಾಗಿದ್ದು, ಅದಕ್ಕಾಗಿ ಈ ವರ್ಷ ಹಣಕಾಸು ಯೋಜನೆ ಕುರಿತು ಕಾರ್ಯಕ್ರಮವನ್ನು ಏರ್ಪಡಿಸಿದ್ದಾರೆ. ಇದು ಫೆ.24 ರಿಂದ 28 ವರೆಗೆ ನಡೆಯಲಿದ್ದು, ಅಂಗನವಾಡಿ ಕಾರ್ಯಕರ್ತರಿಗೆ ಹಾಗೂ ಸಹಕಾರ ಕ್ಷೇತ್ರದವರೆಗೆ ಆಯೋಜಿಸಲಾಗಿದೆ ಎಂದರು.

ಮನೆ ನಿರ್ವಹಣೆ ಮಾಡುವವರು ಮಹಿಳೆಯರೇ ಆಗಿರುವುದರಿಂದ ಅವರಿಗೆ ಫೈನ್ಯಾಯಲ್ ಪ್ಲಾನಿಂಗ್ ಬಹಳ ಮುಖ್ಯವಾಗಿದೆ. ಸಂಬಳದಲ್ಲಿ ಉಳಿತಾಯ ಮಾಡುವುದನ್ನು ಕಲಿಯಬೇಕು. ನಿಮ್ಮ ಆದಾಯವನ್ನು ಅನಾವಶ್ಯಕವಾಗಿ ಖರ್ಚು ಮಾಡಿದೆ ಉಳಿತಾಯ ಮಾಡಬೇಕು. ಇಲ್ಲದಿದ್ದರೆ ಜೀವನದಲ್ಲಿ ಸಮಸ್ಯೆ ಎದುರಿಸಬೇಕಾಗುತ್ತದೆ. ಅದರಿಂದ ನಿಮ್ಮ ಹಾಗೂ ಕುಟುಂಬದ ಬೆಳವಣಿಗೆಗೆ ತೊಂದರೆ ಉಂಟಾಗುತ್ತದೆ. ಅವಶ್ಯಕತೆ ಇದ್ದಲ್ಲಿ ಮಾತ್ರ ಖರ್ಚು ಮಾಡಿ ಇನ್ನುಳಿದ ಹಣವನ್ನು ಬ್ಯಾಂಕ್‌ನಲ್ಲಿ ಉಳಿತಾಯ ಮಾಡಬೇಕು ಎಂದರು.

ಆರ್ಥಿಕ ಸಾಕ್ಷರತಾ ಸಲಹೆಗಾರರಾದ ಬಿ.ಆರ್. ಶಂಕರಪ್ಪ ಮಾತನಾಡಿ, ಮಹಿಳೆಯರಲ್ಲಿ ಮಾನಸಿಕ ಸ್ಥೈರ್ಯ ಮೂಡಬೇಕು. ಮಹಿಳೆಯರಿಗೆ ಆಯಸ್ಸು ಹೆಚ್ಚು, ಪುರುಷರಿಗೆ ಆದಾಯ ಹೆಚ್ಚು ಇವೆರಡನ್ನು ಸಮತೋಲನಗೊಳಿಸಲು ಆರ್‌ಬಿಐ ಈ ಯೋಜನೆಯಡಿಯಲ್ಲಿ ಕಾರ್ಯಕ್ರಮವನ್ನು ರೂಪಿಸಿದೆ ಎಂದರು.

ಹೆಣ್ಣು ಕುಟುಂಬದ ಕಣ್ಣು. ಕುಟಂಬದಲ್ಲಿನ ಆಗು–ಹೋಗುಗಳು, ಬೇಕು–ಬೇಡಗಳನ್ನು ಹೆಣ್ಣು ಮಕ್ಕಳೇ ಪೂರೈಸೋದು. ಆ ನಿಟ್ಟಿನಲ್ಲಿ ಸರ್ಕಾರ ಸಾಕಷ್ಟು ಯೋಜನೆಗಳನ್ನು

## ಡಿನೋಟಿಫಿಕೇಷನ್ ಪ್ರಕರಣದ ಅರ್ಜಿ ವಜಾಗೊಳಿಸಿದ ಸುಪ್ರೀಂ

**ನವದೆಹಲಿ:** ಹಲಗೆವಡೇರಹಳ್ಳಿ ಡಿನೋಟಿಫಿಕೇಷನ್ ಪ್ರಕರಣ ಕೇಂದ್ರ ಬೃಹತ್ ಕೈಗಾ ರಿಕಾ ಸಚಿವ ಎಚ್.ಡಿ ಕುಮಾರಸ್ವಾಮಿಗೆ ಸಂಕಷ್ಟ ತಂದಿಟ್ಟಿದೆ. ಬಿಡಿಎ ಸ್ವಾಧೀನಪಡಿಸಿಕೊಂಡಿದ್ದ ಜಮೀನು ಡಿನೋಟಿಷಿಕೇಷನ್ ಸಂಬಂಧ ಕುಮಾರಸ್ವಾಮಿ ವಿರುದ್ಧದ ಪ್ರಕರಣದಲ್ಲಿ ಲೋಕಾಯುಕ್ತ ಸಲ್ಲಿಸಿದ್ದ



ಬಿ ರಿಪೋರ್ಟ್ ಅನ್ನು ಹೈಕೋರ್ಟ್ ರದ್ದುಗೊಳಿಸಿತ್ತು. ಇದನ್ನು ಪ್ರಶ್ನಿಸಿ ಕುಮಾರಸ್ವಾಮಿ ಸುಪ್ರೀಂಕೋರ್ಟ್ ಮೆಟ್ಟಿಲೇರಿದ್ದು ಇಂದು ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್ ನ ನ್ಯಾಯಮೂರ್ತಿಗಳಾದ ದೀಪಂಕರ್ ದತ್ತಾ ಮತ್ತು ರಾಜೇಶ್ ಬಿಂದಾಲ್ ಅವರಿದ್ದ ದ್ವಿಸದಸ್ಯ ಪೀಠ ಅರ್ಜಿ ವಜಾಗೊಳಿಸಿದೆ.

ಕುಮಾರಸ್ವಾಮಿ ಅವರು 2006ರಲ್ಲಿ ಮುಖ್ಯಮಂತ್ರಿ ಆಗಿದ್ದಾಗ ಬನಶಂಕರಿ 5ನೇ ಹಂತದ ಹಲಗೆವಡೇರಹಳ್ಳಿಯಲ್ಲಿ 3 ಎಕರೆ 34 ಗುಂಟೆ ಜಮೀನನ್ನು ಡಿನೋಟಿಫಿಕೇಶನ್ ಮಾಡಿರುವ ಆರೋಪ ಎದುರಿಸುತ್ತಿದ್ದಾರೆ.

## ಸುಳ್ಳು ಆರೋಪ ಹೊರಿಸಿ ಶಾಲೆಯ ಶೈಕ್ಷಣಿಕ ಅಭಿವೃದ್ಧಿಗೆ ತೊಡಕು : ಶಿಸ್ತು ಕ್ರಮಕ್ಕೆ ಒತ್ತಾಯ

**ಚಿಕ್ಕಮಗಳೂರ :** ಸುಳ್ಳು ಆರೋಪ ಹೊರಿಸಿ ಶಾಲೆಯ ಶೈಕ್ಷಣಿಕ ಅಭಿವೃದ್ಧಿಗೆ ತೊಡಕುಂಟು ಮಾಡುತ್ತಿರುವ ಕೆಲ ದಲಿತ ಸಂಘಟನೆಗಳ ಮೇಲೆ ಕ್ರಮ ಕೈಗೊಳ್ಳುವಂತೆ ದಲಿತ್ ಜನ ಸೇನಾ ಕಾರ್ಯಕರ್ತರು ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಂ ರುವರನ್ನು ಭೇಟಿಯಾಗಿ ಮನವಿ ನೀಡಿ ಕೂಡಲೆ ತನಿಖೆ ನಡೆಸಿ ತಪ್ಪಿತಸ್ಥರ ಮೇಲೆ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು

ದಲಿತ ಜನ ಸೇನಾ ಸಂಘಟನೆಯ ಮುಖಂಡರು ಮಾತನಾಡಿ ನಗರದ ಹೊರ ವಲಯದ ಬೀಕನಹಳ್ಳಿ ಗ್ರಾಮದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಅನುಮತಿ ಇಲ್ಲದೆ ಅತಿಕ್ರಮ ಪ್ರವೇಶ ಮಾಡಿರುವ ಕೆಲ ದಲಿತ ಸಂಘಟನೆಯ ಮುಖಂಡರು ಪ್ರಾಂಶುಪಾಲರನ್ನು ನಿಂದಿಸಿ ಸಿಬ್ಬಂದಿಗಳನ್ನು ನಿಂದಿಸಿ ಬೆದರಿಕೆ ಹೊಡ್ಡಿದ್ದು ಸರ್ಕಾರಿ ಕೆಲಸಕ್ಕೆ ಅಡ್ಡಿಪಡಿಸಿರುತ್ತಾರೆ ಅಲ್ಲದೇ ಇದನ್ನು ಪ್ರಶ್ನಿಸಲು ಹೋದಾಗ



ಜಾತಿನಿಂದನೆ ಮಾಡಿದ್ದಾರೆಂದು ಸುಳ್ಳು ಆರೋಪ ಹೊರಿಸಿ ಶಾಲಾ ಸಿಬ್ಬಂದಿಗಳ ಮೇಲೆ ಪ್ರಕರಣ ದಾಖಲಿಸಿರುತ್ತಾರೆ ಈ ಮೂಲಕ ಶಾಲೆಯ ಶೈಕ್ಷಣಿಕ ವಾತಾವರಣಕ್ಕೆ ತೊಡಕುಂಟುಮಾಡಲು ಪ್ರಯತ್ನಿಸಿರುವುದು ಖಂಡನೀಯ ಎಂದಿದ್ದಾರೆ.

ಸುಳ್ಳು ಜಾತಿ ನಿಂದನೆ ಆರೋಪವನ್ನು ಅಲ್ಲಿನ ಶಾಲಾ ಸಿಬ್ಬಂದಿಗಳ ಮೇಲೆ ಮಾಡಿದ್ದು ಆರೋಪ ಹೊತ್ತುಕೊಂಡಿರುವ ಸಿಬ್ಬಂದಿಗಳಲ್ಲಿ ಕೆಲವರು ಪರಿಶಿಷ್ಟರೇ ಆಗಿದ್ದು ಸುಮ್ಮನೆ ಈ ರೀತಿಯ ಜಾತಿನಿಂದನೆ ಪ್ರಕರಣವನ್ನು ದುರ್ಬಳಕೆ ಮಾಡಿಕೊಳ್ಳುತ್ತಿರುವುದು ವಿಪರ್ಯಾಸದ ಸಂಗತಿ ಎಂದಿದ್ದಾರೆ.

ಶಾಲೆಗೆ ಅತಿಕ್ರಮ ಪ್ರವೇಶ ಮಾಡಿ ಕರ್ತವ್ಯ ನಿರತರ ಮೇಲೆ ಹಲ್ಲೆ ಮಾಡಿದ್ದು ತಮಗೆ ಮುಳುವಾಗಬಹುದೆಂದು ದೂರು ನೀಡಿದ್ದ ಶಿಕ್ಷಕ ವಿಜಯ್ ಕುಮಾರ್ ಮೇಲೆಯೂ ಸಹ ಸುಳ್ಳು ಜಾತಿ ನಿಂದನೆ ಪ್ರಕರಣ ದಾಖಲು ಮಾಡಲಾಗಿದೆ, ನಮ್ಮ ದಲಿತ ಸಂಘಟನೆಗಳು ದಲಿತರ ಉದ್ದಾರಕ್ಕಾ–ಗಿಯೇ ದ್ವನಿ ಎತ್ತಬೇಕಾಗಿದೆಯೇ ಹೊರತು ಈ ರೀತಿಯಲ್ಲಿ ತಮ್ಮ ವೈಯಕ್ತಿಕ ಹಿತಾಸಕ್ತಿಗಾಗಿ ದುರ್ಬಳಕೆ ಮಾಡಿಕೊಳ್ಳುವುದು ಸರಿಯಲ್ಲ ಎಂದು ವಿಷಾದ ವ್ಯಕ್ತಪಡಿಸಿದರು. ಉತ್ತಮ ರೀತಿಯಲ್ಲಿ ಶಿಕ್ಷಣ ನೀಡುತ್ತಿರುವ ಈ ಸಂಸ್ಥೆಯ ಸಿಬ್ಬಂದಿಗಳ ಮೇಲೆ ಕೆಲ ದಲಿತ ಮುಖಂಡರು ಈ ರೀತಿಯ ಸುಳ್ಳು ಆರೋಪಗಳನ್ನು ಮಾಡುತ್ತಾ ಶಾಲೆಯಲ್ಲಿ ವ್ಯತಿರಿಕ್ತ ವಾತಾವರಣವನ್ನು ಉಂಟು ಮಾಡಿರುವುದು ಅಲ್ಲಿನ ಮಕ್ಕಳ ಮೇಲೆ ಗಂಭೀರ ಪರಿಣಾಮ ಬೀರಲಿದ್ದು, ಈ ಸಾಲಿನ ವಾರ್ಷಿಕ ಪರೀಕ್ಷೆಯು ಕೆಲವೇ ದಿನಗಳಲ್ಲಿ ಸಮೀಪಿಸುತ್ತಿದ್ದು ಈ ಕೆಲ ದಲಿತ ಮುಖಂಡರಿಂದ ದಾಖಲಾಗಿರುವ ಸುಳ್ಳು ಪ್ರಕರಣಗಳಿಂದ ಹಲವು ಶಿಕ್ಷಕರು ಬಳಲುತ್ತಿದ್ದು ತಮ್ಮ ಕರ್ತವ್ಯ ನಿರ್ವಹಿಸಲು ಸಾಧ್ಯವಾಗದೆ ಮಕ್ಕಳ ಮೇಲೆ ಈ ಘಟನೆ ನೇರ ಪರಿಣಾಮ ಬೀಳುತ್ತಿದೆ, ಅಲ್ಲದೆ ಈ ವಾತಾವರಣವೂ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಹಿನ್ನಡೆ ಉಂಟು ಮಾಡಬಹುದು ಮತ್ತು ಈ ಬಾರಿಯ ಫಲಿತಾಂಶದ ಮೇಲೆ ಬಹುದೊಡ್ಡ ಪರಿಣಾಮವನ್ನೇ ಸೃಷ್ಟಿ ಮಾಡಬಹುದು ಎಂದು ಆರೋಪಿಸಿದರು. ಈ ಬಗ್ಗೆ ಜಿಲ್ಲಾಡಳಿತ ಸಂಪೂರ್ಣವಾಗಿ ತನಿಖೆ ನಡೆಸಿ ಕೂಡಲೇ ಕ್ರಮ ಜರುಗಿಸಿ ತಪ್ಪಿಸ್ತಸ್ಥರ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರಲ್ಲದೆ ಮಕ್ಕಳ ಮೇಲೆ ಯಾವುದೇ ರೀತಿಯ ಪರಿಣಾಮವನ್ನು ಬೀರದೆ ಮಕ್ಕಳ ವಿದ್ಯಾಭ್ಯಾಸ ತೊಡಕಿಲ್ಲದಂತೆ ನಡೆಯಲು ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಮನವಿ ಮಾಡಿದೆ.

ಈ ಸಂದರ್ಭದಲ್ಲಿ ದಲಿತ ಜನ ಸೇನಾ ಮಹಿಳಾ ಜಿಲ್ಲಾಧ್ಯಕ್ಷ ಸ್ವರ್ಣ ಗೌರಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಿಶ್ವನಾಥ್ ಸಂಕಲ್ಪ, ಜಿಲ್ಲಾ ಸಂಚಾಲಕ ವೆಂಕಟೇಶ್, ರಾಜಶೇಖರ್, ಅರುಣ್, ನಾಗರಾಜ್, ಸತೀಶ್ ,ಸಚಿನ್, ಗಗನ್, ಹರೀಶ್, ರೋಹಿತ್ ಇದ್ದರು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಇಂದು, ನಿಮ್ಮ ಆರೋಗ್ಯವು ಆರೋಗ್ಯಕರವಾಗಿರುತ್ತದೆ ಎಂದು ನಿರೀಕ್ಷಿಸಲಾಗಿದೆ. ನೀವು ಮನೆಯಿಂದ ಹೊರ ಇದ್ದು ಉದ್ಯೋಗ ಅಥವಾ ಅಧ್ಯಯನ ಮಾಡುತ್ತಿದ್ದರೆ, ನಿಮ್ಮ ಹಣ ಮತ್ತು ಸಮಯವನ್ನು ವ್ಯರ್ಥ ಮಾಡುವಂತಹ ಜನರಿಂದ ದೂರವಿರುವುದು ಕಲಿತುಕೊಳ್ಳಬೇಕು. ನೀವು ಭಾವಿಸಿದ್ದಕ್ಕಿಂತ ಹೆಚ್ಚಾಗಿ ನಿಮ್ಮ ಸಹೋದರರು ನಿಮ್ಮ ಅಗತ್ಯಗಳಿಗೆ ಬೆಂಬಲ ನೀಡುತ್ತಾರೆ. ನಿಮ್ಮ ಶಕ್ತಿ ಮತ್ತು ಉತ್ಸಾಹವನ್ನು ಮರಳಿ ತರುವ ಒಂದು ಆನಂದಮಯ ಪ್ರವಾಸಕ್ಕೆ ಹೋಗುವ ಸಾಧ್ಯತೆಯಿದೆ.

### ವೃಷಭ ರಾಶಿ

ನೀವು ಕಳೆದುಹೋದದ್ದರ ಬಗ್ಗೆ ಯೋಚಿಸುತ್ತಿದ್ದರೆ ನಿಮ್ಮ ಹತಾಶೆ ನಿಮ್ಮ ಆರೋಗ್ಯವನ್ನು ನಾಶಮಾಡಬಹುದು – ಸಾಧ್ಯವಾದಷ್ಟೂ ವಿಶ್ರಾಂತಿ ತಗೆದುಕೊಳ್ಳಲು ಪ್ರಯತ್ನಿಸಿ. ಇಂದು ನಿಮ್ಮ ಹಣವನ್ನು ಅನೇಕ ವಿಷಯಗಳಿಗೆ ಖರ್ಚು ಮಾಡಬಹುದು, ನೀವು ಇಂದು ಉತ್ತಮ ಬಜೆಟ್ ಅನ್ನು ಯೋಜಿಸಬೇಕಾಗಿದೆ, ಇದು ನಿಮ್ಮ ಅನೇಕ ಸಮಸ್ಯೆಗಳನ್ನು ತೆಗೆದುಹಾಕುತ್ತದೆ. ಮನೆಯ ಸದಸ್ಯರೊಬ್ಬರ ವರ್ತನೆಯಿಂದ ನೀವು ತೊಂದರೆಗೊಳಗಾಗಬಹುದು.

### ಮಿಥುನ ರಾಶಿ

ನಿಮ್ಮ ಹೆಂಡತಿಯ ಜೊತೆ ಕುಟುಂಬದ ಸಮಸ್ಯೆಗಳನ್ನು ಹಂಚಿಕೊಳ್ಳಿ. ನಮ್ಮನ್ನು ನೀವೇ ಒಂದು ಪ್ರೀತಿಯ ಪೋಷಿಸುವ ಜೋಡಿಯೆನ್ನುವುದನ್ನು ಪುನಃ ಕಂಡುಹಿಡಿಯಲು ಸ್ವಲ್ಪ ಸಮಯ ಖರ್ಚು ಮಾಡಿ. ನಿಮ್ಮ ಮಕ್ಕಳೂ ಕೂಡ ಮನೆಯಲ್ಲಿನ ಶಾಂತಿ ಸಾಮರಸ್ಯದ ವಾತಾವರಣವನ್ನು ಆವಾಹಿಸಿಕೊಳ್ಳುತ್ತಾರೆ. ಇದು ಪರಸ್ಪರ ಸಂಪರ್ಕದಲ್ಲಿ ನಿಮ್ಮ ಮಾತುಕತೆಗೆ ನಿಮಗೆ ಹೆಚ್ಚಿನ ಸ್ವಾಭಾವಿಕತೆ ಮತ್ತು ಸ್ವಾತಂತ್ರ್ಯ ನೀಡುತ್ತದೆ.

### ಕರ್ಕ ರಾಶಿ

ನೀವು ಆರೋಗ್ಯ ಸಮಸ್ಯೆಯಿಂದಾಗಿ ಒಂದು ಪ್ರಮುಖ ಕೆಲಸಕ್ಕೆ ಹೋಗಲು ಸಾಧ್ಯವಾಗದಿರುವುದರಿಂದ ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಆದರೆ ನಿಮ್ಮನ್ನು ಮೇಲೆತ್ತಲು ನಿಮ್ಮ ತಾರ್ಕಿಕತೆಯನ್ನು ಬಳಸಿ. ಅನಿರೀಕ್ಷಿತ ಬಿಲ್ಗಳು ಹಣಕಾಸಿನ ಹೊರೆಯನ್ನು ಹೆಚ್ಚಿಸುತ್ತದೆ. ನೀವು ನಿಮ್ಮ ಆಕರ್ಷಣೆಯನ್ನು ಹಾಗೂ ನಿಮ್ಮ ಬುದ್ಧಿವಂತಿಕೆಯನ್ನು ಬಳಸಿದಲ್ಲಿ ಜನರು ನಿಮ್ಮ ಮತುಗಳನ್ನು ಕೇಳುತ್ತಾರೆ. ಭಿನ್ನಾಭಿಪ್ರಾಯಗಳ ಕಾರಣ ವೈಯಕ್ತಿಕ ಸಂಬಂಧದಲ್ಲಿ ಬಿರುಕು ಬಿಡಬಹುದು.

### ಸಿಂಹ ರಾಶಿ

ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ಯಶಸ್ಸಿಗೆ ಇಂದಿನ ಸೂತ್ರವೆಂದರೆ ನಾವೀನ್ಯತೆಯಿರವ ಮತ್ತು ಉತ್ತಮ ಅನುಭವ ಹೊಂದಿರುವ ಜನರ ಸಲಹೆಯಂತೆ ನಿಮ್ಮ ಹಣವನ್ನು ಹೂಡುವುದಾಗಿದೆ. ನಿಮ್ಮ ಮನೆಯಲ್ಲಿ ಸಾಮರಸ್ಯ ತರಲು ನಿಕಟ ಸಹಕಾರದೊಂದಿಗೆ ಕೆಲಸ ಮಾಡಬೇಕು. ಪ್ರೀತಿಯ ಇಂದ್ರಜಾಲ ಇಂದು ನಿಮ್ಮನ್ನು ಕಟ್ಟಿಹಾಕಲಿದೆ. ಕೇವಲ ಈ ಆನಂದವನ್ನು ಆಸ್ವಾದಿಸಿ. ಹತ್ತಿರದ ಸಹಯೋಗಿಗಳ ಜೊತೆ ಹಲವಾರು ಭಿನ್ನಾಭಿಪ್ರಾಯಗಳು ಉದ್ಭವಿಸಬಹುದಾದ ಒತ್ತಡ ತುಂಬಿದ ದಿನ.

### ಕನ್ಯಾ ರಾಶಿ

ಅನಂತ ಜೀವನದ ಉತ್ಕೃಷ್ಟ ವೈಭವವನ್ನು ಆನಂದಿಸಲು ನಿಮ್ಮ ಜೀವನವನ್ನು ಹೆಚ್ಚು ಭವ್ಯಗೊಳಿಸಿ. ಚಿಂತೆಯ ಅನುಪಸ್ಥಿತಿ ಈ ದಿಕ್ಕಿನಲ್ಲಿ ಮೊದಲ ಹೆಜ್ಜೆ. ಇಂದು ಸಾಲಗಾರನು ನಿಮ್ಮ ಮನೆ ಬಾಗಿಲಿಗೆ ಬರಬಹುದು ಮತ್ತು ನಿಮ್ಮ ಹತ್ತಿರ ಸಾಲ ಕೇಳಬಹುದು.ಅವರಿಗೆ ಹಣವನ್ನು ಹಿಂದಿರುಗಿಸಿ ನೀವು ಆರ್ಥಿಕ ಬಿಕ್ಕಟ್ಟಿಗೆ ಸಿಲುಕಬಹುದು. ಸಾಲ ಪಡೆಯುವುದನ್ನು ತಪ್ಪಿಸಲು ನಿಮಗೆ ಸೂಚಿಸಲಾಗಿದೆ.

### ತುಲಾ ರಾಶಿ

ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ ಹಾಗೂ ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ಧಿ ಜೀವನದ ಹೆಬ್ಬಾಗಿಲಾಗಿದೆ. ಇದು ಜೀವನದ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಸಹಾಯ ಮಾಡುತ್ತದೆ ಮತ್ತು ಅಗತ್ಯವಿರುವ ಬೆಳಕನ್ನು ನೀಡುತ್ತದೆ. ಆವತ್ತಿಗಾಗಿ ಮಾತ್ರ ಬದುಕುವ ಮತ್ತು ಮನೋರಂಜನೆಗಾಗಿ ಹೆಚ್ಚು ಸಮಯ ಮತ್ತು ಹಣ ಖರ್ಚು ಮಾಡುವ ನಿಮ್ಮ ಪ್ರವೃತ್ತಿಯನ್ನು ನಿಯಂತ್ರಿಸಿ.

### ವೃಶ್ಚಿಕ ರಾಶಿ

ಕೆಲಸದಲ್ಲಿ ಹಿರಿಯರಿಂದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ. ಈ ಅವಧಿ ನಿಮ್ಮ ಹೊಸ ಯೋಜನೆಗಳು ಹಾಗೂ ಆಲೋಚನೆಗಳ ಬಗ್ಗೆ ನಿಮ್ಮ ಪೋಷಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲು ಒಳ್ಳೆಯದಾಗಿದೆ. ಇಂದು ನೀವು ನೀವು ಸುತ್ತಲೂ ನಿಮ್ಮ ಪ್ರಿಯತಮೆಯ ಪ್ರೀತಿಯನ್ನು ಅನುಭವಿಸುತ್ತೀರಿ. ಇದು ಒಂದು ಸುಂದರವಾದ ಅದ್ಭುತ ದಿನ.

### ಧನು ರಾಶಿ

ಖಿನ್ನತೆಯನ್ನು ಹೊಡೆದೋಡಿಸಿ ಇದ ನಿಮ್ಮನ್ನು ಆವರಿಸಿಕೊಳ್ಳುತ್ತಿದೆ ಮತ್ತು ನಿಮ್ಮ ಪ್ರಗತಿಗೆ ಅಡ್ಡಿಪಡಿಸುತ್ತಿದೆ. ಇಂದು ನೀವು ನಿಮ್ಮ ಮನೆಯ ಸದಸ್ಯರನ್ನು ಎಲ್ಲಿಗಾದರೂ ಸುತ್ತಾಡಲು ಕರೆದುಕೊಂಡು ಹೋಗಬಹುದು ಮತ್ತು ನಿಮ್ಮ ಸಾಕಷ್ಟು ಹಣವು ಖರ್ಚಾಗಬಹುದು ದೂರದ ಸ್ಥಳದ ಸಂಬಂಧಿಗಳು ಇಂದು ನಿಮ್ಮನ್ನು ಸಂಪರ್ಕಿಸಬಹುದು. ನಿಮ್ಮ ಪ್ರೀತಿಪಾತ್ರರ ತೋಳುಗಳಲ್ಲಿ ನೀವು ಸಮಾಧಾನ ಪಡೆಯುವಿರಿ. ಇಂದು ನೀವು ಮನೆಯ ಕಿರಿಯ ಸದಸ್ಯರೊಂದಿಗೆ ಉದ್ಯಾನವನ ಅಥವಾ ಶಾಪಿಂಗ್ ಮಾಲ್ಗೆ ಹೋಗಬಹುದು.

### ಮಕರ ರಾಶಿ

ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ. ಯಶಸ್ಸಿಗೆ ಇಂದಿನ ಸೂತ್ರವೆಂದರೆ ನಾವೀನ್ಯತೆಯಿರವ ಮತ್ತು ಉತ್ತಮ ಅನುಭವ ಹೊಂದಿರುವ ಜನರ ಸಲಹೆಯಂತೆ ನಿಮ್ಮ ಹಣವನ್ನು ಹೂಡುವುದಾಗಿದೆ. ಮನೆಯಲ್ಲಿ ಧರ್ಮಕಾರ್ಯಗಳನ್ನು ನಡೆಸಲಾಗುವುದು.

### ಕುಂಭ ರಾಶಿ

ನಿಮ್ಮ ನಿರೀಕ್ಷೆಗಳನ್ನು ಪೂರೈಸಲು ವೈಯಕ್ತಿಕ ಸಂಬಂಧಗಳನ್ನು ದುರ್ಬಳಕೆ ಮಾಡುವುದು ನಿಮ್ಮ ಪತ್ನಿಗೆ ಕೋಪ ಬರಿಸುತ್ತದೆ. ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ. ಒಂದು ಅಂಚೆಯ ಮೂಲಕ ಬಂದ ಪತ್ರ ಇಡೀ ಕುಟುಂಬಕ್ಕೆ ಸಂತೋಷದ ಸುದ್ದಿ ತರುತ್ತದೆ. ಧೃತಿಗೆಡಬೇಡಿ – ವೈಫಲ್ಯಗಳು ಸಹಜ ಅವುಗಳು ಜೀವನದ ಸೌಂದರ್ಯವಾಗಿವೆ.

### ಮೀನ ರಾಶಿ

ಇಂದು ನೀವು ಪ್ರಮುಖ ನಿರ್ಧಾರ ಕೈಗೊಳ್ಳಬೇಕು ಇದು ನಿಮ್ಮನ್ನು ಒತ್ತಡ ಹಾಗೂ ಉದ್ವೇಗಕ್ಕೆ ಒಳಪಡಿಸುತ್ತದೆ. ದುರ್ಬಲ ಆರ್ಥಿಕ ಸ್ಥಿತಿಯಿಂದ ಕೆಲವು ಪ್ರಮುಖ ಕೆಲಸಗಳು ಸ್ಥಗಿತಗೊಳ್ಳುತ್ತವೆ. ಕೆಲವರು ಅವರಿಗೆ ಸಾಧ್ಯವಿರುವುದಕ್ಕಿಂತ ಹೆಚ್ಚು ನೀಡುವ ಭರವಸೆ ನೀಡುತ್ತಾರೆ ಕೇವಲ ಮಾತನಾಡುವ ಮತ್ತು ಯಾವುದೇ ಫಲಿತಾಂಶಗಳ ನೀಡದ ಇಂಥ ಜನರನ್ನು ಮರೆತುಬಿಡಿ.

## ಶಿಲಾಮಠಕ್ಕೆ ಬಂದಿಳಿದ ರೋಬೋಟ್ ಆನೆ



**ಚನ್ನಗಿರಿ:** ತಾಲೂಕಿನ ಮಲೆನಾಡಿನ ಸೆರಗಿನಲ್ಲಿರುವ ಅಡಿಕೆ ನಾಡಿನ ತಾವರೆಕೆರೆ ಗ್ರಾಮದಲ್ಲಿರುವ ಶಿಲಾಮಠ ನಾಡಿನ ಪ್ರಸಿದ್ಧ ಮಠಗಳಲ್ಲಿ ಒಂದಾಗಿದ್ದು ಈ ಮಠಕ್ಕೆಯಾಂತ್ರೀಕೃತವಾಗಿ ಅಳವಡಿಕೆ ಮಾಡಿರುವ ರೋಬೂಟ್ ಆನೆಯನ್ನು ಮುಂಬೈ ಮೂಲದ ಕ್ರೂಪಅಂಡ್ ಪೆಟಾ ಇಂಡಿಯಾ ಸಂಸ್ಥೆಯ ನಿರ್ದೇ ಶಕರು ಮತ್ತು ಚಿತ್ರ ನಟರಾದ ಸುನೀಲ್ ಶೆಟ್ಟಿಯವರು ಶ್ರೀ ಮಠಕ್ಕೆ ದಾನವಾಗಿ ನೀಡಿ ಲೋಕಾರ್ಪಣೆ ಗೊಳಿಸಿದ್ದಾರೆ

ಈ ರೋಬೂಟ್ ಆನೆಗೆ ಉಮಾ ಮಹೇಶ್ವರ ಎಂಬ ಹೆಸರನ್ನು ನಾಮಕರಣ ಮಾಡಿದ್ದು ನೈಜಕಾಡಿನಆನೆಯಂತೆಕಾಣುವ ಸ್ಪರ್ಷಿಸಿದರೆ ಈ ರೋಬೂಟ್ ಆನೆ ನೈಜಆನೆಯನ್ನು ಮುಟ್ಟಿದ ಅನುಭವವಾಗಲಿದೆ. ಭಾರತೀಯ ಸಂಸ್ಕೃತಿಯಲ್ಲಿಧಾರ್ಮಿಕವಾದ ಉತ್ಸವಗಳಲ್ಲಿ ಪಳಗಿಸಿರುವ ಆನೆಗಳನ್ನು ಬಳಸಿಕೊಂಡು ಉತ್ಸವ ನಡೆಸುವ ಸಂಪ್ರದಾಯ ಹಲವಾರು ವರ್ಷಗಳಿಂದ ಜಾರಿಯಲ್ಲಿದ್ದು ಪ್ರಸ್ತುತ ವಾಗಿ ವನ್ಯಜೀವಿಗಳನ್ನು ಯಾರು ಬಳಸ ಕೂಡದು ಎಂಬ ಕಾನೂನಿನ ನಿಯಮಗಳ ಪರಿಪಾಲನೆಯನ್ನುಎಲ್ಲರೂ ಮಾಡಬೇಕಾಗಿರುವುದರಿಂದ ಈ ಸಂಸ್ಥೆಯವರು ದೇವಾಲಯ ಮತ್ತು ಮಠಗಳಿಗೆ ರೋಬೂಟ್ ಆನೆಗಳನ್ನು ದಾನವಾಗಿ ನೀಡುತ್ತಿರುವುದು ಸಂಸ್ಥೆಯ ಸೇವಾ ಕಾರ್ಯಗಳಲ್ಲಿ ಒಂದಾಗಿದೆ. ಅತಿ ಹೆಚ್ಚು ಆನೆಗಳನ್ನು ಬಳಸುವಂತಹ ಕೇರಳ, ರಾಜಸ್ಥಾನ ಮತ್ತುಕರ್ನಾಟಕ ಸೇರಿದಂತೆದೇಶದ ವಿವಿಧ ಕಡೆಗಳಲ್ಲಿ 6 ರೋಬೂಟಿಕ್ ಆನೆಗಳನ್ನು ದೇಣಿಗೆಯಾಗಿ ಪೆಟಾ ಸಂಸ್ಥೆ ನೀಡಿದೆ. ಕರ್ನಾಟಕರಾಜ್ಯದಲ್ಲಿಯೇ ನಾಲ್ಕು ರೋಬೂಟಿಕ್ ಆನೆಗಳನ್ನು ದಾನ ವಾಗಿ ನೀಡಿದು ರಾಜ್ಯದಲ್ಲಿನ ಬಾಳೆಹೊನ್ನೂರು ರಂಬಾಪುರಿ ವೀರ ಸಿಂಹಾಸನ ಮಹಾಪೀಠ, ಎಡೆಯೂರುಕ್ಷೇತ್ರ, ಸುತ್ತೂರು ಮಠ ಮತ್ತು ಚನ್ನಗಿರಿತಾಲೂಕಿನ ಶಿಲಾಮಠಕ್ಕೆ ಈ ಯಾಂತ್ರೀಕೃತಆನೆಯನ್ನುದಾನವಾಗಿ ನೀಡಲಾಗಿದೆ. ಈ ರೋಬೂಟಿಕ್ಆನೆಯ ವಿಶೇಶತೆ ಎನೆಂದರೆ ಬ್ಯಾಟರಿಚಾಲಿತ ಟ್ರಾಲಿಯ ಮೂಲಕ ಮುಂದೆ ಸಂಚರಿಸಲಿದ್ದು ಇದನ್ನು ಸಿಲಿಕಾನ್ ಫೈಬರ್ ಮೆಟಿರಿಯಲ್ ನಿಂದ ತಯಾರಿಸಲಾಗಿದೆ. ಇದರತೂಕ 800ರಿಂದ 900ಕೆ.ಜಿ ಯಷ್ಟಿದ್ದು ಮೂರು ಅಡಿ ಎತ್ತರದಲ್ಲಿದೆ.

ಈ ರೋಬೂಟಿಕ್ಆನೆಯು ನೈಜಆನೆಯಂತೆ ಕಣ್ಣು ಮಿಟುಕಿಸುವುದು, ಬಾಲ ಮತ್ತು ಕಿವಿಯನ್ನುಅಲ್ಲಾಡಿಸುವುದು, ಸೊಂಡಿಲು ಎತ್ತುವುದು ನೈಜಆನೆಯಂತೆಯೇ ವರ್ತಿಸುವ ಈ ಯಾಂತ್ರೀಕೃತ ಆನೆ ಧಾರ್ಮಿಕ ಉತ್ಸವಗಳಿಗೆ ಬಳಕೆ ಮಾಡಿಕೊಳ್ಳಲು ಉತ್ತಮವಾದ ರೋಬೂಟ್ಆನೆಯಾಗಿದೆ.. ಇಂದಿನ ದಿನಮಾನಗಳಲ್ಲಿ ಕಾಡಿನಲ್ಲಿ ಇರುವಂತಹ ಅನೆಯನ್ನು ಪಳಗಿಸಿ ಇಟ್ಟುಕೊಳ್ಳುವುದು ಮೂಕ ಪ್ರಾಣಿಗಳಿಗೆ ತೊಂದರೆ ನೀಡಿದಂತೆ ಆಗುತ್ತದೆ. ಆದ್ದರಿಂದ ಇಂತಹ ರೋಬೋಟ್ ಅನೆಗಳ ಬಳಕೆ ಆಗತ್ಯವಾಗಿದೆ ಎಂದು ತಿಳಿಸಿದ್ದಾರೆ.

ಅಭಿನವ ಸಿದ್ದಲಿಂಗಶಿವಾಚಾರ್ಯ ಸ್ವಾಮಿಗಳು: ಪೆಟಾ ಇಂಡಿಯಾ ಸಂಸ್ಥೆಯು ಶ್ರೀ ಮಠಕ್ಕೆ ಕೊಡುಗೆಯಾಗಿ ನೀಡಿರುವ ಈ ರೋಬೋಟ್ ಅನೆಯು ಶ್ರೀ ಮಠಕ್ಕೆ ಒಂದು ಅಕರ್ಷಕವಾಗಿದೆ. ಅದರಂತೆ ಮಠದ ಕಾರ್ಯಕ್ರಮಗಳಿಗೆ ಇದರ ಸದ್ಬಳಕೆ ಮಾಡಿಕೊಳ್ಳಲಾಗುವುದು.

## ರಾಜಿ ಸಂಧಾನದ ಮೂಲಕ ಪ್ರಕರಣ ಇತ್ಯರ್ಥ ಪಡಿಸಿಕೊಳ್ಳಲು ಕರೆ



**ಹಾಸನ :** ರಾಷ್ಟ್ರೀಯ ಲೋಕ್ ಅದಾಲತ್ ಕಾರ್ಯಕ್ರಮದಲ್ಲಿ ಸಾರ್ವಜನಿಕ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ರಾಜಿ ಸಂಧಾನದ ಮೂಲಕ ಪ್ರಕರಣ ಇತ್ಯರ್ಥ ಪಡಿಸಿಕೊಳ್ಳುವಂತೆ ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಹೇಮಾವತಿ ಅವರು ತಿಳಿಸಿದ್ದಾರೆ.

ಜಿಲ್ಲಾ ನ್ಯಾಯಾಲಯ ಸಭಾಂಗಣದಲ್ಲಿ ಇಂದು ರಾಷ್ಟ್ರೀಯ ಲೋಕ್ ಅದಾಲತ್ ಕುರಿತು ಪತ್ರಿಕಾ ಗೋಷ್ಠಿ ನಡೆಸಿ ಮಾತನಾಡಿದ ಅವರು ಮಾರ್ಚ್ 8 ರಂದು ಹಾಸನ ಜಿಲ್ಲಾದ್ಯಂತ ಎಲ್ಲಾ ತಾಲೂಕುಗಳನ್ನೊಳಗೊಂತೆ ಎಲ್ಲಾ ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ನಡೆಯಲಿದೆ ಎಂದು ತಿಳಿಸಿದರು.

ಹಾಸನದ ಎಲ್ಲಾ ನ್ಯಾಯಾಲಯಗಳಲ್ಲಿ ಎಲ್ಲಾ ವಿಧದ ಒಟ್ಟು 90,476 ಸಿವಿಲ್ ಮತ್ತು ಕ್ರಿಮಿನಲ್ ಪ್ರಕರಣಗಳು ಬಾಕಿ ಇದ್ದು,3242 ಕ್ಕೂ ಹೆಚ್ಚಿನ ಪ್ರಕರಣಗಳು ರಾಜಿ ಪ್ರಕ್ರಿಯೆಗಾಗಿ ಗುರುತಿಸಲಾಗಿದೆ ಎಂದು ತಿಳಿಸಿದರು.

ರಾಜಿ ಸಂಧಾನಕ್ಕಾಗಿ ಎಲ್ಲಾ ರೀತಿಯ ಸಿವಿಲ್ ಮತ್ತು ಕ್ರಿಮಿನಲ್ ಪ್ರಕರಣಗಳನ್ನೊಳಗೊಂಡಂತೆ ಒಟ್ಟು 1912 ಪ್ರಕರಣಗಳಲ್ಲಿ ಪೂರ್ವ ಸಂದಾನ ಪ್ರಕ್ರಿಯೆ ನಡೆಸಲಾಗಿದ್ದು, ಇದುವರೆಗೂ ಒಟ್ಟು 418 ಪ್ರಕರಣಗಳು ಇತ್ಯರ್ಥಗೊಂಡಿವೆ ಎಂದು ತಿಳಿಸಿದರು.

ಸದರಿ ರಾಷ್ಟ್ರೀಯ ಲೋಕ್ ಅದಾಲತ್ ನಲ್ಲಿ ಬಾಕಿ ಇರುವ ಎಲ್ಲಾ ವಿಧದ ಸಿವಿಲ್ ವ್ಯಾಜ್ಯಗಳು, ಬಗೆಹರಿಸಬಹುದಾದ ಕ್ರಿಮಿನಲ್ ಪ್ರಕರಣಗಳು, ಚೆಕ್ ಬೌನ್ಸ್ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ಮೋಟಾರು ವಾಹನ ಪ್ರಕರಣಗಳು, ಕೌಟುಂಬಿಕ ಪ್ರಕರಣಗಳು, ಭೂಸ್ವಾಧೀನ ಪ್ರಕರಣಗಳು,ಕಂದಾಯ ಪ್ರಕರಣಗಳು,ಜನನ ಮತ್ತು ಮರಣ ನೊಂದಣಿ ಪ್ರಕರಣಗಳು, ಜೀವನಾಂಶ ಪ್ರಕರಣಗಳು ಹಾಗೂ ಇನ್ನಿತರ ಲಘು ಕ್ರಿಮಿನಲ್ ಪ್ರಕರಣಗಳಿಗೆ ಸಂಬಂಧಿಸಿದಂತೆ ಮತ್ತು ವ್ಯಾಜ್ಯ ಪೂರ್ವ ಬ್ಯಾಂಕ್ ಸಾಲ ಮರುಪಾವತಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಅವಕಾಶವಿದ್ದು, ಸಂಬಂದಪಟ್ಟ ಕಕ್ಷಿದಾರರು ವಕೀಲರ ಮೂಲಕ ಅಥವಾ ಖುದ್ದಾಗಿ ರಾಜಿ ಸಂಧಾನ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ತಿಳಿಸಿದರು.ರಾಜಿ ಪ್ರಕ್ರಿಯೆಯಿಂದ ಸಮಯ,ಹಣ ಉಳಿತಾಯವಿಗುತ್ತದೆ ಜೊತೆಗೆ ಕಕ್ಷಿದಾರರ ನಡುವಿನ ಬಾಂಧವ್ಯ ವೃದ್ಧಿಯಾಗುತ್ತದೆ ಎಂದರು.

ರಾಜಿ ಪ್ರಕ್ರಿಯೆಯಿಂದ ಸಮಯ,ಹಣ ಉಳಿತಾಯವಿಗುತ್ತದೆ ಜೊತೆಗೆ ಕಕ್ಷಿದಾರರ ನಡುವಿನ ಬಾಂಧವ್ಯ ವೃದ್ಧಿಯಾಗುತ್ತದೆ ಎಂದರು.

ಪ್ರತಿ ದಿನ ಪೂರ್ವ ಸಂದಾನದ ಬೈಠಕ್ ಗಳನ್ನು ಎಲ್ಲಾ ನ್ಯಾಯಾಲಯಗಳಲ್ಲೂ ನಡೆಸಲಾಗುತ್ತಿದ್ದು, ಕಕ್ಷಿದಾರರು ತಮ್ಮ ವಕೀಲರೊಂದಿಗೆ ಅಥವಾ ನೇರವಾಗಿ ನ್ಯಾಯಾಲಯಗಳಿಗೆ ಹಾಜರಾಗುವ ಮೂಲಕ ಸದರಿ ಲೋಕ್ ಅದಾಲತ್ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ತಿಳಿಸಿದರು.ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ದಾಕ್ಷಾಯಿಣಿ ಜಿ.ಕೆ.ಅವರು ಉಪಸ್ಥಿತರಿದ್ದರು.

## ಯುವಜನತೆ ಅಂಬೇಡ್ಕರ್ ಮತ್ತು ಸಂವಿಧಾನದ ಕುರಿತು ತಿಳಿಯಬೇಕು : ಎಎಸ್ಪಿ



**ಶಿವಮೊಗ್ಗ:** ಇತ್ತೀಚಿನ ದಿನಗಳಲ್ಲಿ ಸಂವಿಧಾನದ ಕುರಿತು ವ್ಯತಿರಿಕ್ತವಾಗಿ ನಡೆದುಕೊಳ್ಳಲಾಗುತ್ತಿದ್ದು, ಇಂತಹ ಸಂದರ್ಭದಲ್ಲಿ ವಿದ್ಯಾರ್ಥಿಗಳು, ಯುವ ಜನತೆ ಸಂವಿಧಾನ ಹಾಗೂ ಅಂಬೇಡ್ಕರ್ ಬಗ್ಗೆ ತಿಳಿದುಕೊಳ್ಳುವುದು ಮುಖ್ಯವಾಗಿದೆ ಎಂದು ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಅನಿಲ್ ಕುಮಾರ್ ಭೂಮರಡ್ಡಿ ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಸೋಮವಾರ ನಗರದ ಕುವೆಂಪು ರಂಗಮಂದಿರಲ್ಲಿ ಆಯೋಜಿಸಿದ್ದ ?ಅಂಬೇಡ್ಕರ್ ಓದು? ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಸಮಾಜದ ವ್ಯವಸ್ಥೆಯು ಕವಲು ಒಡೆದ ದಾರಿಯಾಗಿದೆ. ಈ ಸಮಯದಲ್ಲಿ ಅಂಬೇಡ್ಕರ್ ಕುರಿತಾದ ಇಂತಹ ಅರ್ಥಪೂರ್ಣ ಕಾರ್ಯಕ್ರಮಗಳು ರಾಜ್ಯಾದ್ಯಂತ ವರ್ಷವಿಡಿ ನಡೆಯಬೇಕು. ಆ ಮೂಲಕ ಸಂವಿಧಾನದ ಪರಿಕಲ್ಪನೆ ಎಲ್ಲರಿಗೂ ಅರ್ಥವಾಗಬೇಕು ಎಂದರು.

ಗಣರಾಜ್ಯೋತ್ಸವ ದಿನವು ದೇಶಕ್ಕೆ ಮಹೋನ್ನತವಾಗಿದೆ. ಯಾಕೆಂದರೆ ಸಂವಿಧಾನವನ್ನು ಕೂಡ ಅದೇ ದಿವಸ ಸಮರ್ಪಿಸಲಾಗಿದೆ. ನಮ್ಮ ದೇಶಕ್ಕೆ ಸಂವಿಧಾನವನ್ನು ಸಿದ್ದಪಡಿಸಲು ಅಂಬೇಡ್ಕರ್ ಒಳಗೊಂಡಂತೆ ಅನೇಕ ಮಹಾನೀಯರು ಹಲವು ದೇಶಗಳನ್ನು ಸುತ್ತಿ ಅಲ್ಲಿನ ಸಂವಿಧಾನವನ್ನು ಅಧ್ಯಯನ ಮಾಡಿ ಅದರಿಂದ ಅನೇಕ ಮಾಹಿತಿ ಹೆಕ್ಕಿ ತೆಗೆದು ಈ ದೇಶಕ್ಕೆ ಬೃಹತ್ ಸಂವಿಧಾನ ಕೊಟ್ಟಿದ್ದಾರೆ ಎಂದು ತಿಳಿಸಿದರು.

ನಮ್ಮೆಲ್ಲರ ಬದುಕಿನ ಅಸ್ತಿತ್ವ ಸಂವಿಧಾನದ ಅಡಿಯಲ್ಲಿದೆ. ಈ ನಮ್ಮ ಸಂವಿಧಾನದಲ್ಲಿ ಶರಣರು, ತುಳಿತಕ್ಕೆ ಒಳಗಾದವರ ಸಮಾನತೆಯ ಆಶಯ ಇದೆ. ಆ ದಿಸೆಯಲ್ಲಿ ಪ್ರತಿಯೊಬ್ಬರು ಸಂವಿಧಾನವನ್ನು ಅರಿತುಕೊಳ್ಳಬೇಕು. ಅದರ ಗಂಭೀರತೆ ತಿಳಿಯಬೇಕು. ಈ ಮೂಲಕ ನಾವೆಲ್ಲ ದೇಶವನ್ನು ಮುನ್ನಡೆಸಬೇಕು. ಇದನ್ನು ಮರೆತರೆ ಸಮಾಜದಲ್ಲಾಗುವ ದುಷ್ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದರು.ಕುವೆಂಪು ವಿಶ್ವವಿದ್ಯಾಲಯದ ಸಂಶೋಧನಾರ್ಥಿ ಎಂ.ಸಂಪತ್ಕುಮಾರ್ ವಿಶೇಷ ಉಪನ್ಯಾಸ ನೀಡಿ, ?ಅಂಬೇಡ್ಕರ್ ಓದು? ಎನ್ನುವುದು ಅವರ ತತ್ವ, ಆದರ್ಶಗಳ ಮೂಲಕ ಅರ್ಥೈಸಿಕೊಳ್ಳಬೇಕು. ಆದರೆ ಇತ್ತೀಚಿನ ದಿನಗಳಲ್ಲಿ ಅದನ್ನು ಮರೆತಿದ್ದಾರೆ. ಯುವಜನತೆ ಮೊಬೈಲ್ನ ಗೀಳಿಗೆ ಬಿದ್ದು ಓದುವುದನ್ನೆ ಕಡಿಮೆ ಮಾಡಿದ್ದಾರೆ ಎಂದರು.

ಧೈರ್ಯ, ಹಠ, ಛಲ ಇದ್ದರೆ ಮಾತ್ರ ನಾವು ಏನನ್ನಾದರೂ ಸಾಧಿಸಲು ಸಾಧ್ಯವೆಂದು ಬ್ರಿಟನ್ ವಿದ್ವಾಂಸರು ಹೇಳಿದ್ದಾರೆ. ಅಂಬೇಡ್ಕರ್ ಅದರಂತೆ ಬಾಳಿ ಬದುಕಿದವರು. ಆ ಮೂಲಕ ದೇಶಕ್ಕೆ ಬೃಹತ್ ಸಂವಿಧಾನ ನೀಡಿದರು. ಶಿಕ್ಷಣದಿಂದ ವಂಚಿತರಾಗಿದ್ದ ಮಹಿಳಾ ಸಮುದಾಯಕ್ಕೆ ಶಿಕ್ಷಣದ ಹಕ್ಕು ಕೊಟ್ಟು ಎಲ್ಲರಂತೆ ಸರಿಸಮಾನವಾಗಿ ಬಾಳಲು ಅವಕಾಶ ಮಾಡಿಕೊಟ್ಟರು ಎಂದರು.

ಅಂಬೇಡ್ಕರ್ ಅವರೇ ಒಂದು ಪ್ರೇರಣಾ ಶಕ್ತಿ. ಇಂದಿನ ಯುವಜನತೆ ಅವರನ್ನು ಅರ್ಥೈಸಿಕೊಂಡು ಆ ದಾರಿಯಲ್ಲಿ ಸಾಗಬೇಕು. ಅಂಬೇಡ್ಕರ್ ಅವರ ನಾಯಕತ್ವ ಗುಣವನ್ನು ಬೆಳಿಸಿಕೊಂಡು ಸಮಾಜಕ್ಕೆ ಮಾದರಿಯಾಗಬೇಕು ಎಂದರು.

?ಅಂಬೇಡ್ಕರ್ ಓದು? ಅಂಗವಾಗಿ ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ್ ರವರ ಬದುಕು ಮತ್ತು ಸಾಧನೆಗಳ ಪ್ರಬಂಧ, ರಸಪ್ರಶ್ನೆ, ಆಶುಭಾಷಣ ಹಾಗೂ ಕವನ ವಾಚನ ಸ್ಪರ್ಧೆಗಳನ್ನು ಏರ್ಪಡಿಸಲಾಗಿದ್ದು, ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಡಿ.ಮಲ್ಲೇಶಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಹೆಚ್.ಉಮೇಶ್, ಪುಸ್ತಕ ಮನೆ ಪ್ರಕಾಶಕರಾದ ಸುಂದರ್ ಹಾಗೂ ಜಿಲ್ಲೆಯ ವಿವಿಧ ತಾಲ್ಲೂಕಿನಿಂದ ವಿದ್ಯಾರ್ಥಿಗಳು ಆಗಮಿಸಿದ್ದರು.

## ಬ್ಯಾಂಕ್ ನೇಮಕಾತಿ ಪರೀಕ್ಷೆಗಳಿಗೆ ಉಚಿತ ತರಬೇತಿ

**ಹಾಸನ :** ಪ್ರತೀ ವರ್ಷವೂ ಬ್ಯಾಂಕಿಂಗ್ ಕ್ಷೇತ್ರದಲ್ಲಿ 40 ರಿಂದ 50 ಸಾವಿರ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗುವುದು, ಬ್ಯಾಂಕಿಂಗ್ ಕ್ಷೇತ್ರದಲ್ಲಿ ಕೆಲಸದ ಭದ್ರತೆಯೊಂದಿಗೆ ಉತ್ತಮ ಸಂಬಳ ನೀಡಲಾಗುತ್ತದೆ. ಯಾವುದೇ ಪದವಿ ಮುಗಿಸಿರುವ ವಿದ್ಯಾರ್ಥಿಗಳು ಈ ಬ್ಯಾಂಕ್ ನೇಮಕಾತಿ ಪರೀಕ್ಷೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಆನ್ಲೈನ್ ಪರೀಕ್ಷೆ ಮೂಲಕ ಪಾರದರ್ಶಕವಾಗಿ ನಡೆಯುವ ಈ ನೇಮಕಾತಿ ಪರೀಕ್ಷೆಗಳ ಬಗ್ಗೆ ಹೆಚ್ಚಿನ ವಿದ್ಯಾರ್ಥಿಗಳಿಗೆ ಮಾಹಿತಿ ಇರುವುದಿಲ್ಲ ಹಾಗೂ ಬ್ಯಾಂಕ್ ನೇಮಕಾತಿ ಪರೀಕ್ಷೆಗಳ ಪಠ್ಯಕ್ರಮ, ಪರೀಕ್ಷಾ ಪ್ರಕ್ರಿಯೆ, ಇದಕ್ಕೆ ಅಗತ್ಯವಿರುವ ತಯಾರಿ ಬಗ್ಗೆ ಮಾಹಿತಿ ಇರುವುದಿಲ್ಲ.

ಕರ್ನಾಟಕದೆಲ್ಲಡೆ ಬ್ಯಾಂಕ್ಗಳಲ್ಲಿ ವ್ಯವಹರಿಸುವಾಗ ಭಾಗೀಯ ಅಡಚಣೆಯಾಗಿ ಗ್ರಾಹಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಗ್ರಾಹಕರ ಸಭೆಗಳಲ್ಲಿ ಅಭಿಪ್ರಾಯ ವ್ಯಕ್ತವಾಗಿದೆ. ಈ ವಿಷಯಗಳನ್ನು ಮನದಲ್ಲಿಟ್ಟುಕೊಂಡು ಕರ್ನಾಟಕದ ಯುವ ಜನತೆ ಬ್ಯಾಂಕ್ ಪರೀಕ್ಷೆಗಳನ್ನು ಬರೆದು ಉತ್ತೀರ್ಣರಾಗಬೇಕೆಂಬ ಉದ್ದೇಶದಿಂದ ಕೃಷಿಕ್ ಸರ್ವೋದಯ ಫೌಂಡೇಶನ್ (ರಿ) ಕೇಂದ್ರ ಕಛೇರಿ, ಬೆಂಗಳೂರಿನಲ್ಲಿ ನಡೆದ ಟ್ರಸ್ಟಿಗಳ ಸಭೆಯಲ್ಲಿ ಬ್ಯಾಂಕ್ ನೇಮಕಾತಿ ಪರೀಕ್ಷೆಗಳಿಗೆ ಉಚಿತ ತರಬೇತಿ ನೀಡಲು ತೀರ್ಮಾನಿಸಲಾಗಿದೆ.

ವಿದ್ಯಾರ್ಥಿಗಳು ಅತಿ ಹೆಚ್ಚಿನ ಸಂಖ್ಯೆಯಲ್ಲಿ ಬ್ಯಾಂಕ್ ನೇಮಕಾತಿ ಪರೀಕ್ಷೆಗಳಲ್ಲಿ ಭಾಗವಹಿಸಿ ಅಧಿಕಾರಿಗಳಾಗಬೇಕೆಂಬ ಆಶಯದಿಂದ ಹಾಸನದ ಸಾಲಗಾಮೆ
ರಸ್ತೆಯಲ್ಲಿರುವ ಕೃಷಿಕ್ ಸರ್ವೋದಯ ಫೌಂಡೇಶನ್ (ರಿ) ಹಾಸನ ಶಾಖೆಯಲ್ಲಿ ನುರಿತ ವಿ?ಯ ತಜ್ಞರಿಂದ ಐ.ಬಿ.ಪಿ.ಎಸ್, ಎಸ್.ಬಿ.ಐ. ಆರ್.ಬಿ.ಐ. ಖಾಸಗಿ ಬ್ಯಾಂಕ್, ಇನ್ಸುರೆನ್ಸ್ ನೇಮಕಾತಿ ಪರೀಕ್ಷೆಗಳಿಗೆ ಉಚಿತ ತರಬೇತಿ ಅತೀ ಶೀಘ್ರದಲ್ಲಿ ಪ್ರಾರಂಭವಾಗಲಿದೆ. ಪದವೀಧರ ವಿದ್ಯಾರ್ಥಿಗಳು ಮೊಬೈಲ್ ಸಂಖ್ಯೆ 8660217739 ಕ್ಕೆ ಕರೆ ಅಥವಾ ವಾಟ್ಸಾಪ್ ಮಾಡಿ ಹೆಚ್ಚಿನ ಸಂಖ್ಯೆಯಲ್ಲಿ ಈ ಉಚಿತ ತರಬೇತಿಗೆ ಹೆಸರು ನೊಂದಾಯಿಸಿಕೊಂಡು ಈ ಅವಕಾಶದ ಸದುಪಯೋಗ ಪಡಿಸಿಕೊಳ್ಳಬಹುದೆಂದು ಕೃಷಿಕ್ ಸರ್ವೋದಯ ಫೌಂಡೇಶನ್(ರಿ) ಹಾಸನ ಶಾಖೆಯ ಗೌರವ ಕಾರ್ಯದರ್ಶಿಗಳು ತಿಳಿಸಿದ್ದಾರೆ.

## ಇಂದು ಶ್ರೀ ಮಾರ್ಕಂಡೇಶ್ವರ ಸ್ವಾಮಿಯ ಬೆಳ್ಳಿ ರಥೋತ್ಸವ




**ದಾವಣಗೆರೆ:** ನಗರದ ಎಸ್.ಕೆ.ಪಿ. ರಸ್ತೆಯಲ್ಲಿರುವ ಶ್ರೀ ಮಾರ್ಕಂಡೇಶ್ವರ ಪದ್ಮಶಾಲಿ ಸಮಾಜ ಸೇವಾ ಸಂಘ (ರಿ.) ವತಿಯಿಂದ ಮಹಾಶಿವಾರಾತ್ರಿ ಹಬ್ಬದ ಪ್ರಯುಕ್ತ ಫೆ. 26 ಹಾಗೂ 27ರಂದು ಶ್ರೀ ಮಾರ್ಕಂಡೇಶ್ವರ ದೇವಸ್ಥಾನದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಪ್ರಧಾನ ಕಾರ್ಯದರ್ಶಿ ಪಿ.ಎಸ್. ನರಸಿಂಹ ಮೂರ್ತಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,

ಫೆ. 26 ಬುಧವಾರ ಬೆಳಿಗ್ಗೆ 6–30 ರಿಂದ 8–30 ರವರೆಗೆ ಸ್ವಾಮಿಗೆ ಅಭಿಷೇಕ, ಪ್ರಾತಃಕಾಲ ಪೂಜೆ ಮತ್ತು ಸಂಜೆ 6–30 ರಿಂದ 7–30 ರವರೆಗೆ ಶ್ರೀ ಮಾರ್ಕಂಡೇಶ್ವರ ಸ್ವಾಮಿಗೆ ವಿಶೇಷ ರುದ್ರಾಭಿಷೇಕ ನೆರವೇರಲಿದೆ. ನಂತರ ಸ್ವಾಮಿಗೆ ಕ್ಷೀರಾಭಿಷೇಕ, ಶಿವ ಅಷ್ಟೋತ್ತರನಾಮವಳಿ, ತಿಲಾರ್ಚನೆ ಮಾಡಲಾಗುವುದು. ನಂತರ ಮಹಾಮಂಗಳಾರತಿ ಮಂತ್ರ ಪುಷ್ಪಗಳಿಂದ ಅರ್ಚನೆ ಹಾಗೂ ರಾತ್ರಿ 8–30ಕ್ಕೆ ತೀರ್ಥ ಪ್ರಸಾದ ಫಲಹಾರ ವಿನಿಯೋಗ ಮಾಡಲಾಗುತ್ತದೆ ಎಂದರು.

ಸಂಘದ ಅಧ್ಯಕ್ಷ ಬೊಮ್ಮ ತಿಪ್ಪೇಸ್ವಾಮಿ ಮಾತನಾಡಿ, ಫೆ.27 ಗುರುವಾರ ಬೆಳಿಗ್ಗೆ 9 ಗಂಟೆಗೆ ನಗರದ ಪ್ರಮುಖ ಬೀದಿಗಳಲ್ಲಿ ಶ್ರೀ ಭಕ್ತ ಮಾರ್ಕಂಡೇಶ್ವರ ಸ್ವಾಮಿಯ ಬೆಳ್ಳಿ ರಥೋತ್ಸವ ನೆರವೇರುತ್ತದೆ. ಮೆರವಣಿಗೆಯಲ್ಲಿ ಮಹಿಳೆಯರು. ಕಳಸ ಹಾಗೂ ಆರತಿಯೊಂದಿಗೆ ಆಗಮಿಸಲಿದ್ದು, ವಾಲಗ,ಡೊಳ್ಳು ಬಾರಿಸಲಾಗುವುದು. ನಂತರ ಸಮಾಜದ ಗುರುಳಾದ ಶ್ರೀ ಪ್ರಭುಲಿಂಗ ಸ್ವಾಮಿಗಳು ತುಮ್ಮಿನಕಟ್ಟೆ ಗುರು ಸಂಸ್ಥಾನದ ಶ್ರೀ ಪ್ರಭುಲಿಂಗಸ್ವಾಮಿಗಳು ಆಶೀರ್ವಚನ ನೀಡಲಿದ್ದಾರೆ. ನಂತರ 1–30ಕ್ಕೆ ಅನ್ನಸಂತರ್ಪಣೆ ನಡೆಯಲಿದೆ ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ, ಸಂಘದ ಪದಾಧಿಕಾರಿಗಳಾದ ಸತ್ಯನಾರಾಯಣ ಸೇಪುರ್, ಅರಳೆ ಲಿಂಗಪ್ಪ, ಡಿ.ಎಸ್.ಕೆ ಪರಶುರಾಮ್, ಟಿ.ಎಸ್. ರವಿಕುಮಾರ್, ಮಂಜುನಾಥ್, ಚಂದ್ರಪ್ಪ ಉಪಸ್ಥಿತರಿದ್ದರು.

## ಆಯವ್ಯಯ ಅಂದಾಜು ಪಟ್ಟಿ ತಯಾರಿಸುವ ಸಭೆ

**ಹಾಸನ :** ಕರ್ನಾಟಕ ಮುನಿಸಿಪಾಲಿಟಿ ಮತ್ತು ಬಜೆಟಿಂಗ್ ರೂಲ್ಸ್–2006 ನಿಯಮ 133(2), ಪ್ರಕಾರ ಹಾಸನ ನಗರಸಭೆಯ 2025–26 ನೇ ಸಾಲಿನ ಆಯವ್ಯಯ ಅಂದಾಜು ಪಟ್ಟಿ ತಯಾರಿಸುವ ಸಂಬಂಧ ನೊಂದಾಯಿತ ವಸತಿ ಕ್ಷೇಮಾಭಿವೃದ್ಧಿ ಸಂಘಗಳು, ನೊಂದಾಯಿತ ಸರ್ಕಾರೇತರ ಸಂಘ ಸಂಸ್ಥೆಗಳು, ವಾಣಿಜ್ಯ ಮತ್ತು ಕೈಗಾರಿಕಾ ಸಂಘಗಳು, ಇತರೆ ಸಂಘ ಸಂಸ್ಥೆಗಳ ಪ್ರತಿನಿಧಿಗಳು, ರಾಜಕೀಯ ಮುಖಂಡರುಗಳು,
ಹಿರಿಯ ನಾಗರೀಕರು, ಮಾದ್ಯಮದವರು ಮತ್ತು ಸಾರ್ವಜನಿಕ ಅಭಿಪ್ರಾಯಗಳನ್ನು ಸಂಗ್ರಹಿಸಲು ಎರಡನೇ ಸುತ್ತಿನ ಸಾರ್ವಜನಿಕ ಸಮಾಲೋಚನೆ ಸಭೆಯನ್ನು ಫೆ.28 ರಂದು ಅಪರಾಹ್ನ 3.30 ಗಂಟೆಗೆ, ಮಾನ್ಯ ಅಧ್ಯಕ್ಷರು ನಗರಸಭೆ,ಹಾಸನ ರವರ ಅಧ್ಯಕ್ಷತೆಯಲ್ಲಿ ನಗರದ ಸಂತೇಪೇಟೆ ಬಿ.ಎಂ ರಸ್ತೆಯಲ್ಲಿರುವ ನಗರಸಭೆಯ “ಕುವೆಂಪು ಸಭಾಂಗಣ? ದಲ್ಲಿ ನಡೆಸಲಾಗುವುದು.

ಸದರಿ ಸಭೆಗೆ ಸಾರ್ವಜನಿಕರು, ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಸಮಾಜ ಸೇವಕರು ಹಾಗೂ ರಾಜಕೀಯ ಮುಖಂಡರುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಅಮೂಲ್ಯ ಸಲಹೆಗಳನ್ನು ನೀಡಿ ನಗರಸಭೆಯ 2025–26 ನೇ ಸಾಲಿನಲ್ಲಿ ನಗರದ ಅಭಿವೃದ್ಧಿಗೆ ಸಂಬಂಧಿಸಿದಂತೆ, ಚರ್ಚಿಸಿ ಸಭೆಯನ್ನು ಯಶಸ್ವಿಗೊಳಿಸುವಂತೆ ನಗರಸಭೆಯ ಪೌರಾಯುಕ್ತರು ತಿಳಿಸಿದ್ದಾರೆ.

## ಹುಚ್ಚವ್ವನಹಳ್ಳಿ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ನಿರ್ದೇಶಕರ ಆಯ್ಕೆ



**ಜಗಳೂರು:** ತಾಲ್ಲೂಕಿನ ಹುಚ್ಚವನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ನಿರ್ದೇಶಕರ ಆಯ್ಕೆಗೆ ಚುನಾವಣೆಯು ಶಾಂತಿಯುತವಾಗಿ ನಡೆಯಿತು.

ಸಂಘದಲ್ಲಿ ಒಟ್ಟು 12 ಸ್ಥಾನಗಳಿಗೆ 24 ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದು, ಸೊಸೈಟಿ ವ್ಯಾಪ್ತಿಗೆ ಹುಚ್ಚವನಹಳ್ಳಿ , ಕಾನನಕಟ್ಟೆ , ಹೊಸ ಕಾನನಕಟ್ಟೆ , ಬಂಗಾರಕ್ಕನಗುಡ್ಡ , ಮಾದವ ಮುತ್ತೇನಹಳ್ಳಿ , ಕೊರಚರಹಟ್ಟಿ , ತಾಯಿಟೋಣಿ , ದಿಬ್ಬದಹಳ್ಳಿ , ಗ್ರಾಮ ವ್ಯಾಪ್ತಿಯ ಖಾತೆದಾರ ಮತದಾರರು ಒಟ್ಟು 540 ಮತಗಳಿದ್ದು ಭಾನುವಾರ ನಡೆದ ಚುನಾವಣೆಯಲ್ಲಿ 470 ಮತ ಚಲಾವಣೆಯಾಗಿ ಅದರಲ್ಲಿ 19 ಮತಗಳು ತಿರಸ್ಕತವಾಗಿವೆ.

ಅಂತಿಮವಾಗಿ 12 ಅಭ್ಯರ್ಥಿಗಳು ಆಯ್ಕೆಯಾಗಿದ್ದು ಸಾಲಗಾರರ ಕ್ಷೇತ್ರದಿಂದ ಸಾಮಾನ್ಯ ಅಭ್ಯರ್ಥಿ ಗಳಾದ ತಾಯಿಟೋಣಿ ಅರವಿಂದ್ ಪಾಟೀಲ್ , ಹುಚ್ಚವನಹಳ್ಳಿ ಆರ್.ಟಿ.ಮಹೇಶ್ , ಹೊಸ ಕಾನನಕಟ್ಟೆ ಕೆ.ಎಸ್.ಪ್ರಭು , ಹುಚ್ಚವನಹಳ್ಳಿ ಟಿ.ಆರ್. ಹನುಮಂತರೆಡ್ಡಿ , ಕೊರಚರಹಟ್ಟಿ ನಾಗಮ್ಮ , ಜಯಗಳಿಸಿದರೆ ಮಹಿಳಾ ಮೀಸಲಾತಿ ಅಭ್ಯರ್ಥಿಗಳಾದ ಕಾನನಕಟ್ಟೆ ಕಮಲಮ್ಮ , ಹುಚ್ಚವನಹಳ್ಳಿ ಶಾರದಮ್ಮ , ಹಿಂದುಳಿದ ವರ್ಗ ಎ .ಅಭ್ಯರ್ಥಿ ದಿಬ್ಬದಹಳ್ಳಿ ನಜೀರ್ ಅಹಮದ್ , ಬಿ.ವರ್ಗದಲ್ಲಿ ಹುಚ್ಚವನಹಳ್ಳಿ ಲತಾ ಕುಮಾರಿ , ಪರಿಶಿಷ್ಟ ಪಂಗಡ ಮೀಸಲಾತಿ ಅಭ್ಯರ್ಥಿ ಕಾನನಕಟ್ಟೆ ಬೊಮ್ಮಲಿಂಗಪ್ಪ , ಪರಿಶಿಷ್ಟ ಜಾತಿ ಅಭ್ಯರ್ಥಿ ಎಸ್.ತಿಪ್ಪೇಸ್ವಾಮಿ ಮತ್ತು ಸಾಲಗರರಲ್ಲದ ಕ್ಷೇತ್ರದಿಂದ ತಾಯಿಟೋಣಿ ಸಂಜಯ್ ಕುಮಾರ್ ಒಟ್ಟು 12 ಅಭ್ಯರ್ಥಿಗಳು ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿಯಾಗಿ ಕಾರ್ಯನಿರ್ವಹಿಸಿದ ಹರೀಶ್ ಕುಮಾರ್ ಘೋಷಿಸಿದ್ದಾರೆ.

# ನಿಧನ ಸುದ್ಧಿಗಳು

### ನಾಗಮ್ಮ ನಿಧನ

**ಚಿಕ್ಕಮಗಳೂರು:** ಶಿವಮೊಗ್ಗ ಹೊರವಲಯದ ಗೋಂಧಿ ಚಟ್ನಹಳ್ಳಿ ಗ್ರಾಮದ ನಾಗಮ್ಮ(72) ಅನಾರೋಗ್ಯದಿಂದಾಗಿ ಸೋಮವಾರ ಮಧ್ಯಾಹ್ನ ಮೃತಪಟ್ಟಿದ್ದಾರೆ.ಕನ್ನಡಪ್ರಭ ಹಿರಿಯವರದಿಗಾರ ಆರ್. ತಾರಾನಾಥ್ ಸೇರಿದಂತೆ ಇಬ್ಬರು ಪುತ್ರರು ಹಾಗೂ ಓರ್ವ ಪುತ್ರಿಯನ್ನು ಅಗಲಿದ್ದಾರೆ. ಮೃತರ ಅಂತ್ಯ ಸಂಸ್ಕಾರ ಮಂಗಳವಾರ ಮಧ್ಯಾಹ್ನ ಗೋಂಧಿಚಟ್ನಹಳ್ಳಿ ಗ್ರಾಮದಲ್ಲಿ ನಡೆದಿದೆ ಎಂದು ಕುಟುಂಬದವರು ತಿಳಿಸಿದ್ದಾರೆ.

### ಜೆ.ಕೆ.ಮಲ್ಲಿಕಾರ್ಜುನ್ ನಿಧನ

**ಬೆಂಗಳೂರು :** ಬೆಂಗಳೂರು ಕೋರಮಂಗಲ ನ್ಯಾಷನಲ್ ಗೇಮ್ಸ್ ವಿಲೇಜ್ ವಾಸಿ ದಿವಂಗತ ಸೂರಡ್ಡಿಹಳ್ಳಿ ಬಾಂಬೆ ಜವಳಿ ಕೊಟ್ರಪ್ಪನವರ ಹಿರಿಯ ಮಗ ಜೆ.ಕೆ.ಮಲ್ಲಿಕಾರ್ಜುನ್ (79) (ನಿವೃತ್ತ ಕೃಷಿ ಅಧಿಕಾರಿ, ದಾವಣಗೆರೆ) ಇವರು ದಿನಾಂಕ 24.02.2025ರ ಸೋಮವಾರ ತಮ್ಮ ಬೆಂಗಳೂರಿನ ನಿವಾಸದಲ್ಲಿ ಬೆಳಿಗ್ಗೆ 6.30ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಮೂವರು ಪುತ್ರರು, ಸೊಸೆಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 25.2.2025ರ ಮಧ್ಯಾಹ್ನ 2 ಗಂಟೆಗೆ ಬೆಂಗಳೂರಿನ ಬನಶಂಕರಿ ವೀರಶೈವ ರುದ್ರಭೂಮಿಯಲ್ಲಿ ನೆರವೇರಿಸಲಾಗಿದೆ.

## ತ್ರಿಪದಿಗಳ ಮೂಲಕ ಸಮಾಜಕ್ಕೆ ತನ್ನದೇ ಆದ ಕೊಡುಗೆ

**ಚಿಕ್ಕಮಗಳೂರು:** ಸಮಾಜದ ಹುಳುಕುಗಳನ್ನು ಜನರ ಆಡು ಭಾಷೆಯಲ್ಲೇ ತ್ರಿಪದಿಗಳನ್ನು ರಚಿಸಿ ಸಮಾಜದ ಅಂಕು ಡೊಂಕುಗಳನ್ನು ತಿದ್ದಿದ ಸಮಾಜ ಸುಧಾರಕ ಸರ್ವಜ್ಞ ಎಂದು ನಗರಸಭಾ ಅಧ್ಯಕ್ಷೆ ಸುಜಾತ ಶಿವಕುಮಾರ್ ಹೇಳಿದ್ದಾರೆ. ಜಿಲ್ಲಾಡಳಿತದ ವತಿಯಿಂದ ಗುರುವಾರ ನಗರದ ಕುವೆಂಪು ಕಲಾಮಂದಿರದಲ್ಲಿ ಏರ್ಪಡಿಸಲಾಗಿದ್ದ ಸಂತ ಕವಿ ಸರ್ವಜ್ಞ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ತ್ರಿಪದಿಗಳ ಮೂಲಕ ಕನ್ನಡ ಸಾಹಿತ್ಯ ಸಿರಿಗೆ ಅಮೂಲ್ಯ ಕೊಡುಗೆ ನೀಡಿದ ಶ್ರೇಷ್ಠ ವಚನಕಾರರಾಗಿ 16ನೇ ಶತಮಾನದಲ್ಲಿ ವಿಶ್ವಮಾನವ ಸಂದೇಶವನ್ನು ಸಾರಿದ ಸಂತರಾಗಿದ್ದ-ರೆಂದ ಅವರು ಯಾವುದೇ ಒಂದು ಜಾತಿಗೆ ಸೀಮಿತರಾಗದೆ ಸಮಾಜದಲ್ಲಿ ಎಲ್ಲ ವರ್ಗದ ಹಾಗೂ ಎಲ್ಲ ರಂಗಗಳಲ್ಲಿರುವ ಅಂಧಕಾರವನ್ನು ತೊಡೆದು ಹಾಕಲು ಶ್ರಮಿಸಿದ ಮಹಾನ್ ಚೇತನರಾಗಿದ್ದರು. ಅವರ ಆದರ್ಶಗಳು ಎಲ್ಲ ಕಾಲಕ್ಕೂ ಅನ್ವಯವಾಗಲಿದೆ ಎಂದರು. ಸಣ್ಣ ಸಣ್ಣ ಸಮುದಾಯಗಳು ಒಗ್ಗಟ್ಟಾಗಿ ಸರ್ಕಾರದ ಸೌಲಭ್ಯಗಳನ್ನು ಬಳಸಿಕೊಂಡು ಆರ್ಥಿಕವಾಗಿ ಸದೃಢರಾಗಬೇಕು. ಕುಂಬಾರ ಸಮಾಜ ತನ್ನ ವಂಶಪಾರಂಪರವಾಗಿ ಬಂದಿರುವ ಸಾಂಪ್ರದಾಯ ಕಲೆಗಳನ್ನು ಉಳಿಸಿ ಬಳಸಿಕೊಂಡು ಹೋಗಬೇಕು ಎಂದು ಹೇಳಿದರು. ಉಪತಹಸೀಲ್ದಾರ್ ರಾಮರಾವ್ ದೇಸಾಯಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ ಸರ್ವಜ್ಞರ ಹೆಸರೇ ಸೂಚಿಸಿದಂತೆ ತಮ್ಮ ವಚನಗಳ ಮೂಲಕ ಸಮಾಜದಲ್ಲಿನ ಮೌಢ್ಯತೆಯನ್ನು ತೆಗೆದು ಹಾಕಲು ಹಾಗೂ ತ್ರಿಪದಿಗಳ ಮೂಲಕ ಜಾಗೃತಿ ಮೂಡಿಸಿದ್ದ ಮಹಾನ್ ಸಂತ, ಸರ್ವಜ್ಞನ ಕವಿಯಾಗಿ ಪ್ರಸಿದ್ಧಿ ಹೊಂದಿದ್ದರು ಎಂದರು.

## ಗ್ರಾಹಕರ ಸೋಗಿನಲ್ಲಿ ಚಿನ್ನದ ಸರ ಅಪಹರಣ

**ಶಿವಮೊಗ್ಗ:** ಗ್ರಾಹಕರ ಸೋಗಿನಲ್ಲಿ ಆಗಮಿಸಿ ನಕಲಿ ಚಿನ್ನದ ಸರವಿಟ್ಟು, ಅಸಲಿ ಚಿನ್ನದ ಸರ ಅಪಹರಿಸಲು ಯತ್ನಿಸಿದ ಇಬ್ಬರು ಮಹಿಳೆಯರನ್ನು, ಸ್ವತಃ ಚಿನ್ನಾಭರಣ ಅಂಗಡಿಯವರೇ ಹಿಡಿದು ಪೊಲೀಸರ ವಶಕ್ಕೊಪ್ಪಿಸಿದ ಘಟನೆ ಶಿವಮೊಗ್ಗ ನಗರದ ಗಾಂಧಿಬಜಾರ್ ರಸ್ತೆಯಲ್ಲಿ ನಡೆದಿದೆ.ಫೆ.18 ರ ಮಧ್ಯಾಹ್ನ ಸದರಿ ಘಟನೆ ನಡೆದಿದೆ. ಆರ್.ಎಂ.ಎಲ್ ನಗರದ ಇಬ್ಬರು ನಿವಾಸಿಗಳೇ ಆಪಾದಿತ ಮಹಿಳೆಯರೆಂದು ಗುರುತಿಸಲಾಗಿದೆ. ಇವರ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿಕೊಂಡು, ತನಿಖೆ ಮುಂದುವರಿಸಿದ್ದಾರೆ.ಘಟನೆಯ ಹಿನ್ನೆಲೆ: ಗಾಂಧಿ ಬಜಾರ್ ರಸ್ತೆಯ ಕಿರಣ್ ಷಾ ಎಂಬುವರಿಗೆ ಸೇರಿದ ಷಾ ಸದಾಜೀ ಸೋಗ್ ಮಲ್ ಜೀ ಜ್ಯುವೆಲರ್ಸ್ ಅಂಗಡಿಗೆ, ಫೆ. 18 ರ ಮಧ್ಯಾಹ್ನ 2. 40 ರ ಸುಮಾರಿಗೆ ಬುರ್ಖಾ ಧರಿಸಿದ್ದ ಆರೋಪಿತ ಇಬ್ಬರು ಮಹಿಳೆಯರು ಆಗಮಿಸಿದ್ದಾರೆ.15 ರಿಂದ 20 ಗ್ರಾಂ ತೂಕದ ಬಂಗಾರದ ಸರ ತೋರಿಸುವಂತೆ ಆಪಾದಿಯತೆಯರು, ಅಂಗಡಿಯವರಿಗೆ ತಿಳಿಸಿದ್ದಾರೆ. ಅದರಂತೆ ಬಂಗಾರದ ಸರಗಳಿದ್ದ ಟ್ರೇಯನ್ನು ಅಂಗಡಿಯವರು ತೋರಿಸಿದ್ದಾರೆ. ನಂತರ ಅಂಗಡಿಯವರು, ಇತರೆ ಗ್ರಾಹಕರ ಕಡೆಗೆ ಗಮನ ಹರಿಸಿದ್ದಾರೆ.ಈ ವೇಳೆ ಆಪಾದಿತಯೋರ್ವಳು, ತನ್ನ ಕೈಯಲ್ಲಿಟ್ಟುಕೊಂಡಿದ್ದ ನಕಲಿ ಸರವನ್ನು ಟ್ರೇಯಲ್ಲಿಟ್ಟು, ಅಸಲಿ ಸರವನ್ನು ಮುಂಗೈ ಮೂಲಕ ಬಟ್ಟೆಯೊಳಗೆ ಹಾಕಿಕೊಂಡಿದ್ದಾಳೆ. ನಂತರ ಟ್ರೇಯನ್ನು ಅಂಗಡಿಯವರಿಗೆ ನೀಡಿದ್ದಾರೆ. ಅಂಗಡಿಯವರು ಟ್ರೇಯಲ್ಲಿದ್ದ ಬಂಗಾರದ ಸರ ಪರಿಶೀಲಿಸಿದ್ದಾರೆ. ಕಂಪ್ಯೂಟರ್ ಸ್ಲಿಪ್ ಟ್ಯಾಗ್'ಗೆ ಬದಲಾಗಿ, ಕೈಬರಹದ ಸ್ಲಿಪ್ ಟ್ಯಾಗ್ ಇದ್ದ ಸರವೊಂದು ಟ್ರೇಯಲ್ಲಿರುವುದು ಪತ್ತೆಯಾಗಿದೆ. ಆಪಾದಿತೆಯರ ಮೇಲೆ ಅನುಮಾನಗೊಂಡು ವಿಚಾರಿಸಿದ್ದಾರೆ. ತಮಗೆ ಗೊತ್ತಿಲ್ಲವೆಂದು ತಿಳಿಸಿದ್ದಾರೆ. ನಂತರ ಅಂಗಡಿಯೊಳಗಿದ್ದ ಸಿಸಿ ಕ್ಯಾಮರಾ ಪರಿಶೀಲನೆ ನಡೆಸಿದಾಗ ಸರ ಕಳವು ಮಾಡಿರುವುದು ಬೆಳಕಿಗೆ ಬಂದಿದೆ.ನಂತರ ಅವರಿಂದ ಅಸಲಿ ಬಂಗಾರದ ಸರ ಪಡೆದುಕೊಂಡು, ಕೋಟೆ ಪೊಲೀಸ್ ಠಾಣೆಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕಾಗಮಿಸಿದ ಪೊಲೀಸರು ಇಬ್ಬರು ಮಹಿಳೆಯರನ್ನು ವಶಕ್ಕೆ ಪಡೆದು ಕರೆದೊಯ್ದಿದ್ದಾರೆ.

## ಹತ್ತಿಪ್ಪತ್ತು ಶಾಸಕರನ್ನು ಕಟ್ಕೊಂಡು ಸಿಎಂ ಆಗೋಕಾಗುತ್ತಾ?: ಡಿಕೆಶಿಗೆ ಜಿಟಿಡಿ ಟಾಂಗ್!

**ಮೈಸೂರು:** ಜೆಡಿಎಸ್ ಪಕ್ಷದ ಶಾಸಕ ಮತ್ತು ಹಿರಿಯ ರಾಜಕಾರಣಿ ಜಿಟಿ ದೇವೇಗೌಡ ಈಗ ಕಾಂಗ್ರೆಸ್ ಮುಖಂಡನಂತೆ ಮಾತಾಡುತ್ತಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಬಹಳ ಅದೃಷ್ಟವಂತ ಮನುಷ್ಯ, ಅವರಂತಹ ಅದೃಷ್ಟ ಯಾರಿಗೂ ಬರುವುದಿಲ್ಲ ಎಂದು ಚಾಮುಂಡೇಶ್ವರಿ ಕ್ಷೇತ್ರದ ಜೆಡಿಎಸ್ ಶಾಸಕ ಜಿ.ಟಿ.ದೇವೇಗೌಡ ಅಭಿಪ್ರಾಯ ಪಟ್ಟಿದ್ದಾರೆ. ಮೈಸೂರಿನಲ್ಲಿ ಮಾತನಾಡಿದ ಉಖಿ ದೇವೇಗೌಡ, ಮುಖ್ಯಮಂತ್ರಿ ಬದಲಾವಣೆ ಎನ್ನುವ ವಿಚಾರವನ್ನು ಕೇಳಿ ಕೇಳಿ ಸಾಕಾಗಿ ಹೋಗಿದೆ. ಮುಖ್ಯಮಂತ್ರಿ ಬದಲಾವಣೆ ಆಗಲು ಶಾಸಕರ ಬಲ ಬೇಡವೇ" ಎಂದು ಜಿ.ಟಿ.ದೇವೇಗೌಡ ಹೇಳಿದ್ದಾರೆ. ಆ ಮೂಲಕ, ಪರೋಕ್ಷವಾಗಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿರುದ್ಧ ಮಾತನಾಡಿದ್ದಾರೆ.ಬರೀ ಸಿಎಂ ಬದಲಾವಣೆ ಎಂದು ಹೇಳಿಕೆ ನೀಡುತ್ತಿದ್ದರೆ ಆಗುವುದಿಲ್ಲ. ಜನರಿಗೂ ಈ ಮಾತನ್ನು ಕೇಳಿಕೇಳಿ ಬೇಸರವಾಗಿ ಹೋಗಿದೆ. ಮುಖ್ಯಮಂತ್ರಿಯಾಗಲು ಹತ್ತಿಪ್ಪತ್ತು ಶಾಸಕರ ಬೆಂಬಲವಿದ್ದರೆ ಸಾಲುವುದಿಲ್ಲ, ಮುಖ್ಯಮಂತ್ರಿಯಾಗಲು ಎಲ್ಲ 138 ಕಾಂಗ್ರೆಸ್ ಶಾಸಕರ ಬೆಂಬಲ ಬೇಕು ಎಂದು ಜಿ.ಟಿ.ದೇವೇಗೌಡ ಹೇಳಿದ್ದಾರೆ. ಕಾಂಗ್ರೆಸ್ ನಲ್ಲಿ ಸಿಎಂ ಬದಲಾವಣೆ ಚರ್ಚೆ ಬೆನ್ನಲ್ಲೇ ಜಿ.ಟಿ.ದೇವೇಗೌಡರ ಹೇಳಿಕೆ ಮಹತ್ವಪಡೆದುಕೊಂಡಿದೆ.ಮುಂದೊಂದು ದಿನ ಡಿಕೆ ಶಿವಕುಮಾರ್ ರಾಜ್ಯದ ಮುಖ್ಯಮಂತ್ರಿ ಆಗೋದು ನಿಶ್ಚಿತ, ಅದನ್ನು ಮನಸ್ಸಿನಲ್ಲಿಟ್ಟುಕೊಂಡೇ ಅವರು ಕೆಲಸ ಮಾಡುತ್ತಿದ್ದಾರೆ, ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಲು ಹೇಗೆ ಶಿವಕುಮಾರ್ ಬೆಂಬಲ ನೀಡಿದ್ದರೋ ಸಿದ್ದರಾಮಯ್ಯ ಸಹ ಆ ಋಣವನ್ನು ತೀರಿಸಲಿದ್ದಾರೆ ಎಂದು ದೇವೇಗೌಡ ಹೇಳಿದರು. ಹತ್ತಿಪ್ಪತ್ತು ಶಾಸಕರನ್ನು ಕಟ್ಟಿಕೊಂಡು ಸಿಎಂ ಅಗೋದು ಸಾಧ್ಯವಿಲ್ಲ ಅಂತ ಅವರು ಶಿವಕುಮಾರ್ ಕುರಿತು ಹೇಳಿದಂತಿತ್ತು.



# ಮಾಲ್ಗುಡಿ ಡೇಸ್ ನೆನಪುಗಳೊಂದಿಗೆ ಹೆಜ್ಜೆ

'ತಾ ನಾನಾ ತಾನಾ ನಾನಾ ನಾ...' ಈಥೀಮ್ಯೂಸಿಕ್ ಅನ್ನು ಕೇಳಿದೊಡನೆ ಥಟ್ಟನೇ ನೆನಪಾಗುವುದೇ 80-90ರ ದಶಕದ ದೂರದರ್ಶನದ ಪ್ರಸಿದ್ಧ ಧಾರಾವಾಹಿ 'ಮಾಲ್ಗುಡಿ ಡೇಸ್'. ಈ ಧಾರಾವಾಹಿಯನ್ನು ನೋಡಿದಾಗಲೆಲ್ಲಾ ಮತ್ತೆ ಬಾಲ್ಯದ ದಿನಗಳು ನೆನಪಾಗುತ್ತವೆ. ಆರ್.ಕೆ.ನಾರಾಯಣ್ ಅವರಂತಹ ಹೆಸರಾಂತ ಕಾದಂಬರಿಕಾರರ ಸಣ್ಣ ಕಥಾ ಸಂಗ್ರಹವೇ ಇದರ ಆತ್ಮ. ಅವರ ಕಿರಿಯ ಸಹೋದರ ಮತ್ತು ಖ್ಯಾತ ವ್ಯಂಗ್ಯಚಿತ್ರಕಾರ ಆರ್.ಕೆ. ಲಕ್ಷ್ಮಣ್ ಅವರ ಸ್ಕೆಚ್ ವರ್ಕ್ , ಕರ್ನಾಟಕ ಸಂಗೀತಗಾರ ಎಲ್. ವೈದ್ಯನಾಥನ್ ಅವರ ಸಂಗೀತ ಇರುವ ಈ ಕಥಾ ಸರಣಿಯನ್ನು ಕನ್ನಡದ ಜನಪ್ರಿಯ ನಟ ಮತ್ತು ನಿರ್ದೇಶಕ ಶಂಕರ್ ನಾಗ್ ನಿರ್ದೇಶಿಸಿದ್ದರು. ಅನಂತ್ನಾಗ್ ಸೇರಿದಂತೆ ಅನೇಕ ರಂಗಭೂಮಿ ಕಲಾವಿದರು ನಟಿಸಿದ್ದರು. ಮಾಲ್ಗುಡಿ ಎಂಬುದೊಂದು ಕಾಲ್ಪನಿಕ ಗ್ರಾಮ. ಆದರೂ ಇಂದಿಗೂ ಹಲವಾರು ವಿಷಯಗಳಿಗಾಗಿ 'ಮಾಲ್ಗುಡಿ ಡೇಸ್' ನಮ್ಮ ಮನಸ್ಸಿನಲ್ಲಿ ಬೇರೂರಿದೆ. ಆಗುಂಬೆಯ ಸುತ್ತಮುತ್ತಲಿನ ಪರಿಸರದಲ್ಲಿ ಚಿತ್ರೀಕರಣಗ-ೊಂಡ ಈ ಧಾರಾವಾಹಿಯ ಪ್ರತಿಯೊಂದು ಸಂಚಿಕೆಯುಸೊಗಸಾಗಿತ್ತು. ಇದರಲ್ಲಿ ಬರುವ 'ಸ್ವಾಮಿ' (ಮಾಸ್ಟರ್ ಮಂ ಜುನಾಥ್) ಪಾತ್ರವನ್ನು ಮರೆಯಲು ಹೇಗೆ ಸಾಧ್ಯ?

ಮಾಲ್ಗುಡಿ ಎಂದಾಕ್ಷಣ ಸಂಗೀತ ಹೇಗೆ ನೆನಪಾಗುವುದೋ, ಹಾಗೆಯೇ ಅದರಲ್ಲಿಮೂಡಿ ಬಂದ ರೈಲು ನಿಲ್ದಾಣ ಸಹ. ಇಷ್ಟೆಲ್ಲಾ ಓದಿದ ಬಳಿಕ ನಿಮಗೇನಾದರೂ 'ಛೇ ! ಆಮಾಲ್ಗುಡಿ ಡೇಸ್ನ ರೈಲು ನಿಲ್ದಾಣವನ್ನು ನೋಡಲು ಸಿಗುವಂತಿದ್ದರೆ ಎಷ್ಟು ಚೆನ್ನಾಗಿರುತ್ತಿತ್ತು' ಎಂದೆನಿಸಿದರೆ ಈಗಲೂ ಅದಕ್ಕೆ ಅವಕಾಶವಿದೆ.

ಶಿವಮೊಗ್ಗದಿಂದ 34 ಕಿಲೋ ಮೀಟರ್ ದೂರದಲ್ಲಿರುವ ಅರಸಾಳು ಗ್ರಾಮದ ರೈಲು ನಿಲ್ದಾಣದಲ್ಲಿ ಇಂಥ ಅಪರೂಪದಮಾಲ್ಗುಡಿ ಡೇ ಸ್ಯೂಸಿಯಂ ಇದೆ. ಮಂಗಳವಾರಹೊರತುಪಡಿಸಿ ಎಲ್ಲಾ ದಿನಗಳಲ್ಲಿ ಬೆಳಿಗ್ಗೆ 10 ರಿಂದ ಸಂಜೆ 6ರವರೆಗೆ ತೆರೆದಿರುತ್ತದೆ. 5 ನೀಡಿ ಒಳಗೆ ಪ್ರವೇಶಿಸುತ್ತಿದ್ದಂತೆ ಮಾಲ್ಗುಡಿ ಡೇಸ್ ಹಿನ್ನೆಲೆ ಸಂಗೀತ ಕಿವಿ ತುಂಬಿಕೊಳ್ಳುತ್ತದೆ. ಅದು ನಮ್ಮನ್ನು ಮತ್ತೆ ಮಾಲ್ಗುಡಿ ದಿನಗಳಿಗೆ ಕರೆದೊಯ್ಯುತ್ತದೆ. ಇದನ್ನು 2019-20 ರಲ್ಲಿ ಮೈಸೂರು ರೈಲ್ವೆ ವಿಭಾಗವು ಸ್ಥಾಪಿಸಿತು. ಈಗಲೂ ಇದರ ನಿರ್ವಹಣೆಯನ್ನು ರೈಲ್ವೆ ಇಲಾಖೆಯೇ ಮಾಡುತ್ತಿದೆ. ಅರಸಾಳು ನಿಲ್ದಾಣದಿಂದ ಮಾಲ್ಗುಡಿಮ್ಯೂಸಿಯಂ ನತ್ತ ಹೆಜ್ಜೆ ಹಾಕುತ್ತಿದ್ದಂತೆ ಸುಂದರವಾದ ಪುಟ್ಟ ಉದ್ಯಾನ ಬರಮಾಡಿಕೊಳ್ಳುತ್ತದೆ. ಅಲ್ಲಿ 'ಸ್ವಾಮಿ ಹಾಗೂ ಆತನ ಗೆಳೆಯರ' ಪ್ರತಿಮೆಗಳು ಕಾಣಸಿಗುತ್ತದೆ. ಸ್ವಲ್ಪ ಮುಂದೆ ಸಾಗುತ್ತಿದ್ದಂತೆ ನೇರಳೆ ಬಣ್ಣದ 'ಮಾಲ್ಗುಡಿ ಚಾಯ್' ಎಂಬ ಕೆಫೆ ಸಿಗುತ್ತದೆ. ಇದನ್ನು ನಿಜವಾದ ರೈಲು ಬೋಗಿಯ ಒಳಗಡೆ ನಿರ್ಮಿಸಲಾಗಿದೆ. ಅದರ ಒಳಗಿನ ದೃಶ್ಯ ಹಳ್ಳಿಯ ಕೆಫೆಯ ಅನುಭವವನ್ನು ನೀಡುತ್ತದೆ.



ಮಾಲ್ಗುಡಿಮ್ಯೂಸಿಯಂ ಅನ್ನು ಚಿಕ್ಕ ಹೆಂಚಿನ ಮನೆಯೊಳಗೆ ನಿರ್ಮಿಸಲಾಗಿದ್ದು, ಗೋಡೆಗಳನ್ನು ಸುಂದರ ವರ್ಣ ಚಿತ್ರಗಳಿಂದ ಸಿಂಗರಿಸಲಾಗಿದೆ. ಮ್ಯೂಸಿಯಂ ಒಳಗಡೆ ಆರ್. ಕೆ. ನಾರಾಯಣ್ ಅವರ ಕಥೆಗಳಿಂದ ಪ್ರೇರಿತವಾದ ಕಲಾಕೃತಿಗಳು, ಛಾಯಾಚಿತ್ರಗಳು ಮತ್ತು ಹಸ್ತಪ್ರತಿಗಳಂತಹ ವಿವಿಧ ವಸ್ತುಗಳು ಹಾಗೂಮಾಲ್ಗುಡಿ ಡೇ ಸ್ನಲ್ಲಿ ಬಳಸಲಾದ ಹಲವು ವಸ್ತುಗಳನ್ನು ಜೋಡಿಸಿಡಲಾಗಿದೆ. ಇವೆಲ್ಲವನ್ನೂ ನೋಡುತ್ತಿದ್ದರೆ ಮಾಲ್ಗುಡಿ ಗ್ರಾಮದಲ್ಲೇ ಇದ್ದ ಅನುಭವವಾಗುತ್ತದೆ. ಮಲೆನಾಡಿನ ಪ್ರಶಾಂತವಾದ ಪರಿಸರದಲ್ಲಿ, ಪಕ್ಷಿಗಳ ಕಲರವದ ಮಧ್ಯೆ ಇರುವ ಈಮಾಲ್ಗುಡಿ ಡೇ ಸ್ಯೂಸಿಯಂ ಒಂದು ಅನನ್ಯ ತಾಣವೇ ಸರಿ.

## ಸಾಮಾಜಿಕ ನ್ಯಾಯ ಪರಿಪಾಲನೆಯಿಂದ ಮಾತ್ರ ಸರ್ವರಿಗೂ ಸಮಾನ ನ್ಯಾಯ



**ಸಾಗರ:** ಪ್ರತಿಯೊಬ್ಬರು ಸಾಮಾಜಿಕ ನ್ಯಾಯವನ್ನು ಪಾಲಿಸಬೇಕು. ಸಾಮಾಜಿಕ ನ್ಯಾಯ ಪರಿಪಾಲನೆಯಿಂದ ಮಾತ್ರ ಸರ್ವರಿಗೂ ಸಮಾನ ನ್ಯಾಯ ಸಿಗುತ್ತದೆ ಎಂದು ಜೆಎಂಎಫ್‌ಸಿ ನ್ಯಾಯಾಲಯದ ಹಿರಿಯ ನ್ಯಾಯಾಧೀಶರಾದ ಎನ್.ನಟರಾಜ್ ತಿಳಿಸಿದರು. ಇಲ್ಲಿನ ಎಚ್.ಶಿವಲಿಂಗಪ್ಪ ಪ್ರೌಢಶಾಲೆಯಲ್ಲಿ ತಾಲ್ಲೂಕು ಕಾನೂನು ಸೇವಾ ಪ್ರಾಧಿಕಾರ, ವಕೀಲರ ಸಂಘ ಮತ್ತು ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಆಯೋಜಿಸಿದ್ದ ವಿಶ್ವ ಸಾಮಾಜಿಕ ನ್ಯಾಯ ದಿನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ನಾವು ಪ್ರತಿಯೊಬ್ಬರನ್ನು ಗೌರವಯುತವಾಗಿ ಕಾಣಬೇಕಾಗಿದೆ. ಕಾನೂನಿನ ದೃಷ್ಟಿಯಲ್ಲಿ ಎಲ್ಲರೂ ಸಮಾನರು. ಎಲ್ಲರಿಗೂ ಸಾಮಾಜಿಕ ನ್ಯಾಯ ಸಮಾನವಾಗಿ ಸಿಗಬೇಕು. ಪ್ರತಿಯೊಬ್ಬರೂ ಕಾನೂನು ಪಾಲನೆ ಮಾಡುವ ಜೊತೆಗೆ ಕಾನೂನಿನ ಪ್ರಾಥಮಿಕ ಅರಿವು ಹೊಂದಿರಬೇಕು ಎಂದು ಹೇಳಿದರು.ಹಿರಿಯ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಂತೋಷ್ ಎಂ.ಎಸ್. ಮಾತನಾಡಿ, ಅಸಂಘಟಿತ ವಲಯದ ಜನರಿಗೆ ಸಾಮಾಜಿಕ ನ್ಯಾಯದ ಅವಶ್ಯಕತೆ ಹೆಚ್ಚು ಇರುತ್ತದೆ. ಜೀತ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವ ಮೂಲಕ ಸುಸ್ಥಿರ ಸಮಾಜ ನಿರ್ಮಾಣಕ್ಕೆ ಸಂಕಲ್ಪ ಕೈಗೊಳ್ಳಬೇಕು. ಶ್ರಮಿಕ ವರ್ಗದ ಜನರಿಗೆ ಕಾನೂನಿನ ಅರಿವು ಮೂಡಿಸಬೇಕು. ಕಾನೂನನ್ನು ನಾವು ಪಾಲನೆ ಮಾಡಿದರೆ ಸಂಕಷ್ಟ ಕಾಲದಲ್ಲಿ ಕಾನೂನು ನಮ್ಮನ್ನು ರಕ್ಷಣೆ ಮಾಡುತ್ತದೆ ಎಂದರು. ಹಿರಿಯ ನ್ಯಾಯಾಧೀಶರಾದ ದೀಪ ಕೆ.ಆರ್., ಮಾದೇಶ್ ಎಂ., ಚಾಂದಿನಿ ಎಂ.ವಿ., ಸಹಾಯಕ ಸರ್ಕಾರಿ ಅಭಿಯೋಜಕ ಚಂದ್ರಶೇಖರ ಎಚ್.ಎಸ್., ವಕೀಲರ ಸಂಘದ ಅಧ್ಯಕ್ಷ ನಾಗರಾಜ ಈ., ಕಾರ್ಯದರ್ಶಿ ರಮೇಶ್ ಶಿರವಾಳ, ಕ್ಷೇತ್ರ ಶಿಕ್ಷಣಾಧಿಕಾರಿ ಪರಶುರಾಮಪ್ಪ ಈ., ಶಿಕ್ಷಣ ಸಂಯೋಜಕ ವಿ.ಟಿ.ಸ್ವಾಮಿ, ಮಹೇಶ್ ಮಡಿವಾಳ ಇನ್ನಿತರರು ಹಾಜರಿದ್ದರು. ಗಿರೀಶ್ ಸ್ವಾಗತಿಸಿದರು. ಭಾಸ್ಕರ್ ವಂದಿಸಿದರು. ಶಾಂತೇಶ್ವರಿ ನಿರೂಪಿಸಿದರು.

## ವಚನಕಾರರ ವಚನಗಳನ್ನು ಅಧ್ಯಯನ ಮಾಡಿ

**ಜಗಳೂರು:** ಯುವ ಸಮುದಾಯದವರು ವಚನಕಾರರ ವಚನಗಳನ್ನು ಅಧ್ಯಾಯನ ಮಾಡಿ ಸಾರವನ್ನು ತಿಳಿಯದೇ ಇರುವುದರಿಂದ ದಾರಿ ತಪ್ಪುತ್ತಿದ್ದಾರೆ ಎಂದು ಕೆಪಿಸಿಸಿ ಪರಿಶಿಷ್ಟ ಪಂಗಡದ ಮಾಜಿ ರಾಜ್ಯಾಧ್ಯಕ್ಷ ಕೆ.ಪಿ.ಪಾಲಯ್ಯ ಹೇಳಿದರು. ಪಟ್ಟಣದ ತಾಲೂಕು ಕಚೇರಿಯಲ್ಲಿ ರಾಷ್ಟ್ರೀ ಹಬ್ಬಗಳ ಆಚರಣ ಸಮಿತಿ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಸರ್ವಜ್ಞ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ ಎಲ್ಲಾ ಸಮಾಜದ ಹಿರಿಯು ದೊಡ್ಡ ಸಾಧನೆ ಮಾಡಿ ಸಮಾಜಕ್ಕೆ ಸಂದೇಶ ನೀಡಿದ್ದಾರೆ ಹಾಗಾಗಿ ಸರಕಾರ ಇವರನ್ನು ಗುರುತಿಸಿ ಜನ್ಮದಿನ ಆಚರಿಸುವುದರ ಮೂಲಕ ಅವರ ಸಂದೇಶಗಳನ್ನು ನಾವೆಲ್ಲರೂ ತಿಳಿಯಬೇಕಾಗಿದೆ ಎಂದರು ಕುಂಬರ ಸಮಾಜದವರು ಹೊಂದಾಗಿ ಅವರ ಜಯಂತಿಯನ್ನು ಮುಂದಿನ ದಿನಗಳಲ್ಲಿ ಎಲ್ಲಾರು ಸೇರಿ ಮಾಡಿ ಮೊದಲು ನೀವು ಹೊಂದಾಗಿ ಸಂಘವನ್ನು ಕಟ್ಟಿ ಸಂಗಟಿತರಾಗಿ ಎಂದು ಹೇಳಿದರು. ತಹಶೀಲ್ದಾರ್ ಸೈಯದ್ ಕಲೀಂ ಉಲ್ಲಾ ಮಾತನಾಡಿ ಸರ್ವಜ್ಞ ತ್ರಿಪದಿಯ ಬ್ರಹ್ಮ ರಾಗಿದ್ದು ಇತಿಹಾಸವಾಗಿ ಆಜರಾಮವಾಗಿದ್ದಾರೆ ಅವರು ದೈವ ಭಕ್ತರಾಗಿದ್ದರು ಅನ್ನದಾನ ಶ್ರೇಷ್ಠ ದಾನ ಎಂದು ಸಾರಿದವರು ಅವರ ವಚನಗಳು ಅರ್ಥ ಗರ್ಭಿತವಾದ ಸಂದೇಶವಾಗಿವೆ ಎಂದರು. ಕುಂಬರ ಸಮಾಜದ ಮಹಿಳಾ ಘಟಕದ ಅಧ್ಯಕ್ಷೆ ಚೌಡಮ್ಮ ಮಾತನಾಡಿ ತಾಲೂಕಿನಲ್ಲಿ 5 ಸಾವಿರ ಜನಸಂಖ್ಯೆಯನ್ನು ಹೊಂದಿದ್ದರು ಸಹ ನಾವು ಸಂಘಟತರಾಗುತ್ತಿಲ್ಲ ನಾನು ಕಳೆದ 20 ವರ್ಷಗಳಿಂದ ಹೊರಾಟ ಮಾಡುತ್ತಿದ್ದೇನೆ ಈಗಲದರು ಹೊಂದಾಗಬೇಕು ಎಂದು ಹೆಳಿದರು. ಗ್ರೇಡ್ -2 ತಹಶೀಲ್ದಾರ್ ಮಂಜನಂದ , ಆರ್.ಐ. ಕೀರ್ತಿ ಕುಮಾರ್ , ಕುಮಾರ್, ತಿಪ್ಪೇಸ್ವಾಮಿ, ರಾಜು, ವಿರೇಶ್, ಮುಸ್ಟೂರಪ್ಪ, ಬೀಮಪ್ಪ ಇದ್ದರು.



## ನಮ್ಮ ಹೋರಾಟ ರಾಜಕೀಯ ವಿರೋಧಿಗಳ ವಿರುದ್ಧ ಇರಬೇಕೇ ಹೊರತು, ನಮ್ಮೊಳಗೆ ಅಲ್ಲ: ಯುವ ಕಾಂಗ್ರೆಸ್ ಗೆ ಡಿ.ಕೆ. ಶಿವಕುಮಾರ್ ಕಿವಿಮಾತು

**ಬೆಂಗಳೂರು:** ನಾವು ನಮ್ಮ ರಾಜಕೀಯ ವಿರೋಧಿಗಳ ವಿರುದ್ಧ ಹೋರಾಟ ಮಾಡಬೇಕೇ ಹೊರತು ನಮ್ಮ ನಮ್ಮಲ್ಲೇ ಹೋರಾಟ ಮಾಡಬಾರದು" ಎಂದು ಕೆಪಿಸಿಸಿ ಅಧ್ಯಕ್ಷರೂ ಆದ ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.ಕೆಪಿಸಿಸಿ ಕಚೇರಿಯಲ್ಲಿ ಮಾಧ್ಯಮಗೋಷ್ಠಿ ನಡೆಸಿ ಯುವ ಕಾಂಗ್ರೆಸ್ ಚುನಾವಣೆ ಫಲಿತಾಂಶವನ್ನು ಶಿವಕುಮಾರ್ ಅವರು ಗುರುವಾರ ಪ್ರಕಟಿಸಿ, ನೂತನ ಪದಾಧಿಕಾರಿಗಳಿಗೆ ಕಿವಿಮಾತು ಹೇಳಿದರು. ಚುನಾವಣೆ ಗೆಲ್ಲುವುದು ಮುಖ್ಯವಲ್ಲ, ಈಗ ಚುನಾವಣೆ ವಿಚಾರ ಮರೆತು ಯಾವುದೇ ಗುಂಪುಗಾರಿಕೆ ಮಾಡದೆ, ಎಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡಿ, ಕಾಂಗ್ರೆಸ್ ಪಕ್ಷದ ಸಿದ್ಧಾಂತ ನಂಬಿ ಪಕ್ಷದ ಸದಸ್ಯತ್ವ ಪಡೆದಿರುವ ಎಲ್ಲರನ್ನು ಸೇರಿಸಿಕೊಂಡು ಬಿಜೆಪಿ ಹಾಗೂ ಜೆಡಿಎಸ್ ವಿರುದ್ಧ ಹೋರಾಟ ಮಾಡಬೇಕು" ಎಂದು ತಿಳಿಸಿದರು.ಕಳೆದ ವಾರ ಯುವ ಕಾಂಗ್ರೆಸ್ ಚುನಾವಣೆ ಫಲಿತಾಂಶ ಹೊರಬಂದಿದ್ದು, ನಿನ್ನೆ ನಮ್ಮ ವರಿಷ್ಠರು ಮೂವರು ಅಭ್ಯರ್ಥಿಗಳನ್ನು ಸಂದರ್ಶನ ಮಾಡಿದರು. ಅಂತಿಮವಾಗಿ ಹೆಚ್.ಎಸ್ ಮಂಜುನಾಥ್ ಅವರನ್ನು ನಮ್ಮ ಪಕ್ಷದ ಯುವ ಕಾಂಗ್ರೆಸ್ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ" ಎಂದು ಹೇಳಿದರು."ಇಲ್ಲಿಯವರೆಗೂ ಮೊಹಮದ್ ನಲಪಾಡ್ ಹ್ಯಾರಿಸ್ ಅವರು ಯುವ ಕಾಂಗ್ರೆಸ್ ಅಧ್ಯಕ್ಷರಾಗಿ ಬಹಳ ಜವಾಬ್ದಾರಿಯಿಂದ ಸಂಘಟನೆ ಮಾಡಿದ್ದರು. ಭಾರತ ಜೋಡೋ, ಚುನಾವಣೆ, ಗಾಂಧಿ ಭಾರತ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ತೊಡಗಿದ್ದರು. ಅವರಿಗೆ ಹಾಗೂ ಅವರ ತಂಡದ ಸದಸ್ಯರಿಗೆ ಕೆಪಿಸಿಸಿ ಪರವಾಗಿ ತುಂಬು ಹೃದಯದ ಅಭಿನಂದನೆ ಸಲ್ಲಿಸುತ್ತೇನೆ" ಎಂದರು."ಈ ಬಾರಿ ಸುಮಾರು 25 ಲಕ್ಷಕ್ಕೂ ಹೆಚ್ಚು ಸದಸ್ಯತ್ವ ಮಾಡಿ, ಅಂದೇ ಆನ್ ಲೈನ್ ಮೂಲಕ ಮತದಾನ ಮಾಡಿದ್ದರು. ಸುಮಾರು ಶೇ.40ರಿಂದ 50 ರಷ್ಟು ಮತಗಳು ತಿರಸ್ಕಾರಗೊಂಡಿವೆ. ಅಬ್ದುಲ್ ದೇಸಾಯಿ ಅವರು 45,968 ಮತಗಳನ್ನು ಪಡೆದರೆ, ದೀಪಿಕಾ ರೆಡ್ಡಿ ಅವರು 2,92,705 ಮತಗಳನ್ನು ಪಡೆದಿದ್ದರು. ಹೆಚ್.ಎಸ್ ಮಂಜುನಾಥ್ ಅವರು 5,67,343 ಮತಗಳನ್ನು ಪಡೆದಿದ್ದರು. 2,71,638 ಮತಗಳ ಅಂತರದಿಂದ ಮಂಜುನಾಥ್ ಅವರು ಗೆಲುವು ಸಾಧಿಸಿದ್ದಾರೆ" ಎಂದು ಫಲಿತಾಂಶ ಪ್ರಕಟಿಸಿದರು.ನೂತನವಾಗಿ ಆಯ್ಕೆಯಾಗಿರುವ ಯುವ ಕಾಂಗ್ರೆಸ್ ಪದಾಧಿಕಾರಿಗಳು ಅವರು ಮುಂದೆ ಯಾವ ರೀತಿ ಕೆಲಸ ಮಾಡಬೇಕು ಎಂದು ಮುಂದಿನ ದಿನಗಳಲ್ಲಿ ನಾನು ಎಲ್ಲಾ ಪದಾಧಿಕಾರಿಗಳ ಸಭೆ ಮಾಡಿ ಪಕ್ಷದ ಪರವಾಗಿ ಮಾರ್ಗದರ್ಶನ ನೀಡಲಾಗುವುದು. ಮುಂದಿನ ಎರಡು ಮೂರು ತಿಂಗಳಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆ ಬರುತ್ತಿದೆ. ಜತೆಗೆ ಬಿಬಿಎಂಪಿ ಚುನಾವಣೆ ಸಮೀಪಿಸುತ್ತಿದೆ. ನಾವು ಸಕಲ ಸಿದ್ಧತೆ ಮಾಡಿಕೊಳ್ಳುತ್ತಿದ್ದು, ನ್ಯಾಯಾಲಯಕ್ಕೆ ನಾವು ಅಫಿಡವಿಟ್ ಸಲ್ಲಿಕೆ ಮಾಡಿದ್ದೇವೆ. ಮೀಸಲಾತಿ, ಕ್ಷೇತ್ರ ಪುನರ್ ವಿಂಗಡಣೆ ಕೆಲಸ ನಡೆಯುತ್ತಿದ್ದು ಕೆಲವೇ ದಿನಗಳಲ್ಲಿ ನಾವು ಯಾವಾಗ ಚುನಾವಣೆ ನಡೆಸಬಹುದು ಎಂದು ನ್ಯಾಯಾಲಯಕ್ಕೆ ತಿಳಿಸಲಿದ್ದೇವೆ. ಬಿಬಿಎಂಪಿ ವಿಚಾರವಾಗಿ ಶಾಸಕ ರಿಜ್ವಾನ್ ಆರ್ಷದ್ ಅವರ ನೇತೃತ್ವದಲ್ಲಿ ಸಮಿತಿ ಮಾಡಿ ಅಭಿಪ್ರಾಯ ಸಂಗ್ರಹಿಸುತ್ತಿದ್ದೇವೆ. ನೀವೆಲ್ಲರೂ ಈಗಿನಿಂದಲೇ ಬೂತ್ ಮಟ್ಟದಲ್ಲಿ ಸಜ್ಜಾಗಿ" ಎಂದು ಕರೆ ನೀಡಿದರು."ಮಹಿಳೆಯರಿಗೆ ಶೇ. 50 ಮೀಸಲಾತಿ ನೀಡಲಾಗುವುದು. ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳಾ ನಾಯಕತ್ವ ಹೆಚ್ಚಾಗಿ ಬೆಳೆಸಬೇಕು. ಯುವ ಕಾಂಗ್ರೆಸ್ ಪಕ್ಷದ ಅಂಗ ಸಂಸ್ಥೆಯಾಗಿದ್ದು ಕೆಪಿಸಿಸಿಯ ಸಂಪೂರ್ಣ ಬೆಂಬಲ ಸಿಗಲಿದೆ" ಎಂದು ತಿಳಿಸಿದರು.ಈ ಸಂದರ್ಭದಲ್ಲಿ ಯುವ ಕಾಂಗ್ರೆಸ್ ಮಾಜಿ ಅಧ್ಯಕ್ಷ ಬಸನಗೌಡ ಬಾದರ್ಲಿ, ಶಿಗ್ಗಾವಿ ಕ್ಷೇತ್ರದ ಶಾಸಕರಾದ ಯಾಸಿರ್ ಅಹ್ಮದ್ ಖಾನ್ ಪಠಾಣ್, ಆನಂದ್ ಗಡ್ಡದೇವರ ಮಠ, ಅಬ್ದುಲ್ ದೇಸಾಯಿ, ಮತ್ತಿತರರು ಉಪಸ್ಥಿತರಿದ್ದರು.

## ಮೈಲಾರ ಜಾತ್ರಾ ಪ್ರಯುಕ್ತ ವಿಶೇಷ ಬಸ್ ಸೌಲಭ್ಯ

**ದಾವಣಗೆರೆ:** ಫೆಬ್ರವರಿ 14 ರಂದು ನಡೆಯುವ ಮೈಲಾರ ಕಾರ್ಣಿಕೋತ್ಸವ ಪ್ರಯುಕ್ತ ಫೆ.13 ರಿಂದ 15 ರವರೆಗೆ ಭಕ್ತಾದಿಗಳ ಅನುಕೂಲಕ್ಕಾಗಿ ರಾಜ್ಯ ರಸ್ತೆ ಸಾರಿಗೆ ದಾವಣಗೆರೆ ವಿಭಾಗದಿಂದ 75 ಹೆಚ್ಚುವರಿ ವಿಶೇಷ ಬಸ್‌ಗಳ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ವಿಭಾಗೀಯ ನಿಯಂತ್ರಣಾಧಿಕಾರಿ ತಿಳಿಸಿದ್ದಾರೆ.

## ಉಚಿತವಾಗಿ ಇ-ಕೆವೈಸಿ ನೋಂದಣಿ

**ದಾವಣಗೆರೆ :** ಹರಿಹರ ತಾಲ್ಲೂಕಿನ ನಗರ ಮತ್ತು ಗ್ರಾಮಾಂತರ ಪ್ರದೇಶದ 124 ನ್ಯಾಯಬೆಲೆ ಅಂಗಡಿಯಲ್ಲಿ ಚಾಲ್ತಿಯಲ್ಲಿರುವ 58,335 ಅಂತ್ಯೋದಯ ಅನ್ನ ಯೋಜನೆ ಮತ್ತು ಅದತ್ಯಾ ಬಿ.ಪಿ.ಎಲ್ ಪಡಿತರ ಚೀಟಿಗಳಲ್ಲಿನ ಒಟ್ಟು ಸದಸ್ಯರ ಪೈಕಿ 7567 ಅಂತ್ಯೋದಯ ಅನ್ನ ಯೋಜನೆ ಮತ್ತು ಆದತ್ಯಾ ಬಿ.ಪಿ.ಎಲ್ ಪಡಿತರ ಚೀಟಿಗಳಲ್ಲಿನ ಸದಸ್ಯರ ಇ-ಕೆವೈಸಿ ಮಾಡಲು ಬಾಕಿ ಇರುತ್ತದೆ.

ಬಾಕಿ ಇರುವ 7567 ಸದಸ್ಯರುಗಳು ಕೂಡಲೇ ಇ-ಕೆವೈಸಿಯನ್ನು ಪ್ರತಿ ದಿನ ಬೆಳಗ್ಗೆ 7 ರಿಂದ ಸಂಜೆ 8 ಗಂಟೆಯವರೆಗೆ ಸಂಬಂಧಪಟ್ಟ ನ್ಯಾಯಬೆಲೆ ಅಂಗಡಿ ಅಥವಾ ರಾಜ್ಯದ ಯಾವುದೇ ನ್ಯಾಯಬೆಲೆ ಅಂಗಡಿಗೆ ಭೇಟಿ ನೀಡಿ ಪೋರ್ಟಬಲಿಟಿ ಮೂಲಕ ಇ-ಕೆವೈಸಿಯನ್ನು ಉಚಿತವಾಗಿ ಮಾಡಿಕೊಳ್ಳಬಹುದೆಂದು ಹರಿಹರ ತಹಶೀಲ್ದಾರ್ ಗುರುಬಸವರಾಜ್ ತಿಳಿಸಿದ್ದಾರೆ.

## ಜಿಲ್ಲಾ ಮಟ್ಟದಲ್ಲಿ ಪ್ರಸ್ತಾವನೆಗಳ ಪರಿಶೀಲನಾ ಸಭೆ

**ದಾವಣಗೆರೆ:** ಪ್ರಸಕ್ತ ಸಾಲಿನ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಸಂದರ್ಭದಲ್ಲಿ ನೀಡುವ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿಗಾಗಿ ಜಿಲ್ಲಾ ಮಟ್ಟದಲ್ಲಿ ಸ್ವೀಕೃತವಾದ ಪ್ರಸ್ತಾವನೆಗಳ ಪರಿಶೀಲನೆಗೆ ಫೆಬ್ರವರಿ 12 ರಂದು ಸಂಜೆ 4 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಸಭೆಯನ್ನು ಆಯೋಜಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ರಾಜಾನಾಯ್ಕ ತಿಳಿಸಿದ್ದಾರೆ.

## ಪ್ಯಾರಚೂಟ್ ತರಬೇತಿ ವ್ಯಾಯಾಮದ ವೇಳೆ ಕರ್ನಾಟಕ ಮೂಲದ ಯೋಧ ಸಾವು

**ಬೆಂಗಳೂರು:** ಉತ್ತರಪ್ರದೇಶದ ಆಗ್ರಾದಲ್ಲಿ ಪ್ಯಾರಾಚೂಟ್ ತರಬೇತಿ ವ್ಯಾಯಾಮ ಸಮಯದಲ್ಲಿ ಕರ್ನಾಟಕದ ಹೊಸನಗರ ಮೂಲದ ಭಾರತೀಯ ವಾಯುಪಡೆಯ ಯೋಧ ಮಂಜುನಾಥ್ ಸಾವನ್ನಪ್ಪಿದ್ದಾರೆ ಎಂದು ವಾಯುಪಡೆಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ವಿಂಗ್ ಕಮಾಂಡರ್ ರೋಹಿತ್ ದಹಿಯಾ ನೇತೃತ್ವದಲ್ಲಿ 12 ತರಬೇತಿ ಜಿಗಿತಗಾರರು ಮಾಲ್ಪುರ ಪ್ಯಾರಾಚೂಟ್ ಡ್ರಾಪ್ ವಲಯದಲ್ಲಿ ವ್ಯಾಯಾಮ ಮಾಡುತ್ತಿದ್ದಾಗ ಪ್ಯಾರಾಚೂಟ್ ತೆರೆಯಲು ವಿಫಲವಾದ ಕಾರಣ ನೆಲಕ್ಕಪ್ಪಳಿಸಿ ಯೋಧ ಮಂಜುನಾಥ್ ಸಾವನ್ನಪ್ಪಿದ್ದಾರೆ.

## ಉಡಾನ್ ಯೋಜನೆಯಡಿ 5 ಹೊಸ ಮಿನಿ ಏರ್ಪೋರ್ಟ್ ನಿರ್ಮಾಣ

**ಬೆಂಗಳೂರು:** ಉಡಾನ್ ಯೋಜನೆಯಡಿ 5 ಹೊಸ ಮಿನಿ ಏರ್ಪೋರ್ಟ್ ನಿರ್ಮಾಣಕ್ಕೆ ರಾಜ್ಯದಲ್ಲಿ ಸ್ಥಳಗಳನ್ನು ನಾಗರಿಕ ವಿಮಾನಯಾನ ಸಚಿವಾಲಯವು ಗುರುತಿಸಿದೆ. ಲೋಕಸಭೆಯಲ್ಲಿ ಶುಕ್ರವಾರ ಸಂಸದ ಬಸವರಾಜ್ ಬೊಮ್ಮಾಯಿ ಪ್ರಶ್ನೆಗೆ ಉತ್ತರಿಸಿದ ನಾಗರಿಕ ವಿಮಾನಯಾನ ರಾಜ್ಯ ಸಚಿವ ಮುರಳೀಧರ್ ಮೊಹಲ್ ಅವರು. ಉಡಾನ್ ಯೋಜನೆಯಡಿ ಏರ್ಸ್ಟ್ರಿಪ್ಸ್ ನಿರ್ಮಾಣಕ್ಕೆ ಬಳ್ಳಾರಿ, ಕೋಲಾರ, ಕುಶಾಲನಗರ, ರಾಯಚೂರು ಹಾಗೂ ಹಾಸನವನ್ನು ತಾತ್ಕಾಲಿಕವಾಗಿ ಗುರುತಿಸಲಾಗಿದೆ. ಬೀದರ್, ಮೈಸೂರು, ವಿದ್ಯಾನಗರ, ಹುಬ್ಬಳ್ಳಿ, ಕಲಬುರಗಿ, ಬೆಳಗಾವಿ, ಶಿವಮೊಗ್ಗ ವಿಮಾನ ನಿಲ್ದಾಣಗಳಲ್ಲಿ ಈಗಾಗಲೇ ವಿಮಾನಗಳ ಹಾರಾಟ ಪ್ರಕ್ರಿಯೆ ಮುಂದುವರಿದಿದೆ. ವಿಜಯಪುರ ಹಾಗೂ ಕಾರವಾರದಲ್ಲಿ ಇನ್ನಷ್ಟೆ ವಿಮಾನ ನಿಲ್ದಾಣ ನಿರ್ಮಾಣ ಕಾರ್ಯ ಆರಂಭವಾಗಬೇಕಿದೆ ಎಂದರು.

## ವಾಯುಪಡೆಯ ತರಬೇತುದಾರ ಸಾವು

**ಶಿವಮೊಗ್ಗ:** ಉತ್ತರ ಪ್ರದೇಶದ ಆಗ್ರಾದಲ್ಲಿರುವ ವಾಯುಪಡೆಯ ಪಿಟಿಎಸ್ ತರಬೇತಿ ಕೇಂದ್ರದಲ್ಲಿ ತರಬೇತಿ ವೇಳೆ ಸಮಯಕ್ಕೆ ಸರಿಯಾಗಿ ಪ್ಯಾರಾಚೂಟ್ ತರೆದುಕೊಳ್ಳದೇ ಜಿಲ್ಲೆಯ ಭಾರತೀಯ ವಾಯುಪಡೆಯ ತರಬೇತುದಾರರೊಬ್ಬರು ಶುಕ್ರವಾರ ಬೆಳಿಗ್ಗೆ ಸಾವನ್ನಪ್ಪಿದ್ದಾರೆ. ಮೃತರನ್ನು ಹೊಸನಗರ ತಾಲೂಕಿನ ಸಂಕೂರು ಸಮೀಪದ ಗೊರನಗದ್ದೆ ನಿವಾಸಿ ಜಿ ಎಂ ಸುರೇಶ್ ಅವರ ಪುತ್ರ ಜಿ ಎಸ್ ಮಂಜುನಾಥ್ (36) ಎಂದು ಗುರುತಿಸಲಾಗಿದೆ. ಮಂಜುನಾಥ್ ಅವರು 2023 ರಲ್ಲಿ ಭಾರತೀಯ ವಾಯುಪಡೆಗೆ ಜೂನಿಯರ್ ವಾರಂಟ್ ಅಧಿಕಾರಿಯಾಗಿ ಸೇರ್ಪಡೆಯಾಗಿದ್ದರು. ಜಮ್ಮು ಮತ್ತು ಕಾಶ್ಮೀರ, ಅಸ್ಸಾಂ, ಗಾಜಿಯಾಬಾದ್ ಮತ್ತು ದೆಹಲಿಯಲ್ಲಿ ಸೇವೆ ಸಲ್ಲಿಸಿದ್ದಾರೆ ಎಂದು ಅಧಿಕೃತ ಮೂಲಗಳು ತಿಳಿಸಿವೆ. ಪ್ಯಾರಾ ಜಂಪ್ ವಿಭಾಗದಲ್ಲಿ ಕಳೆದ ಒಂದೂವರೆ ತಿಂಗಳಿಂದ ಆಗ್ರಾದ ತರಬೇತಿ ಕೇಂದ್ರದಲ್ಲಿದ್ದರು. ಕೃಷಿಕ ಕುಟುಂಬದ ಮಂಜುನಾಥ್ 2019 ರಲ್ಲಿ ಅಸ್ಸಾಂನ ಮಹಿಳೆಯನ್ನು ವಿವಾಹವಾಗಿದ್ದರು. ದಂಪತಿ ತಮ್ಮ ಮೊದಲ ಮಗುವಿನ ನಿರೀಕ್ಷೆಯಲ್ಲಿದ್ದರು.




# ದಾನಿಗಳ ನೆರವು: ಹೈಟೆಕ್ ಆದ ಇಬ್ರಾಹಿಂಪೂರ ಸರ್ಕಾರಿ ಶಾಲೆ

**ಶಿಗ್ಗಾವಿ:** ತಾಲ್ಲೂಕಿನ ಇಬ್ರಾಹಿಂ ಪೂರ ಸರ್ಕಾರಿ ಶಾಲೆ, ವಿದ್ಯಾರ್ಥಿಗಳು ಹಾಗೂ ಶಿಕ್ಷಕರ ಅಚ್ಚುಮೆಚ್ಚಿನ ಸುಸಜ್ಜಿತ ಸ್ಥಳವಾಗಿಮಾರ್ಪಟ್ಟಿದೆ. 'ಸರ್ಕಾರಿ ಶಾಲೆಯೆಂದರೆ ಸೌಲಭ್ಯಗಳ ಕೊರತೆ ಸಾಮಾನ್ಯ' ಎಂದು ಹೇಳುವವರ ನಡುವೆ, ಇಬ್ರಾಹಿಂಪೂರದ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಶಾಲೆ ಹೈಟೆಕ್ ಸ್ಪರ್ಶದೊಂದಿಗೆ ಮಾದರಿ ಶಾಲೆಯಾಗಿ ಕಂಗೊಳಿಸುತ್ತಿದೆ. ಶಾಲೆಯಲ್ಲಿ ಒಂದನೇ ತರಗತಿಯಿಂದ ಏಳನೇ ತರಗತಿಯವರೆಗೆ 117 ವಿದ್ಯಾರ್ಥಿಗಳು ಕಲಿಯುತ್ತಿದ್ದಾರೆ. 6 ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ. ಕೆಲ ವರ್ಷಗಳ ಹಿಂದೆ ಶಾಲೆಯುಹಲವು ಸೌಲಭ್ಯಗಳಿಂದ ವಂಚಿತವಾಗಿತ್ತು. ಮಕ್ಕಳ ಶಿಕ್ಷಣಕ್ಕೆ ಒತ್ತು ನೀಡಿದ್ದ ಗ್ರಾಮಸ್ಥರು, ಶಾಲೆ ಅಭಿವೃದ್ಧಿಪಡಿಸಲು ಪಣ ತೊಟ್ಟಿದ್ದರು. ಅವರ ಇಚ್ಛೆಯಂತೆ ಶಾಲೆ ಇಂದು ಅರ್ಥಪೂರ್ಣವಾಗಿ ರೂಪುಗೊಂಡಿದೆ. ಹಾವೇರಿ ಜಿಲ್ಲೆ ಮಾತ್ರವಲ್ಲದೇ ಹೊರ ಜಿಲ್ಲೆಗಳ ಶಾಲೆಗೂ ಇಬ್ರಾಹಿಂ ಪೂರ ಶಾಲೆಮಾದರಿಯಾಗಿದೆ. ಶಾಲೆಯ ವಾತಾವರಣ, ಮಕ್ಕಳ ಕಲಿಕೆ ಸಾಮರ್ಥ್ಯವನ್ನು ಹೆಚ್ಚಿಸುವುದರ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲೂ ಭಾಗವಹಿಸಲು ಉತ್ಸಾಹ ತುಂಬುತ್ತಿದೆ. ಶಾಲೆ ಪ್ರವೇಶ ದ್ವಾರದಲ್ಲಿ ಕಾಂಪೌಂಡ್ ನಿರ್ಮಿಸಲಾಗಿದ್ದು, ಅದೇ ಗೋಡೆ ಮೇಲೆ ಬಣ್ಣ ಬಣ್ಣದ ಚಿತ್ರಗಳನ್ನು ಬಿಡಿಸಲಾಗಿದೆ. ಶಿಶುನಾಳದ ಗೋವಿಂ 'ಭಟ್ಟರು ಷರೀಫ್ ಅವರ ಗುರು-ಶಿಷ್ಯ ಪರಂಪರೆ, ಮರಗಳ ರಕ್ಷಣೆ, ರೈತರ ಜೀವನ ಕುರಿತ ಚಿತ್ರಗಳು ಗೋಡೆ ಮೇಲಿವೆ. ಶಾಲೆ ಮುಂಭಾಗದಲ್ಲಿ ಹೋಗುವವರು, ಒಮ್ಮೆ ನಿಂತು-ಕೊಂಡು ಚಿತ್ರಗಳನ್ನು ನೋಡಿಹೋಗುವಷ್ಟು ಸೊಗಸಾಗಿಮೂಡಿವೆ. ಶಾಲೆಯ ಪ್ರವೇಶದಲ್ಲಿ ಮಹಾದ್ವಾರ ನಿರ್ಮಿಸಲಾಗಿದ್ದು, 'ಶಿಕ್ಷಣವೇ ಶಕ್ತಿ; ಅರಿವೇ ಗುರು' ವಾಕ್ಯವನ್ನು ಬರೆಯಲಾಗಿದೆ. ಶಾಲೆಯೊಳಗೆ ಮೊದಲ ಹೆಜ್ಜೆ ಇರಿಸುತ್ತಿದ್ದಂತೆ, ವಿವಿಧ ಬರಹಗಳು ಸ್ವಾಗತ ಕೋರುತ್ತವೆ. ನಂತರ, ಶಾಲೆಯ ಆವರಣದಲ್ಲಿ ಉದ್ಯಾನವಿದೆ. ತೆಂಗು, ಅಡಿಕೆ ಸೇರಿದಂತೆ ವಿವಿಧ ಔಷಧೀಯ ಸಸ್ಯಗಳನ್ನು ಬೆಳೆಸಲಾಗಿದೆ.

ಪ್ರತಿ ಗಿಡಗಳಿಗೆ ನದಿಗಳು ಮತ್ತು ಮಹಾತ್ಮರ ಹೆಸರು ನಾಮಕರಣಮಾಡಲಾಗಿದೆ. ಗಿಡಗಳ ಸಂ ರಕ್ಷಣೆ ಜವಾಬ್ದಾರಿಯನ್ನು ವಿದ್ಯಾರ್ಥಿ ಗಳಿಗೆ ನೀ ಡಲಾಗಿದೆ. ಕಲಿಕೆಯ ಜೊತೆಯಲ್ಲಿ ವಿದ್ಯಾರ್ಥಿಗಳು, ಗಿಡಗಳ ಪೋಷಣೆಮಾಡುತ್ತ ಪರಿಸರ ಜಾಗೃತಿಮೂಡಿಸುತ್ತಿದ್ದಾರೆ.






ಶಾಲೆಯ ಆವರಣದಲ್ಲಿ ಸರಸ್ವತಿ ದೇವಿ, ಸ್ವಾಮಿ ವಿವೇಕಾನಂದ, ಡಾ.ಬಿ.ಆರ್. ಅಂಬೇಡ್ಕರ್, ಮಹಾತ್ಮಾ ಗಾಂಧೀಜಿ ಅವರಮೂರ್ತಿಗಳನ್ನು ಪ್ರತಿಷ್ಠಾಪಿಸಲಾಗಿದೆ. ಶಿಗ್ಗಾವಿ ತಾಲ್ಲೂಕಿನ ಇಬ್ರಾಹಿಂಪೂರ ಸರ್ಕಾರಿ ಶಾಲೆಯೊಳಗೆ ಉದ್ಯಾನದಲ್ಲಿರುವ ಸರಸ್ವತಿ ದೇವಿಮೂರ್ತಿ ಸಾವಿತ್ರಿಬಾಯಿ ಫುಲೆ, ವಿಶ್ವಗುರು ಬಸವಣ್ಣ, ಸುಭಾಸಚಂದ್ರ ಭೋಸ್, ಭಗತ್ ಸಿಂಗ್, ಚಂದ್ರಶೇಖರ ಆಜಾದ್, ವಲ್ಲಭಬಾಯಿ ಪಟೇಲ ಅವರ ಚಿತ್ರಗಳು ಗೋಡೆ ಮೇಲೆ ರಾರಾಜಿಸುತ್ತಿವೆ. ವಿಧಾನಸೌಧ, ಹೈಕೋರ್ಟ್ , ತಾಜಮಹಲ್, ಕೆಂಪುಕೋಟೆ, ಅರಮನೆ, ಇಂಡಿಯಾಗೇಟ್, ಹಂಪಿಯ ಕಲ್ಲಿನ ರಥ, ಪುರಾಣ ಕಥೆಗಳು ಸೇರಿದಂತೆ ವಿವಿಧ ಚಿತ್ರಗಳೂ ಕಾಣಸಿಗುತ್ತವೆ. ಇವೆಲ್ಲವನ್ನೂ ನೋಡುತ್ತಲೇ ಮಕ್ಕಳು ಬೆಳೆಯುತ್ತಿದ್ದಾರೆ. ಶಾಲೆ ಆವರಣದಲ್ಲಿ ಪುರಾತನ ಸಿದ್ದೇಶ್ವರ ದೇವಸ್ಥಾನವಿದ್ದು, ನಿತ್ಯವೂ ಮಕ್ಕಳು ದೇವರಿಗೆ ನಮಸ್ಕರಿಸಿ ಶಾಲೆಯೊಳಗೆಹೋಗುತ್ತಿದ್ದಾರೆ. ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಹೈಟೆಕ್ ಸೌಲಭ್ಯದ ಶೌಚಾಲಯ ನಿರ್ಮಿಸಲಾಗಿದೆ. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಸಹಮಾಡಲಾಗಿದೆ. ದಿನದ 24 ಗಂಟೆಯೂಶಾಲೆ ಹೊರ ಭಾಗ ಹಾಗೂ ಒಳಭಾಗದ ದೃಶ್ಯಗಳು ಸೆರೆಯಾಗುವಂತೆ ಸಿ.ಸಿ.ಟಿ.ವಿ ಕ್ಯಾಮರಾ ಅಳವಡಿಸಲಾಗಿದೆ. ಪ್ರೊಜೆಕ್ಟರ್ ಸಹಾಯದಿಂದ ಮಕ್ಕಳಿಗೆ ದೃಶ್ಯ ರೂಪದ ಪಾಠಗಳನ್ನು ತೋರಿಸಲಾಗುತ್ತಿದೆ.



## ಉದ್ಯೋಗ ಮೇಳಗಳಲ್ಲಿ ಆಯ್ಕೆಯಾದವರಿಗೆ ಯೋಗ್ಯ ವೇತನ ನಿಗದಿಪಡಿಸಿ

**ಮಲೇಬೆನ್ನೂರು:** ಹಳ್ಳಿಗಳಲ್ಲಿ ಪ್ರಸ್ತುತವಾಗಿ ವಿದ್ಯಾವಂತರು ಹೆಚ್ಚಾಗಿದ್ದಾರೆ. ಇಂತಹ ಪ್ರದೇಶಗಳಲ್ಲಿ ಉದ್ಯೋಗ ಮೇಳ ಆಯೋಜಿಸಿರುವುದು ಯೋಗ್ಯವಾಗಿದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ಯೋಗ್ಯ ವೇತನ ನಿಗದಿಪಡಿಸಬೇಕು ಎಂದು ಮಾಜಿ ಸಂಸದ ಜಿ ಎಂ ಸಿದ್ದೇಶ್ವರ ಬಾಗವಹಿಸಿದ ಕಂಪನಿಗಳಿಗೆ ತಿಳಿಸಿದರು. ಸಮೀಪದ ಭಾನುವಳ್ಳಿ ಗ್ರಾಮದಲ್ಲಿ ಶ್ರೀಶೈಲ ಎಜುಕೇಷನ್ ಟ್ರಸ್ಟ್ (ರಿ) ಶ್ರೀ ಜಿ ಮಲ್ಲಿಕಾರ್ಜುನಪ್ಪ ಮತ್ತು ಶ್ರೀಮತಿ ಹಾಲಮ್ಮ ಚಾರಿಟಿ ಫೌಂಡೇಶನ್ ಮತ್ತು ಸ್ನೇಹ ಸಂಭ್ರಮ ಗೆಳೆಯರ ಬಳಗ ಭಾನುವಳ್ಳಿ ಇವರುಗಳ ಸಂಯುಕ್ತ ಆಶ್ರಯದಲ್ಲಿ ನಡೆದ ಬೃಹತ್ ಉದ್ಯೋಗ ಮೇಳ ಉದ್ಘಾಟಿಸಿ ಮಾತನಾಡಿದರು. ಈವರೆಗೆ ದಾವಣಗೆರೆ ಜಿಲ್ಲೆಗಳಲ್ಲಿ ಇಂತಹ ಉದ್ಯೋಗ ಮೇಳಗಳಲ್ಲಿ 3532 ಅಬ್ಯಾರ್ಥಿಗಳು ಆಯ್ಕೆಯಾಗಿ ತಮ್ಮ ಜೀವನ ನಡೆಸುತ್ತಿದ್ದಾರೆ. ಇಂದು ಸಹ 30 ಕಂಪನಿಗಳು ಬಾಗವಹಿವೆ. 1600 ಅಭ್ಯಾರ್ಥಿಗಳು ನೊಂದಾಯಿಸಿಕೊಂಡಿದ್ದಾರೆ. ಅವರೆಲ್ಲ ಆಯ್ಕೆಯಾಗಿ ಭವಿಷ್ಯ ಉಜ್ವಲವಾಗಲಿ ಎಂದು ಹಾರೈಸಿದರು. ಉದ್ಯೋಗ ಸೃಷ್ಠಿಯಿಂದ ಯುವಕರಿಗೆ ಉದ್ಯೋಗಾವಕಾಶ ಹೆಚ್ಚಾಗುತ್ತದೆ. ಇಂದು ಜಿಎಂಐಟಿ ಸಹಕಾರವಿದೆ. ಯುವಕ,ಯುವತಿಯರು ಉದ್ಯೋಗಸ್ಥರಾದರೆ ಕುಟುಂಬ ಸಮಾಜ,ದೇಶ ಸಮೃದ್ದಿಯಾಗುತ್ತದೆ. ಇಂದು ಉದ್ಯೋಗ ಪಡೆದವರಿಗೆ ಒಳಿತಾಗಲಿ. ಇಲ್ಲಿ ರಾಜಕೀಯ ವಿಚಾರ ಮಾತನಾಡುವ ವೇದಿಕೆ ಇದಲ್ಲ ಹೀಗಾಗಿ ಬೇರೆ ವಿಷಯ ಮಾತನಾಡುವುದಿಲ್ಲ ಎಂದು ಶಾಸಕ ಬಸವನಗೌಡ ಯತ್ನಾಳ್ ಭಾಷಣವನ್ನು ಮೊಟಕುಗೊಳಿಸಿದರು. ಉದ್ಯೋಗಂ ಪುರುಷ ಲಕ್ಷಣಂ ಎಂಬುದೀಗ ಬದಲಾಗಿ ಯುವಕ,ಯುವತಿಯರು ವಿದ್ಯಾವಂತರಾಗಿದ್ದಾರೆ. ಗ್ರಾಮೀಣ ಪ್ರದೇಶದಲ್ಲಿ ಉದ್ಯೋಗ ಮೇಳಗಳು ನಡೆಸುತ್ತಿರುವುದು ಸೂಕ್ತವಾಗಿದೆ ಎಂದು ಶಾಸಕ ಬಿಪಿ ಹರೀಶ್ ತಿಳಿಸಿದರು.

ಪ್ರಾಸ್ತಾವಿಕವಾಗಿ ಸ್ನೇಹ ಸಂಭ್ರಮ ಗೆಳೆಯರ ಬಳಗದ ಅಧ್ಯಕ್ಷ ಹೆಚ್ ಎಂ ಶಿವಕುಮಾರ್ ಮಾತನಾಡಿದರು. ನಂತರ ಆಗಮಿಸಿದ ಮಾಜಿ ಶಾಸಕ ಹೆಚ್ ಎಸ್ ಶಿವಶಂಕರ್ ಆಯ್ಕೆಯಾದ ಅಭ್ಯರ್ಥಿಗಳಿಗೆ ಉದ್ಯೋಗ ಪತ್ರ ವಿತರಿಸಿ ಮಾತನಾಡಿದರು. ದಾವಣಗೆರೆಯ ಸಿಟಿ ಸೆಂಟ್ರಲ್ ಹಾಸ್ಪಿಟಲ್ ಪ್ರೈ ಲಿಮಿಟೆಡ್ ವತಿಯಿಂದ ಉಚಿತ ಆರೋಗ್ಯ ತಪಾಸಣೆ ವ್ಯವಸ್ಥೆ ಮಾಡಲಾಗಿತ್ತು. ರಾಯಚೂರು ಮಾಜಿ ಸಂಸದ ಭಗವಂತ ನಾಯ್ಕ, ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಹನಗವಾಡಿ ವೀರೇಶ್, ಬಿಜೆಪಿ ಗ್ರಾಮಾಂತರ ಅಧ್ಯಕ್ಷ ಲಿಂಗರಾಜ್ ಅಣ್ಣೇಶ್ ,ಭಾನುವಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ವೆಂಕಟೇಶ್ ರೆಡ್ಡಿ , ಗೌರವ ಅಧ್ಯಕ್ಷೆ ತೇಜಸ್ವಿ ಕಟ್ಟಿಮನಿ, ಉಪಾಧ್ಯಕ್ಷ ಈ ವಿಶ್ವನಾಥಯ್ಯ, ಪ್ರಧಾನ ಕಾರ್ಯದರ್ಶಿ ಡಿ ಆರ್ ರಾಮನಗೌಡ, ಸಹಕಾರ್ಯದರ್ಶಿ ವೈ ನಾಗರಾಜ್, ಸಂಘಟನಾ ಕಾರ್ಯದರ್ಶಿ ಆರ್ ಬಿ ಪಕ್ಕಿರಪ್ಪ ಸುತ್ತಮುತ್ತಲಿನ ಗ್ರಾಮಗಳ ಉದ್ಯೋಗಾವಕಾಂಕ್ಷಿಗಳು, ಗ್ರಾಮಸ್ಥರು ಇದ್ದರು.



# ಮಾಜಿ ಪ್ರಧಾನಿ ವಾಜಪೇಯಿ ಮಾದರಿ ರಾಜಕಾರಣಿ



**ಚಿಕ್ಕಮಗಳೂರು:** ಅಜಾತಶತ್ರು, ಜನಪರ ಆಡಳಿತಗಾರ, ಸ್ನೇಹಜೀವಿ, ಮಾಜಿ ಪ್ರಧಾನಿ ದಿವಂಗತ ಅಟಲ್ ಬಿಹಾರಿ ವಾಜಪೇಯಿ ಅವರ ನೆನಪು ಸದಾ ಕಾಲ ಈ ರಾಷ್ಟ್ರಕ್ಕೆ ಇರುತ್ತದೆ, ಅವರೊಬ್ಬ ಮಾದರಿ ರಾಜಕಾರಣಿ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಅಭಿಪ್ರಾಯಿಸಿದರು.

ಅವರು ಇಂದು ತಮ್ಮ ನಿವಾಸದಲ್ಲಿ ಜಿಲ್ಲಾ ಬಿಜೆಪಿ ಏರ್ಪಡಿಸಿದ್ದ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮ ಶತದಿನೋತ್ಸವ ಅಂಗವಾಗಿ ನೀಡಿದ ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದರು.

ಅಟಲ್ ಬಿಹಾರಿ ವಾಜಪೇಯಿ ಅವರಿಗೂ ಚಿಕ್ಕಮಗಳೂರಿಗೂ ಹಳೇ ಸಂಬಂಧ ಇದೆ, ತುರ್ತು ಪರಿಸ್ಥಿತಿ ಬಳಿಕ ನಡೆದ ಉಪಚುನಾವಣೆ ಸಂದರ್ಭದಲ್ಲಿ ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಉದ್ದಗಲಕ್ಕೆ ಸಂಚರಿಸಿ ಕಾರ್ಯಕರ್ತರನ್ನು ಹುರಿದುಂಬಿಸಿ ಬಿಜೆಪಿ ಅಭ್ಯರ್ಥಿಯಾಗಿದ್ದ ವೀರೇಂದ್ರ ಪಾಟೀಲ್ ಪರವಾಗಿ ಪ್ರಚಾರ ಮಾಡಿದ್ದರು ಎಂದು ಹೇಳಿದರು.

ಚಿಕ್ಕಮಗಳೂರು ನಗರಕ್ಕಾಗಮಿಸಿದ್ದಾಗ ವಿಠಲ್ ರಾವ್ ಜೊತೆ ಹೋಗಿ ಭೇಟಿಮಾಡಿರುವುದಾಗಿ ಹೇಳಿದ ಅವರು, ಆಲ್ದೂರಿಗೂ ಬಂದು 1990-91 ರ ಲೋಕಸಭಾ ಚುನಾವಣೆ ನಡೆಯುವ ಮುನ್ನವೇ ಅಟಲ್ ಜೀ ಅವರನ್ನು ಆಹ್ವಾನಿಸಿ ಎ.ಸಿ.ಚಂದ್ರಶೇಖರ್ ಅವರ ಅಧ್ಯಕ್ಷತೆಯಲ್ಲಿ ಅಭಿನಂದನಾ ಸಮಿತಿ ಮೂಲಕ ನಿಧಿ ಸಂಗ್ರಹ ಮಾಡಿ ಐಬಿಯಲ್ಲಿ ಭೇಟಿಮಾಡಿ ಮೊದಲ ಬಾರಿಗೆ ಫೋಟೋ ತೆಗೆಸಿಕೊಂಡಾಗ ಬೂತ್ ಮಟ್ಟದ ಅಧ್ಯಕ್ಷನಾಗಿದ್ದೆ ಎಂದು ತಿಳಿಸಿದರು.

ನೇತಾಜಿ ಸುಭಾಷ್ ಚಂದ್ರಬೋಸ್ ಜಿಲ್ಲಾ ಆಟದ ಮೈದಾನದಲ್ಲಿ ಬೃಹತ್ ಸಾರ್ವಜನಿಕ ಸಭೆ ಏರ್ಪಡಿಸಿ ಈ ಸಂದರ್ಭದಲ್ಲಿ ನಿಧಿಯನ್ನು ಸಮರ್ಪಿಸಲಾಯಿತು.1996 ರಲ್ಲಿ 13 ದಿನಗಳ ಕಾಲ ಪ್ರಧಾನ ಮಂತ್ರಿಯಾಗಿ ರಾಜೀನಾಮೆ ನೀಡಿದ ಸಂದರ್ಭದಲ್ಲಿ ಭಾವನಾತ್ಮಕವಾಗಿ ಒಂದು ವಿಚಾರ ಹೇಳಿದರು. ?ಮತ್ತೆ ಅಧಿಕಾರಕ್ಕೆ ಬರುತ್ತೇವೆ? ಎಂದು ರಾಜಕೀಯ ವಿಪ್ಲವದ ಬಗ್ಗೆ ಹೇಳಿದ್ದನ್ನು ಸ್ಮರಿಸಿದರು.

.1995-96 ರಲ್ಲಿ ರಾಷ್ಟ್ರೀಯ ಅಧಿವೇಶನ ಮುಂಬೈನಲ್ಲಿ ನಡೆದಾಗ ಕೋಟೆ ರಂಗನಾಥ್, ದಿವಾಕರ್, ಲೋಕೇಶ್, ಸುಬ್ರಹ್ಮಣ್ಯ ತಾವೂ ಸೇರಿದಂತೆ ಭಾಗವಹಿಸಿದ್ದನ್ನು ನೆನಪಿಸಿಕೊಂಡರು.

ಬಿಜೆಪಿ ರಾಜ್ಯ ಕಾರ್ಯದರ್ಶಿ ಡಾ.ಲಕ್ಷ್ಮಿ ಅಶ್ವಿನ್‌ಗೌಡ ಮಾತನಾಡಿ, ಅಟಲ್ ಬಿಹಾರಿ ವಾಜಪೇಯಿ ಅವರ ನೂರನೇ ವರ್ಷದ ಜನ್ಮ ದಿನಾಚರಣೆ ಅಂಗವಾಗಿ ಪ್ರಸಕ್ತ ವರ್ಷ ವಿಶೇಷವಾಗಿ ಜನಮಾನಸದಲ್ಲಿ ಉಳಿಯುವಂತ ಕಾರ್ಯಕ್ರಮಗಳನ್ನು ರಾಜ್ಯ ಬಿಜೆಪಿ ಆಯೋಜಿಸಲು ನಿರ್ಧರಿಸಿದೆ ಎಂದರು.

ಫೆ.14 ರಿಂದ ಮಾ.14 ರವರೆಗೆ ವಾಜಪೇಯಿ ಅವರೊಂದಿಗೆ ಒಡನಾಟ ಹೊಂದಿರುವವರ ಮನೆಗೆ ಹೋಗಿ ಸ್ಮರಣಿಕೆ ನೀಡುವ ಮೂಲಕ ಅವರನ್ನು ಸನ್ಮಾನಿಸಿ ಸಮಾಲೋಚನೆ ನಡೆಸಿ ಜನ್ಮ ಶತಮಾನೋತ್ಸವವನ್ನು ತುಂಬ ಅರ್ಥಗರ್ಭಿತವಾಗಿ ಮಾಡಲು ಉದ್ದೇಶ ಹೊಂದಲಾಗಿದೆ ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಸೇರಿದಂತೆ ಜಿಲ್ಲೆಯಲ್ಲಿ 15 ಪ್ರಮುಖರನ್ನು ಆಯ್ಕೆಮಾಡಲಾಗಿದೆ.

ವಿರಾಸತ್ ಸಮ್ಮೇಳನ ನಡೆಸಲು ಸಹ ನಿರ್ಧರಿಸಲಾಗಿದೆ ಎಂದು ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ

ಕಡೂರು ಮಾಜಿ ಶಾಸಕ ಬೆಳ್ಳಿ ಪ್ರಕಾಶ್, ಬಿಜೆಪಿ ಜಿಲ್ಲಾಧ್ಯಕ್ಷ ಎಂ.ಆರ್ ದೇವರಾಜ್ ಶೆಟ್ಟಿ, ನಗರಾಧ್ಯಕ್ಷ ಕೆಂಪನಹಳ್ಳಿ ಪುಷ್ಪರಾಜ್, ಮುಖಂಡರಾದ ಕೋಟೆ ರಂಗನಾಥ್, ಸಿ.ಹೆಚ್ ಲೋಕೇಶ್, ಕನಕರಾಜ್ ಅರಸ್, ಜಯವರ್ಧನ್, ಜಸಂತಅನಿಲ್ ಕುಮಾರ್, ಬಸವರಾಜ್, ಕುಮಾರ್, ಮಧು, ಸತೀಶ್ ಉಪಸ್ಥಿತರಿದ್ದರು.

# ಕುರುವತ್ತಿ ಬಸವೇಶ್ವರ ರಥೋತ್ಸವ ಪಾದಯಾತ್ರಿಗಳಿಗೆ ಬೀಳ್ಕೊಡುಗೆ

**ದಾವಣಗೆರೆ:** ದಾವಣಗೆರೆ ಚೌಕಿಪೇಟೆಯ ಶ್ರೀ ಕುರುವತ್ತಿ ಬಸವೇಶ್ವರ ಪಾದಯಾತ್ರೆ ಸೇವಾ ಸಮಿತಿ ವತಿಯಿಂದ ಫೆ. 28 ರಂದು ಸಂಜೆ 4.30 ಕ್ಕೆ ಕುರುವತ್ತಿಯಲ್ಲಿ ನಡೆಯಲಿರುವ ಶ್ರೀ ಮಲ್ಲಿಕಾರ್ಜುನ ಸ್ವಾಮಿ ಮತ್ತು ಶ್ರೀ ಬಸವೇಶ್ವರ ಸ್ವಾಮಿ ರಥೋತ್ಸವಕ್ಕೆ 21ನೇ ವರ್ಷದ ಪಾದಯಾತ್ರೆ ಹಮ್ಮಿಕೊಂಡಿದ್ದು, ಫೆ. 26 ರಾತ್ರಿ 8 ಗಂಟೆಗೆ ನಗರದ ಶ್ರೀ ಶಿವಯೋಗಿ ಬಕ್ಕೇಶ್ವರ ದೇವಸ್ಥಾನದ ಆವರಣದಲ್ಲಿ ಬೀಳ್ಕೊಡುಗೆ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಸಮಿತಿಯ ಸಹ ಸಂಚಾಲಕ ಶಿವಾನಂದಪ್ಪ ಬೆನ್ನೂರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ 20 ವರ್ಷದಿಂದ ದಾವಣಗೆರೆಯಿಂದ ಕುರುವತ್ತಿ ರಥೋತ್ಸವಕ್ಕೆ ಪಾದಯಾತ್ರೆ ಮೂಲಕ ಭಕ್ತರು ತೆರಳುತ್ತಿದ್ದು, ಈ ಬಾರಿ ದಾವಣಗೆರೆಯಿಂದ 2 ಸಾವಿರಕ್ಕೂ ಹೆಚ್ಚು ಭಕ್ತರು ಪಾದಯಾತ್ರೆಯಲ್ಲಿ ಪಾಲ್ಗೊಳ್ಳುತ್ತಿದ್ದಾರೆ. ಕುರುವತ್ತಿ ತಲುಪುವಷ್ಟರಲ್ಲಿ 15 ಸಾವಿರಕ್ಕೂ ಹೆಚ್ಚು ಭಕ್ತರು ಸೇರ್ಪಡೆಯಾಗಲಿದ್ದಾರೆ ಎಂದರು.

ಪಾದಯಾತ್ರೆ ಬಕ್ಕೇಶ್ವರ ದೇವಸ್ಥಾನದ ಆವರಣದಿಂದ ಬೀಳ್ಕೊಂಡು, ಹೊಂಡದ ರಸ್ತೆ ಮೂಲಕ, ಯರಗುಂಟೆ, ಆವರಗೊಳ್ಳ, ಕಕ್ಕರಗೊಳ್ಳ, ಕೊಂಡಜ್ಜಿ, ಬುಳ್ಳಾಪುರದ ಮೂಲಕ ಕುರುಬರಹಳ್ಳಿ ಕ್ರಾಸ್, ದುಗ್ಗಾವತಿ, ವಟ್ಲಹಳ್ಳಿ, ಕಡತಿ, ನಂದ್ಯಾಲ, ನಿಟ್ಟೂರು ಕ್ರಾಸ್ ಮೂಲಕ ಫೆ.27 ಬೆಳಿಗ್ಗೆ ಹಲವಾಗಲು ತಲುಪಲಿದೆ. ಸಂಜೆ 4 ಗಂಟೆಗೆ ಹಲವಾಗಲು ಬಿಟ್ಟು, ಗರ್ಭಗುಡಿ, ಸಿದ್ಧಾಪುರ ಮಾರ್ಗವಾಗಿ ಲಿಂಗನಾಯ್ಕನಹಳ್ಳಿ ಶ್ರೀ ಕುರುವತ್ತಿ ಕ್ಷೇತ್ರ ತಲುಪಲಾಗುವುದು ಎಂದು ವಿವರಿಸಿದರು.




ಪಾದಯಾತ್ರೆ ವೇಳೆ ಎಲ್ಲೆಡೆ ಕುಡಿಯುವ ನೀರು, ಪ್ರಸಾದ ಹಾಗೂ ಔಷಧಿ ವ್ಯವಸ್ಥೆಯನ್ನು ದಾನಿಗಳು, ಸೇವಾರ್ಥದಾರರು ಮಾಡುತ್ತಿದ್ದಾರೆ. ಪಾದಯಾತ್ರಿಗಳು ಕಡ್ಡಾಯವಾಗಿ ಬಂಗಾರದ ಆಭರಣಗಳು, ಬೆಲೆಬಾಳುವ ವಸ್ತುಗಳನ್ನು ತರಬಾರದು. ಬ್ಯಾಟರಿಗಳನ್ನು ತಪ್ಪದೆ ತರಬೇಕು ಎಂದು ಕರೆ ನೀಡಿದರು.

ಫೆ.26 ರಂದು ನಡೆಯುವ ಬೀಳ್ಕೊಡುಗೆ ಸಮಾರಂಭದ ಸಾನ್ನಿಧ್ಯವನ್ನು ಪುಣ್ಯಕೋಟಿ ಮಠದ ಶ್ರೀ ಜಗದೀಶ್ವರ ಸ್ವಾಮಿಗಳು ವಹಿಸಲಿದ್ದು, ಅಧ್ಯಕ್ಷತೆಯನ್ನು ಸಮಿತಿ ಗೌರವಾಧ್ಯಕ್ಷ ಎನ್. ಬಕ್ಕೇಶ್ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಉಪ ಮೇಯರ್ ಸೋಗಿ ಶಾಂತಕುಮಾರ್, ಮಾಜಿ ಮೇಯರ್ ಬಿ.ಜಿ. ಅಜಯ್ ಕುಮಾರ್, ದೂಡಾ ಸದಸ್ಯೆ ಎಂ.ಆರ್. ವಾಣಿ, ವರ್ತಕ ಮಾಳಗೇರ ಬಸವರಾಜಪ್ಪ ಎಂ.ಕೆ., ಸಮಿತಿ ಉಪಾಧ್ಯಕ್ಷ ವಿ. ಮಹಾಂತೇಶ್ ಒಣರೊಟ್ಟಿ, ಸಮಿತಿ ಅಧ್ಯಕ್ಷ ಕೆ.ಎ. ಸತ್ಯನಾರಾಯಣ್ ಆಗಮಿಸಲಿದ್ದಾರೆ ಎಂದು ವಿವರಿಸಿದರು.

ಸುದ್ದಿಗೋಷ್ಠಿಯಲ್ಲಿ, ಬಿ.ಆರ್. ಗಿರೀಶ್, ಕೆ.ಬಿ. ಶಿವಕುಮಾರ್, ಕೆ.ಎಂ. ಲೋಕೇಶ್ವರಯ್ಯ, ಹೆಚ್. ಚನ್ನಬಸಪ್ಪ, ಬಿ.ಎಸ್. ಚೇತನ್ ಕುಮಾರ್ ಇನ್ನಿತರರು ಉಪಸ್ಥಿತರಿದ್ದರು.

# ಗ್ರಾಮೀಣ ಸರ್ಕಾರಿ ಶಾಲೆಗಳ ಸರ್ವಾಂಗೀಣ ಅಭಿವೃದ್ಧಿಗೆ ಸಹಕಾರ ಇರಲಿ : ಎಸ್.ಮಧು ಬಂಗಾರಪ್ಪ



**ಶಿವಮೊಗ್ಗ:** ಗ್ರಾಮೀಣ ಸರ್ಕಾರಿ ಶಾಲೆಗಳ ಮೂಲಭೂತ ಸೌಕರ್ಯಗಳು ಸೇರಿದಂತೆ ಸರ್ವಾಂಗೀಣ ಅಭಿವೃದ್ಧಿಗೆ ಹಳೇ ವಿದ್ಯಾರ್ಥಿಗಳು, ಸಿಎಸ್‌ಆರ್ ಮತ್ತು ದಾನಿಗಳ ಸಹಕಾರ ಸದಾ ಇರಲಿ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಮಧು ಬಂಗಾರಪ್ಪ ಮನವಿ ಮಾಡಿದರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಶಿವಮೊಗ್ಗ ಹಾಗೂ ಸಹಕಾರಿ ಸಂಸ್ಥೆಗಳು, ಕೈಗಾರಿಕಾ ಉದ್ಯಮಗಳು, ವ್ಯಾಪಾರ , ವಾಣಿಜ್ಯೋದ್ಯಮಿಗಳು, ರೌಂಡ್ ಟೇಬಲ್, ವಿವಿಧ ಸಂಸ್ಥೆಗಳು, ಹಳೇ ವಿದ್ಯಾರ್ಥಿಗಳ ಸಂಘಗಳ ಸಹಯೋಗದೊಂದಿಗೆ ಜಿ.ಪಂ. ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಲಾಗಿದ್ದ ' ನಮ್ಮ ಶಾಲೆ ನಮ್ಮ ಜವಾಬ್ದಾರಿ' ಹಾಗೂ ಸಿಎಸ್‌ಆರ್ ಯೋಜನೆಗಳ ಅನುಷ್ಠಾನ ಕುರಿತಾದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳ ಸರ್ವಾಂಗೀಣ ಅಭಿವೃದ್ಧಿಗೆ 3 ವಿಭಾಗಗಳಿವೆ. ಒಂದು ಸಿಎಸ್‌ಆರ್ ನಿಧಿ, ದಾನಿಗಳು ಮತ್ತು ?ನಮ್ಮ ಶಾಲೆ ನಮ್ಮ ಜವಾಬ್ದಾರಿ? ಕಾರ್ಯಕ್ರಮದ ದಾನಿಗಳಾಗಿದ್ದು, ರಾಜ್ಯದಲ್ಲಿ ಅನೇಕ ಶಾಲೆಗಳು ಅಭಿವೃದ್ಧಿ ಕಾಣುತ್ತಿವೆ.

ಶಿಕ್ಷಣ ಇಲಾಖೆಯಲ್ಲಿ 46 ಸಾವಿರ ಸರ್ಕಾರಿ ಶಾಲೆಗಳು ಸೇರಿದಂತೆ 76 ಸಾವಿರ ಸರ್ಕಾರಿ ಅನುಸರ್ಕಾರಿ-ಅನುದಾನಿತ ಖಾಸಗಿ ಶಾಲೆ ಕಾಲೇಜು ಇವೆ. 1.8 ಕೋಟಿ ವಿದ್ಯಾರ್ಥಿಗಳು ಇದ್ದಾರೆ. 1.8 ತಿಂಗಳಲ್ಲಿ ಸಾಕಷ್ಟು ಬದಲಾವಣೆ ಆಗಿದೆ. ಹಳೇ ವಿದ್ಯಾರ್ಥಿಗಳ 36 ಸಾವಿರ ವಾಟ್ಸಾಪ್ ಗುಂಪುಗಳನ್ನು ರಚಿಸಲಾಗಿದೆ.

ಮಾನ್ಯ ಮುಖ್ಯಮಂತ್ರಿಗಳು ತಮ್ಮ ಸಂಬಳದಲ್ಲಿ ರೂ. 10 ಲಕ್ಷವನ್ನು ಅವರು ಓದಿದ ಶಾಲೆಗೆ ನೀಡಿದ್ದಾರೆ. ನನ್ ಸಂಬಳದಲ್ಲಿ ರೂ. 10 ಲಕ್ಷವನ್ನ ನನ್ನ ಊರಿನ ಶಾಲೆಯ ಪೀಠೋಪಕರಣಕ್ಕೆ ನೀಡಿದ್ದೇನೆ. ಸಿಎಸ್‌ಆರ್ ಅಡಿಯಲ್ಲಿ ಸಾಕಷ್ಟು ಶಾಲೆಗಳ ಅಭಿವೃದ್ಧಿ ಆಗುತ್ತಿದ್ದು ಅದರಲ್ಲಿ ಗರಿಷ್ಠ ಹಣ ರೂ. 1591 ಕೋಟಿ ಅಜೀಂ ಪ್ರೇಂಜೀ ಫೌಂಡೇಶನ್ನಿಂದ ಸರ್ಕಾರಿ ಶಾಲೆಗಳ ಮಕ್ಕಳಿಗೆ ಮೊಟ್ಟೆಗಾಗಿ ನೀಡಿದ್ದಾರೆ.

ಸರ್ಕಾರಿ ಶಾಲೆಗಳಲ್ಲಿ ಸರ್ಕಾರದಿಂದ ಉಚಿತವಾಗಿ 57 ಲಕ್ಷ ಮಕ್ಕಳಿಗೆ ಹಾಲು, ರಾಗಿ ಮಾಲ್ಟ್, 2 ಜೊತೆ ಸಮವಸ್ತ್ರ, ಶೂ ಸಾಕ್ಸ್ ಉಚಿತ ಊಟ, ಮೊಟ್ಟೆ ಹಾಗೂ ಕಲಿಕೆಯಲ್ಲಿ ಮುಂದೆ ಬರಲು ಶಾಲೆಗಳಿಗೆ ಉಚಿತ ವಿದ್ಯುತ್, ನೀರು, ಗ್ರಂಥಾಲಯಕ್ಕೆ ಉಚಿತ ವಿದ್ಯುತ್ , ಸಂಜೆ ವಿಶೇಷ ಕ್ಲಾಸು, ಪರೀಕ್ಷಾ ಪಾವಿತ್ರ್ಯತೆ ಕಾಪಾಡಲು ಪರೀಕ್ಷೆಯಲ್ಲಿ ವೆಬ್ ಕಾಸ್ಟಿಂಗ್ ವ್ಯವಸ್ಥೆ ಮಾಡಲಾಗಿದೆ. 42 ಸಾವಿರ ಅತಿಥಿ ಶಿಕ್ಷಕರ ನೇಮಕ ಮಾಡಲಾಗಿದೆ. ಮಕ್ಕಳ ಓದಿಗೆ ಶಿಕ್ಷಕರು, ಅಧಿಕಾರಿಗಳಿಂದ ಉತ್ತಮ ಸಹಕಾರ ಸಿಗ್ತಿದೆ. ಇದೀಗ ಶಾಲೆಯಲ್ಲಿ ಕೌಶಲ್ಯ ಕಲಿಸಲಾಗುತ್ತಿದೆ. ಅದೇ ರೀತಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೂ ಸಹಕಾರ ಲಭಿಸುತ್ತಿದೆ. ಸಂಘ ಸಂಸ್ಥೆಗಳ ಸಹಕಾರ ಮುಂದೆಯೂ ಇನ್ನೂ ಹೆಚ್ಚಾಗಿ ಸಿಗಲಿ ಎಂದ ಅವರು ಮುಖ್ಯ ಮಂತ್ರಿಗಳು ಹಾಗೂ ಉಪ ಮುಖ್ಯಮಂತ್ರಿಗಳು ಸಿಎಸ್‌ಆರ್ ನಿಧಿಯನ್ನು ವಿದ್ಯಾಭ್ಯಾಸ ಕ್ಕೆ ನೀಡಲು ಕೋರಿದ್ದಾರೆ. ಗ್ರಾಮೀಣ ಭಾಗದ ಶಾಲೆಗಳ ಅಭಿವೃದ್ಧಿಗೆ ಸಿಎಸ್‌ಆರ್ ಹಾಗೂ ಹಳೇ ವಿದ್ಯಾರ್ಥಿಗಳು, ದಾನಿಗಳು ಅನುಕೂಲ ಮಾಡಿಕೊಡುತ್ತಾರೆಂಬ ವಿಶ್ವಾಸ ಇದೆ.

ಜಿಲ್ಲಾ ವಾಣಿಜ್ಯ ಸಂಘ ದ ಅಧ್ಯಕ್ಷ ಗೋಪಿನಾಥ್ ಮಾತನಾಡಿ, ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳ ಸರ್ವಾಂಗೀಣ ಅಭಿವೃದ್ಧಿಗಾಗಿ ನಮ್ಮ ಶಾಲೆ ನಮ್ಮ ಜವಾಬ್ದಾರಿ ಮತ್ತು ಸಿಎಸ್‌ಆರ್ ಅನುದಾನ ಬಳಕೆ ಉತ್ತಮ ಕ್ರಮವಾಗಿದೆ. ರೌಂಡ್ ಟೇಬಲ್ ಇತರೆ ಸಂಸ್ಥೆಗಳು ಉತ್ತಮ ಕಾರ್ಯಕ್ರಮ ಮಾಡುತ್ತಿವೆ. ಶಿವಮೊಗ್ಗದ ಮುಖ್ಯವಾದ 3 ಕೈಗಾರಿಕಾ ಪ್ರದೇಶಗಳು ಸಿಎಸ್‌ಆರ್ ಅಡಿ ಉತ್ತಮ ಕೆಲಸ ಮಾಡುತ್ತಿದ್ದು ಮುಂದೆಯೂ ಸಹಕರಿಸಲಿವೆ ಎಂದರು.

> ರಾಜ್ಯದ ಎಲ್ಲ ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟ, ಪ್ರಮಾಣ ಮತ್ತು ಪ್ರವೇಶ ಮುಖ್ಯವಾಗಿದ್ದು, ಎಲ್ಲ ಗ್ರಾಮೀಣ ಸರ್ಕಾರಿ ಶಾಲೆಗಳಲ್ಲಿ ಎಲ್ಲ ರೀತಿಯ ಸೌಲಭ್ಯಗಳು ದೊರಕುವಂತಾಗಿ, ಸರ್ವಾಂಗೀಣ ಅಭಿವೃದ್ಧಿಗೆ ಸಹಕಾರ ಬೇಕು. ಇದಕ್ಕೆ ಎನ್ಜಿಓಗಳು ಸಹ ಮುಂದೆ ಬರಬೇಕು.
> **-ಮಧು ಬಂಗಾರಪ್ಪ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**

ಹರಮಘಟ್ಟ ಶಾಲೆ ಹಳೇ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಪ್ರಕಾಶ್ ಮಾತನಾಡಿ ಗ್ರಾಮದಲ್ಲಿ ಹಾಗೂ ಹಳೇ ವಿದ್ಯಾರ್ಥಿಗಳಿಂದ ರೂ. 25 ಲಕ್ಷ ಸಂಗ್ರಹಿಸಿ ನಾವೇ ಸ್ವತಃ ಅಭಿವೃದ್ಧಿ ಕೇವಲ 4 ತಿಂಗಳಲ್ಲಿ ನಾವು ಓದಿದ ಸರ್ಕಾರಿ ಶಾಲೆಯನ್ನು ಉತ್ತಮವಾಗಿ ಅಭಿವೃದ್ಧಿಪಡಿಸಿದ್ದೇವೆ.

ಆದರೆ ಶಾಲೆಗೆ ಅಡುಗೆ ಕೊಠಡಿ, ಶೌಚಾಲಯ, ಮೈದಾನದ ಅವಶ್ಯಕತೆ ಇದೆ ಎಂದರು.

ರೌಂಡ್ ಟೇಬಲ್ ಸಂಸ್ಥೆಯ ವಿಶ್ವಾಸ್ ಕಾಮತ್ ಮಾತನಾಡಿ ಶಿವಮೊಗ್ಗದಲ್ಲಿ 45 ಕ್ಲಾಸ್ ರೂಂ ಗಳನ್ನು ನಿರ್ಮಿಸಿದ್ದೇವೆ. ರೂ.1.35 ಕೋಟಿ ವೆಚ್ಚದಲ್ಲಿ ಶರತ್ ಭೂಪಾಳಂ ಶಾಲೆಯನ್ನು ಕೆಪಿಎಸ್ ಶಾಲೆಯಾಗಿ ಉನ್ನತೀಕರಿಸಲಾಗುತ್ತಿದೆ. ಹಾಗೂ ದುರ್ಗಿಗುಡಿ ಶಾಲೆ ಅಭಿವೃದ್ಧಿ ಮಾಡಲಾಗಿದೆ ಎಂದರು.

## ಫೆ.27 ರಂದು ಜನ ಸಂಪರ್ಕ ಸಭೆ

**ಹಾಸನ :** ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ,ಹಾಸನ ವಿಭಾಗದ ನಗರ, ಕೆಐಎಡಿಬಿ ಹಾಗೂ ದುದ್ದ ವಿಭಾಗದ ವ್ಯಾಪ್ತಿಯ ಗ್ರಾಹಕರ ವಿದ್ಯುಚ್ಛಕ್ತಿಗೆ ಸಂಬಂಧಪಟ್ಟ ಸಮಸ್ಯೆಗಳನ್ನು ಪರಿಹರಿಸುವ ಸಲುವಾಗಿ ಫೆ 27 ರಂದು ಬೆಳಗ್ಗೆ 10:30 ರಿಂದ 12 ಗಂಟೆವರೆಗೆ ನಗರ ಉಪವಿಭಾಗದ, ಮಧ್ಯಾಹ್ನ 12 ರಿಂದ 1:30 ವರೆಗೆ ಕೆಐಎಡಿಬಿ ಉಪ ವಿಭಾಗದ ಹಾಗೂ ಮಧ್ಯಾಹ್ನ 3 ಗಂಟೆಗೆ ದುದ್ದ ಉಪ ವಿಭಾಗದ ಜನ ಸಂಪರ್ಕ ಸಭೆಯು ಅಧೀಕ್ಷಕ ಅಭಿಯಂತರರು, ಕಾರ್ಯ ಮತ್ತು ಪಾಲನಾವೃತ್ತ, ಹಾಸನ ರವರ ಅಧ್ಯಕ್ಷತೆಯಲ್ಲಿ, ಜನಸಂಪರ್ಕ ಸಭೆಯನ್ನು ಉಪ-ವಿಭಾಗಗಳ ಸಂಕೀರ್ಣ. ಸಂತೇಪೇಟೆ, ಹಾಸನದಲ್ಲಿ ಏರ್ಪಡಿಸಿದ್ದು, ಗ್ರಾಹಕರು ವಿದ್ಯುಚ್ಛಕ್ತಿಗೆ ಸಂಬಂಧಪಟ್ಟ ಕುಂದು ಕೊರತೆಗಳೇನಾದರೂ ಇದ್ದಲ್ಲಿ ಜನಸಂಪರ್ಕ ಸಭೆಯಲ್ಲಿ ಬಗೆಹರಿಸಿಕೊಳ್ಳಲು ಕಾರ್ಯ ಮತ್ತು ಪಾಲನಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

## ಟೆಕ್ನಿಕಲ್ ಆಫಿಸರ್ ಹುದ್ದೆ ನೇಮಕಕ್ಕೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಕೆಎಸ್‌ಎಪಿಎಸ್ ವತಿಯಿಂದ ವೈರಲ್ ಲೋಡ್ ಲ್ಯಾಬೋರೇಟರಿ(ವಿಎಲ್‌ಎಲ್) ಮಂಜೂರಾಗಿದ್ದು ಈ ವಿಭಾಗಕ್ಕೆ ಅವಶ್ಯವಿರುವ ಟೆಕ್ನಿಕಲ್ ಅಧಿಕಾರಿ ಹುದ್ದೆಯನ್ನು ಗುತ್ತಿಗೆ ಆಧಾರದಲ್ಲಿ ನೇಮಕಾತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.ಅವಶ್ಯವಿರುವ ಟೆಕ್ನಿಕಲ್ ಅಧಿಕಾರಿ ಹುದ್ದೆಯನ್ನು ಗುತ್ತಿಗೆ ಆಧಾರದಲ್ಲಿ ನೇಮಕಾತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಮಾ.05 ಕಡೆಯ ದಿನವಾಗಿರುತ್ತದೆ. ಟೆಕ್ನಿಕಲ್ ಆಫಿಸರ್ ಹುದ್ದೆ 01, ವೇತನ ರೂ.35000/- ಇರುತ್ತದೆ. ಅರ್ಜಿ ನಮೂನೆ ಮತ್ತು ಹೆಚ್ಚಿನ ವಿವರಗಳನ್ನು ಸಂಸ್ಥೆಯ ವೆಬ್ಸೈಟ್ ತಿತಿತಿ.ಎಥ್ಮುಟಠರಂಚಿ.ಛಿಂಟ ನಲ್ಲಿ ಪಡೆಯತಕ್ಕದ್ದು. ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ನಿರ್ದೇಶಕರು ಮತ್ತು ಡೀನ್ ಶಿವಮೊಗ್ಗ, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಇವರ ಹೆಸರಿಗೆ ಪಡೆದಿರುವ ರೂ.1000 ಡಿಡಿ ಯೊಂದಿಗೆ ನಿರ್ದೇಶಕರು ಮತ್ತು ಡೀನ್ ಶಿವಮೊಗ್ಗ, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಸಾಗರ ರಸ್ತೆ, ಶಿವೊಗ್ಗ 577201 ಈ ವಿಳಾಸಕ್ಕೆ ಸಲ್ಲಿಸಬೇಕು.

---

**ಮಾನ್ಯ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸಿ.ಜೆ.ಎಂ. ನ್ಯಾಯಾಲಯ, ದಾವಣಗೆರೆ**

**ಸಿ.ಆರ್.ಮಿಸ್.ನಂ: 87/2025**

**ಅರ್ಜಿದಾರರು:** 1)ತೋಯಮ್ಮ ಕೋಂ ಲೇಟ್ ಕರಿಯಪ್ಪ ವಯಸ್ಸು ಸುಮಾರು 70 ವರ್ಷ, 2) ಶ್ರೀಮತಿ ನಾಗಮ್ಮ ಕೋಂ ವಾಮದೇವಪ್ಪ,ವಯಸ್ಸು ಸುಮಾರು 50 ವರ್ಷ ವಾಸ: ತುರ್ಚಘಟ್ಟಗ್ರಾಮ, ಬೆಳವನೂರು ಅಂಚೆ, ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ 3) ಶ್ರೀಮತಿ ಇಂದ್ರಮ್ಮ ಕೋಂ ಲೇಟ್ ಬಸವರಾಜಪ್ಪ, ವಯಸ್ಸು ಸುಮಾರು 50 ವರ್ಷ, 4) ರೂಪ.ಬಿ.ಕೋಂ ಹೇಮಕೇಶವ.ಸಿ. ವಯಸ್ಸು ಸುಮಾರು 40 ವರ್ಷ, ವಾಸ : ತುರ್ಚಘಟ್ಟ ಗ್ರಾಮ, ಬೆಳವನೂರು ಅಂಚೆ, ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ 5) ಶ್ರೀಮತಿ ಎ.ಬಿ.ಆಶಾ ಕೋಂ ಕರಿಯಪ್ಪ, ವಯಸ್ಸು ಸುಮಾರು 37 ವರ್ಷ. ವಾಸ: ಆಲೂರು ಗ್ರಾಮ.ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ 6) ಶ್ರೀಮತಿ ಎ.ಬಿ.ಜ್ಯೋತಿ ಕೋಂ ಎಂ.ಅಜಯ್. ವಯಸ್ಸು ಸುಮಾರು 36 ವರ್ಷ,ವಾಸ:ಮನೆ ನಂ.177,ಬೂದಾಳ್ ರಸ್ತೆ 5ನೇ ಕ್ರಾಸ್,ಬಾಬು ಜಗಜೀವನ್ ರಾಂ ನಗರ. ದಾವಣಗೆರೆ7) ನಿಂಗರಾಜ ಬಿನ್ ಲೇಟ್ ಬಸವರಾಜಪ್ಪ.ವಯಸ್ಸು ಸುಮಾರು 34 ವರ್ಷ. 8) ಪ್ರವೀಣ ಬಿನ್ ಲೇಟ್ ಬಸವರಾಜಪ್ಪ, ವಯಸ್ಸು ಸುಮಾರು 22 ವರ್ಷ. ಅರ್ಜಿದಾರ ನಂ.1, 4, 7 ಮತ್ತು 8 ರವರ ವಾಸ: ಕಾಟೀಹಳ್ಳಿ ಗ್ರಾಮ ಮಂಡಲೂರು ಅಂಚೆ, ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ

**ವಿರುದ್ಧ**

**ಎದುರುದಾರರು:** ತಹಶೀಲ್ದಾರ್ ರವರು, ದಾವಣಗೆರೆ ತಾಲ್ಲೂಕು, ದಾವಣಗೆರೆ

**ಅರ್ಜಿದಾರರ ಪರ ನೀಡಲಾದ ಪ್ರಕಟಣಾ ನೋಟೀಸು**

1ನೇ ಅರ್ಜಿದಾರರ ಮಾವ, 2 ಮತ್ತು 3ನೇ ಅರ್ಜಿದಾರರ ಅಜ್ಜ ಹಾಗೂ 4 ರಿಂದ 8ನೇ ಅರ್ಜಿದಾರರ ಮುತ್ತಜ್ಜನಾದ **ನಿಂಗಪ್ಪ ಬಿನ್ ದುರುಗಪ್ಪ** ಇವರು ದಿನಾಂಕ: 20.05.1980 ರಂದು ದಾವಣಗೆರೆ ತಾಲ್ಲೂಕು, ಕಾಟೀಹಳ್ಳಿ ಗ್ರಾಮದ ತಮ್ಮ ಮನೆಯಲ್ಲಿ ಮರಣ ಹೊಂದಿರುತ್ತಾರೆ. ಅರ್ಜಿದಾರರು ಮೇಲ್ಕಂಡ ಪ್ರಕರಣವನ್ನು ತಮ್ಮ ಮೃತರ ಮರಣ ಪ್ರಮಾಣ ಪತ್ರವನ್ನು ಪಡೆಯಲು ಮಾನ್ಯ ಘನ ನ್ಯಾಯಾಲಯದಲ್ಲಿ ಸಲ್ಲಿಸಿರುತ್ತಾರೆ. ಇದಕ್ಕೆ ಸಂಬಂಧಿಸಿದಂತೆ ಬೇರೆ ಯಾರದಾದರೂ ತಕರಾರು ಇದ್ದಲ್ಲಿ ನಿಮ್ಮ ಹಾಜರಾತಿಗಾಗಿ ದಿನಾಂಕ: 28/3/2025 ರಂದು ಬೆಳಿಗ್ಗೆ 11-00 ಗಂಟೆಗೆ ನೀವು ಖುದ್ದಾಗಿ ಅಥವಾ ವಕೀಲರ ಮುಖಾಂತರವಾಗಲೀ ಪ್ರಕರಣದಲ್ಲಿ ಹಾಜರಿದ್ದು, ತಕರಾರು ಇದ್ದಲ್ಲಿ ಸಲ್ಲಿಸತಕ್ಕದ್ದು. ತಪ್ಪಿದಲ್ಲಿ ಪ್ರಕರಣವನ್ನು ಏಕಪಕ್ಷಿಯ ತೀರ್ಮಾನ ತೆಗೆದುಕೊಳ್ಳಲಾಗುವುದು ತಿಳಿಯಿರಿ. ಸದರಿ ನ್ಯಾಯಾಲಯದ ಮೊಹರು ಹಾಗೂ ಸಹಿಯೊಂದಿಗೆ, ದಿನಾಂಕ: 18.02.2025 'ರಂದು ಕೊಡಲ್ಪಟ್ಟಿದೆ

ನ್ಯಾಯಾಲಯದ ಆದೇಶದ ಮೇರೆಗೆ,

ಸಹಿ/-
ಅರ್ಜಿದಾರರ ಪರ ವಕೀಲರು
(ಕೆ.ಚಂದ್ರಕಾಂತ್ )

ಶಿರಸ್ತೇದಾರರು
ಮಾನ್ಯ ಪ್ರಧಾನ ಹಿರಿಯ ಸಿವಿಲ್
ನ್ಯಾಯಾಧೀಶರು ಹಾಗೂ ಸಿ.ಜೆ.ಎಂ.
ನ್ಯಾಯಾಲಯ, ದಾವಣಗೆರೆ

---

**ಮಾನ್ಯ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸಿ.ಜೆ.ಎಂ. ನ್ಯಾಯಾಲಯ, ದಾವಣಗೆರೆ**

**ಸಿ.ಆರ್.ಮಿಸ್.ನಂ:91/2025**

**ಅರ್ಜಿದಾರರು:** 1)ತೋಯಮ್ಮ ಕೋಂ ಲೇಟ್ ಕರಿಯಪ್ಪ ವಯಸ್ಸು ಸುಮಾರು 70 ವರ್ಷ, 2) ಶ್ರೀಮತಿ ನಾಗಮ್ಮ ಕೋಂ ವಾಮದೇವಪ್ಪ,ವಯಸ್ಸು ಸುಮಾರು 50 ವರ್ಷ ವಾಸ: ತುರ್ಚಘಟ್ಟಗ್ರಾಮ, ಬೆಳವನೂರು ಅಂಚೆ, ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ 3) ಶ್ರೀಮತಿ ಇಂದ್ರಮ್ಮ ಕೋಂ ಲೇಟ್ ಬಸವರಾಜಪ್ಪ, ವಯಸ್ಸು ಸುಮಾರು 50 ವರ್ಷ, 4) ರೂಪ.ಬಿ.ಕೋಂ ಹೇಮಕೇಶವ.ಸಿ. ವಯಸ್ಸು ಸುಮಾರು 40 ವರ್ಷ, ವಾಸ : ತುರ್ಚಘಟ್ಟ ಗ್ರಾಮ, ಬೆಳವನೂರು ಅಂಚೆ, ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ 5) ಶ್ರೀಮತಿ ಎ.ಬಿ.ಆಶಾ ಕೋಂ ಕರಿಯಪ್ಪ, ವಯಸ್ಸು ಸುಮಾರು 37 ವರ್ಷ. ವಾಸ: ಆಲೂರು ಗ್ರಾಮ.ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ 6) ಶ್ರೀಮತಿ ಎ.ಬಿ.ಜ್ಯೋತಿ ಕೋಂ ಎಂ.ಅಜಯ್. ವಯಸ್ಸು ಸುಮಾರು 36 ವರ್ಷ,ವಾಸ:ಮನೆ ನಂ.177,ಬೂದಾಳ್ ರಸ್ತೆ 5ನೇ ಕ್ರಾಸ್,ಬಾಬು ಜಗಜೀವನ್ ರಾಂ ನಗರ. ದಾವಣಗೆರೆ7) ನಿಂಗರಾಜ ಬಿನ್ ಲೇಟ್ ಬಸವರಾಜಪ್ಪ.ವಯಸ್ಸು ಸುಮಾರು 34 ವರ್ಷ. 8) ಪ್ರವೀಣ ಬಿನ್ ಲೇಟ್ ಬಸವರಾಜಪ್ಪ, ವಯಸ್ಸು ಸುಮಾರು 22 ವರ್ಷ. ಅರ್ಜಿದಾರ ನಂ.1, 4, 7 ಮತ್ತು 8 ರವರ ವಾಸ: ಕಾಟೀಹಳ್ಳಿ ಗ್ರಾಮ ಮಂಡಲೂರು ಅಂಚೆ, ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ

**ವಿರುದ್ಧ**

**ಎದುರುದಾರರು:** ತಹಶೀಲ್ದಾರ್ ರವರು, ದಾವಣಗೆರೆ ತಾಲ್ಲೂಕು, ದಾವಣಗೆರೆ

**ಅರ್ಜಿದಾರರ ಪರ ನೀಡಲಾದ ಪ್ರಕಟಣಾ ನೋಟೀಸು**

1ನೇ ಅರ್ಜಿದಾರರ ಗಂಡ, 2 ಅರ್ಜಿದಾರರ ತಂದೆ 3ನೇ ಅರ್ಜಿದಾರರ ಮಾವ ಹಾಗೂ 4 ರಿಂದ 8ನೇ ಅರ್ಜಿದಾರರ ಅಜ್ಜನಾದ **ಕರಿಯಪ್ಪ ಬಿನ್ ನಿಂಗಪ್ಪ** ಇವರು ದಿನಾಂಕ: 15.08.2010 ರಂದು ದಾವಣಗೆರೆ ತಾಲ್ಲೂಕು, ಕಾಟೀಹಳ್ಳಿ ಗ್ರಾಮದ ತಮ್ಮ ಮನೆಯಲ್ಲಿ ಮರಣ ಹೊಂದಿರುತ್ತಾರೆ. ಅರ್ಜಿದಾರರು ಮೇಲ್ಕಂಡ ಪ್ರಕರಣವನ್ನು ತಮ್ಮ ಮೃತರ ಮರಣ ಪ್ರಮಾಣ ಪತ್ರವನ್ನು ಪಡೆಯಲು ಮಾನ್ಯ ಘನ ನ್ಯಾಯಾಲಯದಲ್ಲಿ ಸಲ್ಲಿಸಿರುತ್ತಾರೆ. ಇದಕ್ಕೆ ಸಂಬಂಧಿಸಿದಂತೆ ಬೇರೆ ಯಾರದಾದರೂ ತಕರಾರು ಇದ್ದಲ್ಲಿ ನಿಮ್ಮ ಹಾಜರಾತಿಗಾಗಿ ದಿನಾಂಕ: 28/3/2025 ರಂದು ಬೆಳಿಗ್ಗೆ 11-00 ಗಂಟೆಗೆ ನೀವು ಖುದ್ದಾಗಿ ಅಥವಾ ವಕೀಲರ ಮುಖಾಂತರವಾಗಲೀ ಪ್ರಕರಣದಲ್ಲಿ ಹಾಜರಿದ್ದು, ತಕರಾರು ಇದ್ದಲ್ಲಿ ಸಲ್ಲಿಸತಕ್ಕದ್ದು. ತಪ್ಪಿದಲ್ಲಿ ಪ್ರಕರಣವನ್ನು ಏಕಪಕ್ಷಿಯ ತೀರ್ಮಾನ ತೆಗೆದುಕೊಳ್ಳಲಾಗುವುದು ತಿಳಿಯಿರಿ. ಸದರಿ ನ್ಯಾಯಾಲಯದ ಮೊಹರು ಹಾಗೂ ಸಹಿಯೊಂದಿಗೆ, ದಿನಾಂಕ: 18.02.2025 'ರಂದು ಕೊಡಲ್ಪಟ್ಟಿದೆ

ನ್ಯಾಯಾಲಯದ ಆದೇಶದ ಮೇರೆಗೆ,

ಸಹಿ/-
ಅರ್ಜಿದಾರರ ಪರ ವಕೀಲರು
(ಕೆ.ಚಂದ್ರಕಾಂತ್ )

ಶಿರಸ್ತೇದಾರರು
ಮಾನ್ಯ ಪ್ರಧಾನ ಹಿರಿಯ ಸಿವಿಲ್
ನ್ಯಾಯಾಧೀಶರು ಹಾಗೂ ಸಿ.ಜೆ.ಎಂ.
ನ್ಯಾಯಾಲಯ, ದಾವಣಗೆರೆ

---

**ಮಾನ್ಯ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸಿ.ಜೆ.ಎಂ. ನ್ಯಾಯಾಲಯ, ದಾವಣಗೆರೆ**

**ಸಿ.ಆರ್.ಮಿಸ್.ನಂ: 92/2025**

**ಅರ್ಜಿದಾರರು:** 1)ತೋಯಮ್ಮ ಕೋಂ ಲೇಟ್ ಕರಿಯಪ್ಪ ವಯಸ್ಸು ಸುಮಾರು 70 ವರ್ಷ, 2) ಶ್ರೀಮತಿ ನಾಗಮ್ಮ ಕೋಂ ವಾಮದೇವಪ್ಪ,ವಯಸ್ಸು ಸುಮಾರು 50 ವರ್ಷ ವಾಸ: ತುರ್ಚಘಟ್ಟಗ್ರಾಮ, ಬೆಳವನೂರು ಅಂಚೆ, ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ 3) ಶ್ರೀಮತಿ ಇಂದ್ರಮ್ಮ ಕೋಂ ಲೇಟ್ ಬಸವರಾಜಪ್ಪ, ವಯಸ್ಸು ಸುಮಾರು 50 ವರ್ಷ, 4) ರೂಪ.ಬಿ.ಕೋಂ ಹೇಮಕೇಶವ.ಸಿ. ವಯಸ್ಸು ಸುಮಾರು 40 ವರ್ಷ, ವಾಸ : ತುರ್ಚಘಟ್ಟ ಗ್ರಾಮ, ಬೆಳವನೂರು ಅಂಚೆ, ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ 5) ಶ್ರೀಮತಿ ಎ.ಬಿ.ಆಶಾ ಕೋಂ ಕರಿಯಪ್ಪ, ವಯಸ್ಸು ಸುಮಾರು 37 ವರ್ಷ. ವಾಸ: ಆಲೂರು ಗ್ರಾಮ.ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ 6) ಶ್ರೀಮತಿ ಎ.ಬಿ.ಜ್ಯೋತಿ ಕೋಂ ಎಂ.ಅಜಯ್. ವಯಸ್ಸು ಸುಮಾರು 36 ವರ್ಷ,ವಾಸ:ಮನೆ ನಂ.177,ಬೂದಾಳ್ ರಸ್ತೆ 5ನೇ ಕ್ರಾಸ್,ಬಾಬು ಜಗಜೀವನ್ ರಾಂ ನಗರ. ದಾವಣಗೆರೆ7) ನಿಂಗರಾಜ ಬಿನ್ ಲೇಟ್ ಬಸವರಾಜಪ್ಪ.ವಯಸ್ಸು ಸುಮಾರು 34 ವರ್ಷ. 8) ಪ್ರವೀಣ ಬಿನ್ ಲೇಟ್ ಬಸವರಾಜಪ್ಪ, ವಯಸ್ಸು ಸುಮಾರು 22 ವರ್ಷ. ಅರ್ಜಿದಾರ ನಂ.1, 4, 7 ಮತ್ತು 8 ರವರ ವಾಸ: ಕಾಟೀಹಳ್ಳಿ ಗ್ರಾಮ ಮಂಡಲೂರು ಅಂಚೆ, ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ

**ವಿರುದ್ಧ**

**ಎದುರುದಾರರು:** ತಹಶೀಲ್ದಾರ್ ರವರು, ದಾವಣಗೆರೆ ತಾಲ್ಲೂಕು, ದಾವಣಗೆರೆ

**ಅರ್ಜಿದಾರರ ಪರ ನೀಡಲಾದ ಪ್ರಕಟಣಾ ನೋಟೀಸು**

1ನೇ ಅರ್ಜಿದಾರರ ಅತ್ತೆ, 2 ಮತ್ತು 3ನೇ ಅರ್ಜಿದಾರರ ಅಜ್ಜಿ ಹಾಗೂ 4 ರಿಂದ 8ನೇ ಅರ್ಜಿದಾರರ ಮುತ್ತಜ್ಜಿಯಾದ **ಶ್ರೀಮತಿ ದುರುಗಮ್ಮ ಕೋಂ ನಿಂಗಪ್ಪ** ಇವರು ದಿನಾಂಕ: 08.04.1989 ರಂದು ದಾವಣಗೆರೆ ತಾಲ್ಲೂಕು, ಕಾಟೀಹಳ್ಳಿ ಗ್ರಾಮದ ತಮ್ಮ ಮನೆಯಲ್ಲಿ ಮರಣ ಹೊಂದಿರುತ್ತಾರೆ. ಅರ್ಜಿದಾರರು ಮೇಲ್ಕಂಡ ಪ್ರಕರಣವನ್ನು ತಮ್ಮ ಮೃತರ ಮರಣ ಪ್ರಮಾಣ ಪತ್ರವನ್ನು ಪಡೆಯಲು ಮಾನ್ಯ ಘನ ನ್ಯಾಯಾಲಯದಲ್ಲಿ ಸಲ್ಲಿಸಿರುತ್ತಾರೆ. ಇದಕ್ಕೆ ಸಂಬಂಧಿಸಿದಂತೆ ಬೇರೆ ಯಾರದಾದರೂ ತಕರಾರು ಇದ್ದಲ್ಲಿ ನಿಮ್ಮ ಹಾಜರಾತಿಗಾಗಿ ದಿನಾಂಕ: 28/3/2025 ರಂದು ಬೆಳಿಗ್ಗೆ 11-00 ಗಂಟೆಗೆ ನೀವು ಖುದ್ದಾಗಿ ಅಥವಾ ವಕೀಲರ ಮುಖಾಂತರವಾಗಲೀ ಪ್ರಕರಣದಲ್ಲಿ ಹಾಜರಿದ್ದು, ತಕರಾರು ಇದ್ದಲ್ಲಿ ಸಲ್ಲಿಸತಕ್ಕದ್ದು. ತಪ್ಪಿದಲ್ಲಿ ಪ್ರಕರಣವನ್ನು ಏಕಪಕ್ಷಿಯ ತೀರ್ಮಾನ ತೆಗೆದುಕೊಳ್ಳಲಾಗುವುದು ತಿಳಿಯಿರಿ. ಸದರಿ ನ್ಯಾಯಾಲಯದ ಮೊಹರು ಹಾಗೂ ಸಹಿಯೊಂದಿಗೆ, ದಿನಾಂಕ: 18.02.2025 'ರಂದು ಕೊಡಲ್ಪಟ್ಟಿದೆ

ನ್ಯಾಯಾಲಯದ ಆದೇಶದ ಮೇರೆಗೆ,

ಸಹಿ/-
ಅರ್ಜಿದಾರರ ಪರ ವಕೀಲರು
(ಕೆ.ಚಂದ್ರಕಾಂತ್ )

ಶಿರಸ್ತೇದಾರರು
ಮಾನ್ಯ ಪ್ರಧಾನ ಹಿರಿಯ ಸಿವಿಲ್
ನ್ಯಾಯಾಧೀಶರು ಹಾಗೂ ಸಿ.ಜೆ.ಎಂ.
ನ್ಯಾಯಾಲಯ, ದಾವಣಗೆರೆ

---

## ಟೆಕ್ನಿಕಲ್ ಆಫಿಸರ್ ಹುದ್ದೆ ನೇಮಕಕ್ಕೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಕೆಎಸ್‌ಎಪಿಎಸ್ ವತಿಯಿಂದ ವೈರಲ್ ಲೋಡ್ ಲ್ಯಾಬೋರೇಟರಿ(ವಿಎಲ್‌ಎಲ್) ಮಂಜೂರಾಗಿದ್ದು ಈ ವಿಭಾಗಕ್ಕೆ ಅವಶ್ಯವಿರುವ ಟೆಕ್ನಿಕಲ್ ಅಧಿಕಾರಿ ಹುದ್ದೆಯನ್ನು ಗುತ್ತಿಗೆ ಆಧಾರದಲ್ಲಿ ನೇಮಕಾತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಮಾ.05 ಕಡೆಯ ದಿನವಾಗಿರುತ್ತದೆ. ಟೆಕ್ನಿಕಲ್ ಆಫಿಸರ್ ಹುದ್ದೆ 01, ವೇತನ ರೂ.35000/- ಇರುತ್ತದೆ. ಅರ್ಜಿ ನಮೂನೆ ಮತ್ತು ಹೆಚ್ಚಿನ ವಿವರಗಳನ್ನು ಸಂಸ್ಥೆಯ ವೆಬ್ಸೈಟ್ ತಿತಿತಿ.ಎಥ್ಮುಟಠರಂಚಿ.ಛಿಂಟ ನಲ್ಲಿ ಪಡೆಯತಕ್ಕದ್ದು. ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ನಿರ್ದೇಶಕರು ಮತ್ತು ಡೀನ್ ಶಿವಮೊಗ್ಗ, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಇವರ ಹೆಸರಿಗೆ ಪಡೆದಿರುವ ರೂ.1000 ಡಿಡಿ ಯೊಂದಿಗೆ ನಿರ್ದೇಶಕರು ಮತ್ತು ಡೀನ್ ಶಿವಮೊಗ್ಗ, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಸಾಗರ ರಸ್ತೆ, ಶಿವೊಗ್ಗ 577201 ಈ ವಿಳಾಸಕ್ಕೆ ಸಲ್ಲಿಸಬೇಕು. ಲಕೋಟೆಯ ಮೇಲೆ ಟೆಕ್ನಿಕಲ್ ಆಫೀಸರ್ ಎಂದು ಕಡ್ಡಾಯವಾಗಿ ನಮೂದಿಸಬೇಕು. ಆಯ್ಕೆಯನ್ನು ನಿಯಮಾವಳಿಗಳ ಪ್ರಕಾರ ನಡೆಸಲಾಗುವುದು ಎಂದು ಸಿಮ್ಸ್ ನಿರ್ದೇಶಕರು ಮತ್ತು ಡೀನ್ ತಿಳಿಸಿದ್ದಾರೆ.

## ಹಂಪಿ ಉತ್ಸವಕ್ಕೆ ಸಕಲ ಸಿದ್ಧತೆ : ಬಿಗಿ ಪೊಲೀಸ್ ಬಂದೋಬಸ್ತ್

**ವಿಜಯನಗರ:** ಫೆಬ್ರವರಿ 28ರಿಂದ ಮಾರ್ಚ್2 ವರೆಗೆ 2025 ಸಾಲಿನ ಹಂಪಿ ಉತ್ಸವ ಕಾರ್ಯಕ್ರಮಕ್ಕೆ ಕರ್ನಾಟಕ ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ರವರು ಹಾಗೂ ಇತರೆ ಸಚಿವರು ಮತ್ತು ಇತರೆ ಗಣ್ಯ । ಅತಿಗಣ್ಯ ವ್ಯಕ್ತಿಗಳು ಆಗಮಿಸುತ್ತಿರುವುದರಿಂದ ಭದ್ರತೆಗಾಗಿ ಹಂಪಿ-ಹೊಸಪೇಟೆಯಲ್ಲಿ ಒಟ್ಟು 500 ಸಿಸಿ ಕ್ಯಾಮೆರಾಗಳನ್ನು ಅಳವಡಿಸಲಾಗಿರುತ್ತದೆ. ಹಾಗೂ ಕೊಪ್ಪಳ, ಚಿತ್ರದುರ್ಗ, ಹಾವೇರಿ, ಬಳ್ಳಾರಿ ರಾಯಚೂರು ಇನ್ನಿತರೆ ಜಿಲ್ಲೆಗಳಿಂದ 01-ಎಸ್.ಪಿ, 04-ಹೆಚ್ಚುವರಿ ಎಸ್.ಪಿ, 09-ಡಿ.ಎಸ್.ಪಿ, 36-ಸಿಪಿಐ, 79-ಪಿ.ಎಸ್.ಐ, 183-ಎಎಸ್‌ಐ, 920- ಹೆಚ್.ಸಿ/ಪಿ.ಸಿ, 500-ಗೃಹರಕ್ಷಕ ದಳದ ಸಿಬ್ಬಂದಿ ಹಾಗೂ 04-ಎಎಸ್‌ಸಿ ತಂಡ, 04- ಕೆ.ಎಸ್.ಆರ್.ಪಿ, 05-ಡಿ.ಎ.ಆರ್ ತುಕಡಿಗಳನ್ನು ನಿಯೋಜಿಸಿ ಬಂದೋಬಸ್ತ್ ವ್ಯವಸ್ಥೆ ಮಾಡಿಕೊಳ್ಳಲಾಗಿದೆ ಎಂದು ಪೊಲೀಸ ಇಲಾಖೆ ಪತ್ರಿಕೆ ಪ್ರಕಟಣೆ ಮೂಲಕ ತಿಳಿಸಿದರು.

## ಬೆಳಗಾವಿಯಲ್ಲಿ ಕಂಡಕ್ಟರ್ ಮೇಲೆ ಹಲ್ಲೆ: ಗಡಿಯಲ್ಲಿ ಉದ್ವಿಗ್ನ, ಮಹಾರಾಷ್ಟ್ರ ಸಾರಿಗೆ ಬಸ್ ಸಂಚಾರ ಸ್ಥಗಿತ

**ಬೆಳಗಾವಿ:** ಬೆಳಗಾವಿಯ ಹೊರವಲಯದಲ್ಲಿ ಮರಾಠಿ ಭಾಷೆಯಲ್ಲಿ ಮಾತನಾಡಲಿಲ್ಲವೆಂದು ಏಖಖಖಿಅ ಬಸ್ ಕಂಡಕ್ಟರ್ ಮೇಲೆ ಮರಾಠಿ ಪುಂಡರು ಹಲ್ಲೆ ನಡೆಸಿರುವುದು ಭಾರೀ ಆಕ್ರೋಶಕ್ಕೆ ಕಾರಣವಾಗಿದೆ. ಕಂಡಕ್ಟರ್ ಮೇಲೆ ಹಲ್ಲೆ ಖಂಡಿಸಿ ಕನ್ನಡಪರ ಸಂಘಟನೆಗಳು ಪ್ರತಿಭಟನೆ ನಡೆಸುತ್ತಿವೆ. ಸದ್ಯ ಬೆಳಗಾವಿ ಗಡಿಯಲ್ಲಿ ಉದ್ವಿಗ್ನ ವಾತಾವರಣ ನಿರ್ಮಾವಾಗಿರುವ ಹಿನ್ನೆಲೆಯಲ್ಲಿ ಮಹಾರಾಷ್ಟ್ರದಿಂದ ರಾಜ್ಯಕ್ಕೆ ಬರುವ ಸಾರಿಗೆ ಬಸ್ ಸಂಚಾರವನ್ನು ಮಹಾರಾಷ್ಟ್ರ ಸರ್ಕಾರ ಸ್ಥಗಿತಗೊಳಿಸಿದೆ.ಸುಳೆಭಾವಿ ಗ್ರಾಮದಲ್ಲಿ ಯುವಕನ ಜೊತೆ ಬಸ್ ಹತ್ತಿದ ಯುವತಿಯೋರ್ವಳು ಮರಾಠಿಯಲ್ಲಿ ಮಾತನಾಡಿದ್ದಳು. ಆಗ ನಾನು ನನಗೆ ಮರಾಠಿ ಬರಲ್ಲ, ಕನ್ನಡದಲ್ಲಿ ಮಾತನಾಡು ಎಂದು ಹೇಳಿದ್ದಕ್ಕೆ ಜನರನ್ನು ಕರೆಸಿ ನನ್ನ ಮೇಲೆ ಹಲ್ಲೆ ಮಾಡಿದ್ದಾರೆ ಎಂದು 51 ವರ್ಷದ ಕಂಡಕ್ಟರ್ ಮಹಾದೇವಪ್ಪ ಮಲ್ಲಪ್ಪ ಹುಕ್ಕೇರಿ ತಿಳಿಸಿದ್ದಾರೆ.ಸದ್ಯ ಪ್ರಕರಣ ಸಂಬಂಧ ಪೊಲೀಸರು ನಾಲ್ವರನ್ನು ಬಂಧಿಸಿದ್ದಾರೆ. ಈ ನಡುವೆ ಮಹಾರಾಷ್ಟ್ರ ಸರ್ಕಾರ ಕರ್ನಾಟಕಕ್ಕೆ ಬರುವ ಸಾರಿಗೆ ಬಸ್ ಸಂಚಾರವನ್ನು ಸ್ಥಗಿತಗೊಳಿಸಿದೆ. ಹೀಗಾಗಿ ಬೆಳಗಾವಿ ಗಡಿವರೆಗೂ ಮಾತ್ರ ಮಹಾರಾಷ್ಟ್ರ ಸಾರಿಗೆ ಬಸ್ಗಳು ಬರುತ್ತಿವೆ. ಆದರೆ ಕರ್ನಾಟಕದಿಂದ ಎಂದಿನಂತೆ ಮಹಾರಾಷ್ಟ್ರದ ವಿವಿಧ ಕಡೆಗೆ ರಾಜ್ಯದ ಸಾರಿಗೆ ಬಸ್ಗಳು ಸಂಚಾರ ಮಾಡುತ್ತಿವೆ. ಪ್ರಕರಣಕ್ಕೆ ಶನಿವಾರ ಹೊಸ ತಿರುವು ಪಡೆದು–ಕೊಂಡಿದ್ದು, ಕಂಡಕ್ಟರ್ ನನ್ನ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಆರೋಪಿಸಿ ಯುವತಿ ನೀಡಿದ ದೂರಿನ ಅನ್ವಯ ಮಹಾದೇವಪ್ಪ ಹುಕ್ಕೇರಿ ವಿರುದ್ಧ ಪೊಲೀಸರು ಪೋಕ್ಸೋ ಪ್ರಕರಣ ದಾಖಲು ಮಾಡಿದ್ದಾರೆ. ಪೊಲೀಸರ ನಡೆಗೆ ಕನ್ನಡಪರ ಸಂಘಟನೆಗಳು ಆಕ್ರೋಶ ವ್ಯಕ್ತಪಡಿಸಿದ್ದು, ಕರವೇ ಕಾರ್ಯಕರ್ತರು ಪೊಲೀಸ್ ಠಾಣೆಗೆ ಮುತ್ತಿಗೆ ಹಾಕಿ ಪೊಲೀಸರ ವಿರುದ್ಧವೇ ಘೋಷಣೆ ಕೂಗಿದ್ದಾರೆ. ಮತ್ತೊಂದೆಡೆ ಎಂಇಎಸ್ ಪ್ರತಿಕೃತಿಗೆ ಬೆಂಕಿ ಹಚ್ಚಿ, ರಾಜ್ಯ ಹೆದ್ದಾರಿ ತಡೆದ ಕರವೇ ಮುಖಂಡರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

## ಇಂದು ದೆಹಲಿಗೆ ಡಿಸಿಎಂ ಡಿಕೆ.ಶಿವಕುಮಾರ್: ರಾಹುಲ್ ಗಾಂಧಿ, ಖರ್ಗೆ ಭೇಟಿ

**ಬೆಂಗಳೂರು:** ಫೆಬ್ರವರಿ 25 ರಂದು ರಾಷ್ಟ್ರ ರಾಜಧಾನಿ ನವದೆಹಲಿಗೆ ಕೆಪಿಸಿಸಿ ಅಧ್ಯಕ್ಷ ಮತ್ತು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಭೇಟಿ ನೀಡಲಿದ್ದು, ಈ ವೇಳೆ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡುವ ಸಾಧ್ಯತೆಗಳಿವೆ ಎಂದು ತಿಳಿದುಬಂದಿದೆ. ದೆಹಲಿಗೆ ಭೇಟಿ ನೀಡಲಿರುವ ಡಿಕೆ.ಶಿವಕುಮಾರ್ ಅವರು, ಭೇಟಿ ವೇಳೆ ಬೆಂಗಳೂರಿನ ರೇಸ್ ಕೋರ್ಸ್ ರಸ್ತೆಯಲ್ಲಿ ನಿರ್ಮಾಣವಾಗಲಿರುವ ಹೊಸ ಕಾಂಗ್ರೆಸ್ ಭವನದ ಶಂಕುಸ್ಥಾಪನೆ ಕಾರ್ಯಕ್ರಮಕ್ಕೆ ಆಹ್ವಾನ ನೀಡಲಿದ್ದಾರೆಂದು ಮೂಲಗಳು ತಿಳಿಸಿವೆ. ಇದಲ್ಲದೆ, ರಾಜ್ಯ ರಾಜಕೀಯ ಬೆಳವಣಿಗೆಗಳ ಬಗ್ಗೆಯೂ ಚರ್ಚಿಸುವ ಸಾಧ್ಯತೆಗಳಿವೆ ಎಂದು ಹೇಳಲಾಗುತ್ತಿದೆ. ಏತನ್ಮಧ್ಯೆ, ಕೇಂದ್ರ ಜಲಶಕ್ತಿ ಸಚಿವ ಸಿಆರ್ ಪಾಟೀಲ್ ಅವರನ್ನೂ ಭೇಟಿ ಮಾಡಲಿರುವ ಅವರು, ರಾಜ್ಯದ ನೀರಾವರಿ ಯೋಜನೆಗಳ ಕುರಿತು ಚರ್ಚಿಸಲಿದ್ದಾರೆ.ಮೇಕೆದಾಟು ಮತ್ತು ಕಳಸಾ ಬಂಡೂರಿ ಯೋಜನೆಗಳಿಗೆ ಅನುಮತಿ ಪಡೆಯುವಲ್ಲಿ ವಿಳಂಬ ಮತ್ತು 2024–25ರ ಬಜೆಟ್ನಲ್ಲಿ ಕೇಂದ್ರವು ಹಂಚಿಕೆ ಮಾಡಿದ್ದ ಭದ್ರಾ ಮೇಲ್ದಂಡ ಯೋಜನೆಗೆ 5,300 ಕೋಟಿ ರೂ. ಬಿಡುಗಡೆಯಲ್ಲಿ ವಿಳಂಬ ಕುರಿತು ಡಿಕೆ.ಶಿವಕುಮಾರ್ ಅವರು ಕೇಂದ್ರ ಸಚಿವರೊಂದಿಗೆ ಚರ್ಚೆ ನಡೆಸುವ ಸಾಧ್ಯತೆಗಳಿವೆ ಎಂದು ತಿಳಿದು ಬಂದಿದೆ.

## ಸ್ವಚ್ಛತಾ ಕಾರ್ಯಕ್ಕೆ ಮನವಿ

**ಮೂಡಿಗೆರೆ:** ಪಟ್ಟಣದ 4ನೇ ವಾರ್ಡ್‌ನ ನೆಹರೂ ರಸ್ತೆಯಲ್ಲಿ ಒಳಚರಂಡಿ ಕಟ್ಟಿಕೊಂಡಿದ್ದು, ದುರ್ನಾತ ಬೀರುತ್ತಿದೆ. ಕೂಡಲೇ ಇಲ್ಲಿ ಸ್ವಚ್ಛತಾ ಕಾರ್ಯ ಕೈಗೊಳ್ಳಬೇಕು ಎಂದು ಷಣ್ಮುಖಾನಂದ ಬಂಡಾರಿ ಹಾಗೂ ಬಳೆ ರಮೇಶ್ ಶೆಟ್ಟಿ ಪಟ್ಟಣ ಪಂಚಾಯಿತಿ ಅಧ್ಯಕ್ಷ ಹೊಸ್ಕೆರೆ ರಮೇಶ್‌ಗೆ ಮನವಿ ಸಲ್ಲಿಸಿದರು. ಈ ರಸ್ತೆಯಲ್ಲಿ ಡಿಸಿಸಿ ಬ್ಯಾಂಕ್, ಮಹಿಳಾ ಕಾಲೇಜು, ಟಿಎಪಿಸಿಎಂಎಸ್ ಕಚೇರಿ, ಹಳೇಮೂಡಿಗೆರೆ ಸಹಕಾರ ಸಂಘ ಸೇರಿದಂತೆ ಹಲವು ಸರ್ಕಾರಿ ಕಚೇರಿಗಳಿದ್ದು, ಇಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿ ದುರ್ವಾಸನೆಯಿಂದ ಮೂಗುಮುಚ್ಚಿಕೊಂಡು ಓಡಾಡುವ ಸ್ಥಿತಿ ನಿರ್ಮಾಣವಾಗಿದೆ. ಚರಂಡಿಯ ಇಕ್ಕೆಲಗಳಲ್ಲಿ ಮನೆಗಳಿದ್ದು, ಚರಂಡಿ ಕಟ್ಟಿಕೊಂಡಿರುವುದರಿಂದ ಸೊಳ್ಳೆಗಳ ಹಾವಳಿ ಹೆಚ್ಚಿದ್ದು, ಸ್ಥಳೀಯರಿಗೆ ಅನಾರೋಗ್ಯ ಭೀತಿ ಕಾಡುತ್ತಿದೆ. ಕೂಡಲೇ ಒಳಚರಂಡಿಯನ್ನು ಸ್ವಚ್ಛಗೊಳಿಸಬೇಕು ಎಂದು ಒತ್ತಾಯಿಸಿದರು.



# ಪಾಳು ಬಿದ್ದ ವೈದ್ಯರ ಗೃಹಗಳು

**ಹರಿಹರ:** ನಗರದ ದಾಮೋದರ ಮಂಜುನಾಥ ಪೈ ಸ್ಮಾರಕ ಸಾರ್ವಜನಿಕ ಆಸ್ಪತ್ರೆ ಹಿಂಭಾಗದಲ್ಲಿರುವ ವೈದ್ಯಾಧೀಕಾರಿಗಳ ವಸತಿಗೃಹಗಳು (ಹಳೆಯ ಕಟ್ಟಡ) ಅನೈತಿಕ ಚಟುವಟಿಕೆ ತಾಣವಾಗಿದೆ ಎಂದು ಸಾರ್ವಜನಿಕರು, ಚಿಕಿತ್ಸೆಗಾಗಿ ಬರುವ ರೋಗಿಗಳ ಬಂಧುಗಳು, ಅನೇಕ ಸಂಘ ಸಂಸ್ಥೆಗಳ ಮುಖಂಡರು ನಿತ್ಯ ಆರೋಪಿಸುತ್ತಿದ್ದಾರೆ.

**ಗಟ್ಟಿ ಮುಟ್ಟಾಗಿರುವ ಕಟ್ಟಡ, ಪಾಳು ಬಿದ್ದ ಮನೆಯಂತೆ ಗೋಚರಿಸುತ್ತಿದೆ:** ಸರ್ಕಾರದ ನಿಯಮದ ಪ್ರಕಾರ ಆಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸುವ ವೈದ್ಯರುಗಳಿಗಾಗಿಯೇ, ಸುಮಾರು 6 ವರ್ಷಗಳ ಹಿಂದೆ ಆಸ್ಪತ್ರೆಯ ಹಿಂಭಾಗದಲ್ಲಿ, ವಿದ್ಯಾನಗರಕ್ಕೆ ಹೋಗುವ 60 ಅಡಿ ರಸ್ತೆಗೆ ಹೊಂದಿಕೊಂಡಂತೆ ನಿರ್ಮಿಸಿರುವ ಈ ಕಟ್ಟಡಗಳು ಗಟ್ಟಿ ಮುಟ್ಟಾಗಿದ್ದು, ವಾಸಿಸಲು ಯೋಗ್ಯವಾಗಿದ್ದು. ವಾಸಿಸಬೇಕಾಗಿರುವ ವೈದ್ಯರುಗಳು ಈ ಮನೆಗಳಲ್ಲಿ ವಾಸವಾಗಿರದ ಕಾರಣ. ಸರ್ಕಾರವು ನಿರ್ಮಿಸಿರುವ ಮಹತ್ವಾಕಾಂಕ್ಷಿ ಯೋಜನೆಯ ಕಟ್ಟಡವು ಇಂದು ಹಾಳುಬಿದ್ದ ಮನೆಯಂತೆ ಗೋಚರಿಸುತ್ತಿವೆ. ಅಲ್ಲದೆ ಅನೈತಿಕ ಚಟುವಟಿಕೆಗಳ ತಾಣವಾಗಿ ಮಾರ್ಪಟ್ಟಿವೆ.






**ಜಿಲ್ಲಾ ವೈದ್ಯಾಧಿಕಾರಿಗಳೆ ಇತ್ತ ಕಡೆ ಗಮನಿಸಿ:** ಸರ್ಕಾರದ ಅನುದಾನದಲ್ಲಿ ಆಸ್ಪತ್ರೆಗೆ ಬರುವ ಎಲ್ಲಾ ತರಹದ ರೋಗಿಗಳ ಸೇವೆಯೇ–ಸರ್ಕಾರದ/ದೇವರ ಕೆಲಸವೆಂದು ಹಗಲು–ರಾತ್ರಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರುಗಳ ಅನುಕೂಲಕ್ಕಾಗಿ, ಅವರು ವಿಶ್ರಾಂತಿ ಪಡೆಯುವುದಕ್ಕಾಗಿ ನಿರ್ಮಿಸಿರುವ ಸುಸಜ್ಜಿತ, ವೈದ್ಯಾದೀಕಾರಿಗಳ ವಸತಿ ಗೃಹಗಳನ್ನು ಬಳಕೆ ಮಾಡಬೇಕಾಗಿರುವ ವೈದ್ಯಾಧಿಕಾರಿಗಳು, ಕಳೆದ 4 ವರ್ಷಗಳಿಂದ ಬಳಕೆ ಮಾಡದಿರುವ ಕಾರಣ, ವೈದ್ಯಾಧೀಕಾರಿಗಳ ವಸತಿ ಗೃಹಗಳು ಅನೈತಿಕ ಚಟುವಟಿಕೆಗಳ ತಾಣವಾಗಿವೆ. ಜಿಲ್ಲಾ ವೈದ್ಯಾಧಿಕಾರಿಗಳು ತಪ್ಪಿತಸ್ಥರ ಮೇಲೆ ಸೂಕ್ತ ಕ್ರಮಕೈಗೊಳ್ಳಬೇಕೆಂದು ಕೆಲ ಸಂಘಟನೆಗಳ ಮುಖಂಡರು ಆರೋಪಿಸುತ್ತಿದ್ದಾರೆ.

**ವಿಷ ಜಂತುಗಳ ಅಡಗುತಾಣ ವೈದ್ಯಾಧಿಕಾರಿಗಳ ವಸತಿ ಗೃಹಗಳು:** ಕಳೆದ ಸುಮಾರು 4 ವರ್ಷಗಳಿಂದ ವಸತಿ ಗೃಹಗಳು ಪಾಳು ಬಿದ್ದಿರುವುದರಿಂದ, ಮನೆಯ ಸುತ್ತ–ಮುತ್ತಲಿನ ಪ್ರದೇಶದಲ್ಲಿ ಜಾಲಿ ಗಿಡಗಂಟೆಗಳು, ವಿವಿಧ ಕಸಕಡ್ಡಿಗಳು ಬೃಹತ್ತಾಗಿ ಬೆಳೆದು ನಿಂತಿವೆ. ಹೀಗಾಗಿ ವೈದ್ಯಾಧಿಕಾರಿಗಳಿರಬೇಕಾಗಿದ್ದ ಮನೆಗಳಲ್ಲಿ ಇಂದು ಇಲಿ, ಹೆಗ್ಗಣ, ಬೆಕ್ಕು, ಹಾವು, ಮುಂಗುಸಿ, ಚೇಳು, ಜೆರಿಗಳ ಅಡಗುತಾಣವಾಗಿದೆ.

ಈ ಎಲ್ಲಾ ವಿಷಜಂತುಗಳು ನಿರ್ಭಯವಾಗಿ ಸಂತಾನೋತ್ಪತ್ತಿ ಮಾಡುತ್ತಿವೆ. ಹೀಗಾಗಿ ಆಸ್ಪತ್ರೆಯ ಹೊರಾಂಗಣದಲ್ಲಿ ರಾತ್ರಿ ಸಮಯದಲ್ಲಿ ಎಲ್ಲೆಂದರಲ್ಲಿ ನಿರ್ಭಯವಾಗಿ ಇಲಿ. ಹೆಗ್ಗಣಗಳು ಓಡಾಡುತ್ತಿರುವುದು. ಅವುಗಳನ್ನು ಬೇಟೆಯಾಡಲು ಬರುವ ಬೆಕ್ಕು, ನಾಯಿಗಳು ಕಾಣುತ್ತಿವೆ. ರಾತ್ರಿ ಸಮಯದಲ್ಲಿ ಆಸ್ಪತ್ರೆಯ ಹೊರಾಂಗಣದಲ್ಲಿ ರೋಗಿಗಳು, ಅವರ ಸಂಭಂದಿಕರು ಓಡಾಡಲು ಭಯಪಡುತ್ತಿದ್ದಾರೆ.

4 ಜಿಲ್ಲೆಗಳ ರೋಗಿಗಳು ಇಲ್ಲಿಗೆ ಬರುತ್ತಾರೆ: ಕರ್ನಾಟಕದ ಮಧ್ಯ ಸ್ಥಳವಾಗಿರುವ ಹರಿಹರ ನಗರದಲ್ಲಿರುವ ಈ ಆಸ್ಪತ್ರೆಗೆ, ಗಡಿ ಅಂಚಿನಲ್ಲಿರುವ ಅತ್ತ ಹಾವೇರಿ ಜಿಲ್ಲೆಯ ಕೊಡಿಯಾಲಹೊಸಪೇಟೆ (ಕುಮಾರಪಟ್ಟಣ), ನಲವಾಗಲ, ಕವಲೆತ್ತು, ಮಾಕನೂರು, ಐರಣಿ, ಹಿರೇಬಿದರಿ, ಕರೂರು, ಹೂಲಿಕಟ್ಟಿ, ನದಿಹರಳಹಳ್ಳಿ ಗ್ರಾಮಗಳ ರೋಗಿಗಳು,

ವಿಜಯನಗರ ಜಿಲ್ಲೆಯ ಅನೇಕ ಗ್ರಾಮಗಳ ರೋಗಿಗಳು, ಶಿವಮೊಗ್ಗ, ದಾವಣಗೆರೆ ಜಿಲ್ಲೆಯ ಸಾವಿರಾರು ರೋಗಿಗಳು ನಿತ್ಯ ಈ ಆಸ್ಪತ್ರೆಗೆ ಸಾಕಷ್ಟು ಸಂಖ್ಯೆಯಲ್ಲಿ ಬರುತ್ತಿದ್ದಾರೆ. ಅವರಿಗೆಲ್ಲಾ ಈ ಆಸ್ಪತ್ರೆಯಲ್ಲಿ ಉತ್ತಮ ಚಿಕಿತ್ಸೆಯನ್ನು ವೈದ್ಯರುಗಳು ನೀಡುತ್ತಿದ್ದಾರೆಂದು ಅನೇಕ ರೋಗಿಗಳು, ಮತ್ತವರ ಸಂಭಂದಿಗಳು ಪತ್ರಿಕೆಗೆ ತಿಳಿಸುತ್ತಿದ್ದಾರೆ. ಹೀಗಿದ್ದಾಗೂ ಈ ಆಸ್ಪತ್ರೆಗೆ ಕಪ್ಪು ಚುಕ್ಕೆಯಂತಿರುವ, ಆಸ್ಪತ್ರೆಯ ಹಿಂಭಾಗದಲ್ಲಿ ಹಾಳು ಬಿದ್ದಿರುವ, ಬಳಕೆಗೆ ಯೋಗ್ಯವಿರುವ ವೈದ್ಯಾಧಿಕಾರಿಗಳ ವಸತಿ ಗೃಹಗಳನ್ನು ಸ್ವಚ್ಛಗೊಳಿಸಿ, ಬಳಸಲು ಸಿದ್ಧಗೊಳಿಸಬೇಕೆಂದು ಸಾರ್ವಜನಿಕರು, ರೋಗಿಗಳು ಸರ್ಕಾರಕ್ಕೆ ಒತ್ತಾಯಿಸುತ್ತಿದ್ದಾರೆ.

ನಂ.1 ಆಸ್ಪತ್ರೆಗೆ ಕಳಂಕದಂತಿರುವ ಕಟ್ಟಡಗಳನ್ನು ತಕ್ಷಣವೇ ಸ್ವಚ್ಛಗೊಳಿಸಿ: ಆಸ್ಪತ್ರೆಗೆ ಬರುವ ಎಲ್ಲಾ ತರಹದ ರೋಗಿಗಳಿಗೆ ಹಗಲು–ರಾತ್ರಿಯನ್ನದೆ ಉತ್ತಮ ಚಿಕಿತ್ಸೆ ನೀಡುವುದರೊಂದಿಗೆ, 3 ಭಾರಿ ಅತ್ಯುತ್ತಮ ಆಸ್ಪತ್ರೆ ಎಂಬ ಹೆಗ್ಗಳಿಕೆ, ಪ್ರಶಸ್ತಿಗೆ ಹೆಸರುವಾಸಿಯಾಗಿರುವ ಹರಿಹರ ದಾಮೋದರ ಮಂಜುನಾಥ ಪೈ ಸ್ಮಾರಕ ಸಾರ್ವಜನಿಕ ಆಸ್ಪತ್ರೆ ಹೆಸರಿಗೆ, ಕಳಂಕ ಪ್ರಾಯವಾಗಿರುವ ಆಸ್ಪತ್ರೆಯ ಆವರಣದಲ್ಲಿನ ಪಾಳು ಬಿದ್ದಿರುವ ವೈದ್ಯಾಧಿಕಾರಿಗಳ ವಸತಿ ಗೃಹಗಳನ್ನು ಇನ್ನಾದರೂ ಸ್ವಚ್ಛಗೊಳಿಸಿ, ವೈದ್ಯ ಸಿಬ್ಬಂದಿಗಳ ಉಪಯೋಗಕ್ಕೆ ನೀಡುತ್ತಾರೋ, ಇಲ್ಲವೂ ಕಾದು ನೋಡಬೇಕಾಗಿದೆ.

**ಹೀಗಂತಾರೆ ಆಡಳಿತ ವೈದ್ಯಾಧಿಕಾರಿ:** ಕಳೆದ ಹಲವಾರು ವರ್ಷಗಳಿಂದ ಉಪಯೋಗಕ್ಕೆ ಯೋಗ್ಯವಲ್ಲದ ಈ ಕಟ್ಟಡಗಳನ್ನು ನೆಲಸಮಗೊಳಿಸಲು, ಮೇಲಾಧಿಕಾರಿಗಳಿಗೆ ಪತ್ರ ಬರೆಯಲಾಗಿದ್ದು. ನಿರುಪಯುಕ್ತ ಕಟ್ಟಡಗಳನ್ನು ನೆಲಸಮಗೊಳಿಸಲು ಅಧಿಕಾರಿಗಳು ಸದ್ಯದಲ್ಲಿಯೇ ಮುಂದಾಗಬಹುದೆಂದು, ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ.ಎಲ್. ಹನುಮಾನಾಯ್ಕ ತಿಳಿಸಿದರು.

## ಹೆಚ್ಚಿದ ಕಾಡ್ಗಿಚ್ಚು ಆಕಸ್ಮಿಕ ಬೆಂಕಿ ಪ್ರಕರಣ



**ಚಿಕ್ಕಮಗಳೂರು:** ಬೇಸಿಗೆಗಾಲ ಆರಂಭವಾದ ಬೆನ್ನಲ್ಲೇ ಕಾಡ್ಗಿಚ್ಚು, ಆಕಸ್ಮಿಕ ಬೆಂಕಿ ಪ್ರಕರಣಗಳು ಫೆಬ್ರವರಿ ತಿಂಗಳಿನಲ್ಲೇ ಹೆಚ್ಚಾಗಿ ಸಂಭವಿಸುತ್ತಿವೆ.

ಜಿಲ್ಲೆಯ ಮೂಡಿಗೆರೆ ತಾಲೂಕಿನ ಬಣಕಲ್ ಪಟ್ಟಣದ ಪದವಿ ಪೂರ್ವ ಕಾಲೇಜಿನ ಬಳಿ ಆಕಸ್ಮಿಕ ಬೆಂಕಿ ತಗುಲಿ ಒಣಗಿ ನಿಂತಿದ್ದ ಹುಲ್ಲು ಹಾಗೂ ಕುರುಚಲು ಗಿಡಗಳು ಸುಟ್ಟು ಕರಕಲಾಗಿವೆ. ಬೆಂಕಿ ಹೊತ್ತಿ ಉರಿಯುವ ವಿಷಯ ತಿಳಿಯುತ್ತಿದ್ದಂತೆ ಸ್ಥಳೀಯರು ಬೆಂಕಿ ನಂದಿಸಲು ಪ್ರಯತ್ನಿಸಿದ್ದಾರೆ.

ಈ ವೇಳೆ ಕಾಲೇಜಿನ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಕೊಡಗಳಲ್ಲಿ ನೀರು ತಂದು ಬೆಂಕಿ ನಂದಿಸುವ ಪ್ರಯತ್ನ ಮಾಡಿದ್ದಾರೆ. ಅಷ್ಟರಲ್ಲಿ ಸ್ಥಳಕ್ಕೆ ಆಗಮಿಸಿದ ಮೂಡಿಗೆರೆ ಅಗ್ನಿಶಾಮಕ ದಳದ ಸಿಬ್ಬಂದಿಗಳು ಬೆಂಕಿ ನಂದಿಸಿದ್ದಾರೆ. ಕಳೆದ ಒಂದು ತಿಂಗಳಿಂದ ನಿರಂತರವಾಗಿ ಚಾರ್ಮಾಡಿ ಘಾಟ್ ಅರಣ್ಯ ಪ್ರದೇಶ ಸೇರಿದಂತೆ ಚಂದ್ರದ್ರೋಣ ಪರ್ವತ ಶ್ರೇಣಿಯಲ್ಲಿ ಆಕಸ್ಮಿಕ ಬೆಂಕಿ ಕಾಣಿಸಿಕೊಂಡಿದ್ದ ಪರಿಣಾಮ ಅಪಾರ ಪ್ರಮಾಣದ ಶೋಲಾ ಅರಣ್ಯ ನಾಶಗೊಂಡಿತ್ತು. ಇದರ ಜೊತೆಗೆ ಜಿಲ್ಲೆಯ ವಿವಿಧ ಭಾಗಗಳಲ್ಲಿ ಆಕಸ್ಮಿಕ ಬೆಂಕಿ ಕಾಣಿಸಿಕೊಂಡು ಕಾಫಿ, ಅಡಿಕೆ ತೋಟಗಳು ನಾಶಗೊಂಡಿದ್ದವು.

ಬಿಸಿಲಿನ ತಾಪ ದಿನೇ ದಿನೇ ಹೆಚ್ಚಾಗುತ್ತಿರುವುದರಿಂದ ಮತ್ತಷ್ಟು ಆಕಸ್ಮಿಕ ಬೆಂಕಿ ಪ್ರಕರಣಗಳು ಹೆಚ್ಚಾಗುವ ಸಾಧ್ಯತೆ ಎದುರಾಗಿದೆ.

## ಶಾಂತಿಯುತ ಚುನಾವಣೆ : ಪೊಲೀಸ್ ಇಲಾಖೆಗೆ ಅಭಿನಂದನೆ

**ಚಿಕ್ಕಮಗಳೂರು:** ಯಾವುದೇ ರೀತಿಯ ಅಹಿತಕರ ಘಟನೆಗೆ ಆಸ್ಪದ ಆಗದ ರೀತಿಯಲ್ಲಿ ಕಾನೂನು ಸುವ್ಯವಸ್ಥೆಯನ್ನು ಕಾಪಾಡಿ ಶಾಂತಿಯುತ ಚುನಾವಣೆ ನಡೆಯಲು ಕಾರಣೀಭೂತರಾದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಹಾಗೂ ಇಲಾಖೆಗೆ ತುಂಬು ಹೃದಯದ ಅಭಿನಂದನೆ ಸಲ್ಲಿಸುವುದಾಗಿ ಕಾಂಗ್ರೆಸ್ ಮುಖಂಡ ಸಿ.ಎನ್. ಅಕ್ಮಲ್ ಹೇಳಿದರು.

ಚುನಾವಣೆ ಬಳಿಕ ತಮ್ಮ ತಂಡ ಅಭೂತಪೂರ್ವ ಜಯಗಳಿಸಿದ ಹಿನ್ನೆಲೆಯಲ್ಲಿ ಅಂಜುಮಾನ್ ಇಸ್ಲಾಮಿಯ ಸಂಘಟನೆಗೆ ಶಕ್ತಿ ಬಂದಿದೆ, ಈ ಮೂಲಕ ಜನಪರ ಕಾರ್ಯಗಳನ್ನು ಕೈಗೊಂಡು ಮತದಾರರ ವಿಶ್ವಾಸ ಗಳಿಸಲು ಬದ್ಧವಾಗಿರುವುದಾಗಿ ತಿಳಿಸಿದರು.

17 ಜನರ ತಂಡದಲ್ಲಿ ಸಂಘಟನೆಯ 14 ಅಭ್ಯರ್ಥಿಗಳು ಜಯಗಳಿಸಿದ್ದು, ಅವರಿಗೆ ಅಭಿನಂದಿಸುತ್ತೇನೆ ಸಂಘಟನೆಗೆ ಮೊಟ್ಟ ಮೊದಲ ಬಾರಿಗೆ ಗೆಲುವು ಇತಿಹಾಸ ನಿರ್ಮಿಸಿದೆ. ಸಮುದಾಯದಲ್ಲಿ ಒಂದು ಎರಡು ಸ್ಥಾನ ಗೆಲ್ಲುತ್ತಿದ್ದೆವು, ಈ ಬಾರಿ 16 ಜನರ ಗೆಲುವು ಒಳ್ಳೆಯ ಆಡಳಿತ ನೀಡಲು ಸಹಕಾರಿಯಾಗಲಿದೆ ಎಂದರು. ತಮ್ಮ ಅಧಿಕಾರವಧಿ ಮುಂದಿನ ಮೂರು ವರ್ಷ ಮುಗಿಯುವುದರೊಳಗೆ ಸದಸ್ಯರಿಗೆ ನೀಡಿದ ಭರವಸೆಗಳನ್ನು ಈಡೇರಿಸಲು ಕಟಿಬದ್ಧವಾಗಿದ್ದೇವೆ, ರಾಜಕೀಯ ಶಡ್ಯಂತ್ರ ಮಾಡುವವರಿಗೆ ಜನತೆ ಈ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಿದ್ದಾರೆ. ಇದು ಸತ್ಯಕ್ಕೆ ಸಿಕ್ಕಿರುವ ಜಯ ಎಂದು ತಿಳಿಸಿದರು. ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಪೊಲೀಸ್ ಮುಖ್ಯಾಧಿಕಾರಿಗಳನ್ನು ಭೇಟಿಮಾಡಿ ಇಲಾಖೆಯ ಸಹಕಾರ ಕೋರಿದ್ದೇವೆ. ಹಿಂದೂ–ಮುಸ್ಲಿಂ ಎಂಬ ಭೇದಭಾವ ಇರದೆ ಸರ್ವರೂ ಒಗ್ಗಟ್ಟಿನಿಂದ ಜೀವನ ನಡೆಸಲು ಬದ್ಧವಾಗಿರುವುದಾಗಿ ತಿಳಿಸಿದರು.



ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜಮೀರ್ ಅಹಮದ್ ಮಾತನಾಡಿ, ಈ ಚುನಾವಣೆ ಬಹಾಳ ಪೈಪೋಟಿ, ಜಿದ್ದಾಜಿದ್ದಿ ಇತ್ತು, ಅಂಜುಮಾನ್ ಇಸ್ಲಾಮಿಯ ವೆಲ್‌ಫೇರ್ ಗ್ರೂಪ್ ರಚಿಸಿಕೊಂಡು ಸಿ.ಎನ್. ಅಕ್ಮಲ್, ಶಾಹಿದ್, ತಾವೂ ಸೇರಿದಂತೆ ಚುನಾವಣೆ ಎದುರಿಸಿದ್ದು ಬಹುಮತ ನೀಡಿ ನಮ್ಮ ತಂಡಕ್ಕೆ ಆಶೀರ್ವಧಿಸಿದ ಮತದಾರರಿಗೆ ಕೃತಜ್ಞತೆ ಸಲ್ಲಿಸಿದರು.

## ಮಾ.1 ರಿಂದ 9 ರವರೆಗೆ 51 ನೇ ವರ್ಷದ ವನಕಲ್ಲು ಮಲ್ಲೇಶ್ವರ ಜಾತ್ರಾ ಮಹೋತ್ಸವ

**ಚಿತ್ರದುರ್ಗ:** ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿರುವ ವನಕಲ್ಲು ಮಲ್ಲೇಶ್ವರ ಮಹಾಸಂಸ್ಥಾನ ಮಠದಲ್ಲಿ ಮಾ.1 ರಿಂದ 9 ರವರೆಗೆ 51 ನೇ ವರ್ಷದ ವನಕಲ್ಲು ಮಲ್ಲೇಶ್ವರ ಜಾತ್ರಾ ಮಹೋತ್ಸವ, ವನಕಲ್ಲು ಶ್ರೀ ಪ್ರಶಸ್ತಿ, ವಿವಿದ ಪ್ರಶಸ್ತಿ ಪ್ರದಾನ, ಸಂಸ್ಕೃತೋತ್ಸವ, ರಾಜ್ಯ ಮಟ್ಟದ ಜಾನಪದೋತ್ಸವ, ಕವಿ ಕಾವ್ಯ ಸಮ್ಮೇಳನ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ ನಡೆಯಲಿದೆ ಎಂದು ಬಸವ ರಮಾನಂದ ಮಹಾಸ್ವಾಮಿ ತಿಳಿಸಿದರು.

ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು 1,2,5 ರಂದು ಯುವಕ–ಯುವತಿಯರು ಹಾಗೂ ಮಕ್ಕಳಿಗೆ ಕ್ರೀಡೆಯನ್ನು ಏರ್ಪಡಿಸಲಾಗಿದೆ. 6, 7 ರಂದು ದನಗಳ ಜಾತ್ರೆ, 8 ರಂದು ಜನಪದೋತ್ಸವ, ಕವಿ ಕಾವ್ಯ ಸಮ್ಮೇಳನ, ರಾಜ್ಯದ 36 ಜಿಲ್ಲೆಗಳಿಂದ 60 ಕ್ಕು ಹೆಚ್ಚು ಕವಿಗಳು ಭಾಗವಹಿಸಿ ಕವನ ವಾಚಿಸುವರು. 9 ರಂದು ಬ್ರಹ್ಮರಥೋತ್ಸವ, ಶಾಲಾ ಶಿಕ್ಷಕರುಗಳಿಂದ ಕುರುಕ್ಷೇತ್ರ ನಾಟಕ ಪ್ರದರ್ಶನಗೊಳ್ಳಲಿದೆ. ವನಕಲ್ಲು ಪ್ರಶಸ್ತಿಯನ್ನು ಡಾ. ಎಂ.ಆರ್.ಸೀತಾರಾಮ್ ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿಗೆ ಜಗಜ್ಯೋತಿ ಪ್ರಶಸ್ತಿ, ಡಾ.ಸಿ.ನಾಗಭೂಷಣ್‌ರವರಿಗೆ ವಿಶ್ವಜ–ಙ್ಯೋತಿ ಪ್ರಶಸ್ತಿ, ಡಾ.ಸಿ.ನಂಜುಂಡಯ್ಯನವರಿಗೆ ಬಾಲಗಂಗಾಧರನಾಥ ಪ್ರಶಸ್ತಿ, ರಜತಾ ಶಿವಕುಮಾರ್‌ರವರಿಗೆ ಶರಣಶ್ರೀ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಬಸವ ರಮಾನಂದ ಮಹಾಸ್ವಾಮಿ ಹೇಳಿದರು.



ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷ ಡಾ.ದೊಡ್ಡಮಲ್ಲಯ್ಯ ಮಾತನಾಡಿ ವನಕಲ್ಲು ಮಲ್ಲೇಶ್ವರ ಮಹಾಸಂಸ್ಥಾನ ಮಠದಲ್ಲಿ ಒಂಬತ್ತು ದಿನಗಳ ಕಾಲ ನಡೆಯುವ ಜಾತ್ರಾ ಮಹೋತ್ಸವ, ಪ್ರಶಸ್ತಿ ಪ್ರದಾನ, ಸಂಸ್ಕೃತೋತ್ಸವ, ರಾಜ್ಯ ಮಟ್ಟದ ಜಾನಪದೋತ್ಸವ, ಕವಿ ಕಾವ್ಯ ಸಮ್ಮೇಳನದಿಂದ ನಮ್ಮ ನಾಡಿನ ಸಂಸ್ಕೃತಿಯನ್ನು ಉಳಿಸಿ ಬೆಳೆಸಿದಂತಾಗುತ್ತದೆ. ಜೊತೆಗೆ ಕವಿಗಳು ತಮ್ಮಲ್ಲಿರುವ ಪ್ರತಿಭೆಯನ್ನು ಹೊರ ಹೊಮ್ಮಿಸಲು ವೇದಿಕೆ ಸೃಷ್ಟಿಮಾಡಿದಂತಾಗುತ್ತದೆ ಎಂದರು.

ಯುವ ವಕೀಲರುಗಳಾದ ಓ.ಪ್ರತಾಪ್‌ಜೋಗಿ, ಸೌಮ್ಯ, ಪುಷ್ಪ, ರಮೇಶ್, ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದ ಜಿಲ್ಲಾಧ್ಯಕ್ಷ ಎಸ್.ಲಕ್ಷ್ಮಿಕಾಂತ್, ದಲಿತ ಮುಖಂಡ ಬಿ.ರಾಜಪ್ಪ, ಗ್ಯಾರೆಂಟಿ ಅನುಷ್ಠಾನಗಳ ಸಮಿತಿ ಜಿಲ್ಲಾಧ್ಯಕ್ಷ ಆರ್.ಶಿವಣ್ಣ, ವಿಜಯಕುಮಾರ್, ನಾಗರಾಜ್, ಕಣಿವೆಮಾರಮ್ಮ ಸಂಘದ ಅಧ್ಯಕ್ಷ ತಿಪ್ಪೇಸ್ವಾಮಿ, ಮೂರ್ತಿ ಇವರುಗಳು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**